ಸಂಪುಟ: 04 ಸಂಚಿಕೆ: 75 ಪುಟಗಳು: 08 ಬುಧವಾರ 29 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು

ನಿಮ್ಮ ಪ್ರಯತ್ನವಿಲ್ಲದೆ ನೀವು ಯಶಸ್ವಿಗಳಾಗಲು ಸಾಧ್ಯವಿಲ್ಲ. ನಿಮ್ಮ ಸಂಪೂರ್ಣ ಪ್ರಯತ್ನ ನಿಮ್ಮ ಕೆಲಸದಲ್ಲಿದ್ದರೆ ನೀವು ವಿಫಲರಾಗಲು ಸಾಧ್ಯವಿಲ್ಲ

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಎಲ್ಲಾರೂ ಸೇರಿ ಪ್ರಜ್ವಲ್‌ನನ್ನು ಹುತಾತ್ಮನಾಗಿ ಮಾಡುತ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ಹಾಸನ ಸಂಸದ ಪ್ರಜ್ವಲ್ ರೇವಣ್ಣಗೆ ಸಂಬಂಧಿಸಿದ ಅಶ್ಲೀಲ ವಿಡಿಯೋ ಪ್ರಕರಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದ್ದು, ರಾಜಕೀಯ ಕೆಸರೆರಚಾಟ ತಾರ್ಕಿಕ ಅಂತ್ಯ ಕಾಣುವುದು ದೂರದ ಮಾತಾಗಿದೆ. ಇನ್ನೂ ಈ ಕುರಿತು ಮಾತನಾಡಿರುವ ವಾಟಾಳ್ ನಾಗರಾಜ್ ಎಲ್ಲಾರೂ ಸೇರಿ ಪ್ರಜ್ವಲ್‌ನನ್ನು ಹುತಾತ್ಮನಾಗಿ ಮಾಡಲು ಹೊರಟಿದ್ದಾರೆ ಎಂದು ಕಿಡಿಕಾರಿದ್ದಾರೆ. ದಕ್ಷಿಣ ಪದವೀಧರ ಕ್ಷೇತ್ರದಿಂದ ವಿಧಾನ ಪರಿಷತ್ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ವಾಟಾಳ್ ನಾಗರಾಜ್, ಹಾಸನದ ಪ್ರೆಸ್ ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು. ಈ ವೇಳೆ ಹಲವು ವಿಚಾರಗಳನ್ನು ಹಲವು ಮಾಧ್ಯಮಗಳ ಜೊತೆ ಹಂಚಿಕೊಂಡಿದ್ದಾರೆ. ಮೊದಲಿಗೆ ಪ್ರಜ್ವಲ್ ರೇವಣ್ಣ ಕುರಿತಾಗಿ ಕೇಳಿದಾಗ ಮಾತನಾಡಲು ನಿರಾಕರಿಸಿದ ವಾಟಾಳ್, ಆ ಪ್ರಕರಣದ ಬಗ್ಗೆ ಮಾತಾಡುವುದೇ ಬೇಡ, ಅದು ಒಂದು ಕಡೆಯಿಂದ ಶುರುವಾಗಿ ಮತ್ಯಾವುದೋ ಕಡೆಗೆ ಹೋಗುತ್ತದೆ. ಒಂದು ಪದ ಹೇಳಿದಾಗ ಅದಕ್ಕೆ ಮತ್ತೊಂದು ಸೇರಿಕೊಳ್ಳುತ್ತದೆ, ಎಲ್ಲಾ ಸೇರಿ ಪ್ರಜ್ವಲ್‌ನನ್ನು ಹುತಾತ್ಮ ಮಾಡಲು ಹೊರಟಿದ್ದಾರೆ ಎಂದು ಕಿಡಿಕಾರಿದ್ದಾರೆ.

ರಘುಪತಿ ಜೊತೆ ಗುರುತಿಸಿಕೊಂಡ ನಾಯಕರಿಗೆ ಬಿಜೆಪಿ ನೋಟಿಸ್

• ಉದಯವಾಹಿನಿ, ಉಡುಪಿ

ವಿಧಾನ ಪರಿಷತ್ ಟಿಕೆಟ್ ನೀಡಿಲ್ಲವೆಂದು ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿದ್ದ ನೈರುತ್ಯ ಪದವೀಧರ ಕ್ಷೇತ್ರದ ಅಭ್ಯರ್ಥಿಯಾಗಿರುವ ರಘುಪತಿ ಭಟ್ ಜೊತೆ ಗುರುತಿಸಿಕೊಂಡಿದ್ದ ನಾಲ್ವರು ನಾಯಕರಿಗೆ ಇದೀಗ ಬಿಜೆಪಿ ನೋಟಿಸ್ ನೀಡಿದೆ. ಬಿಜೆಪಿಯ ನಾಲ್ವರು ಪದಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಂಡಿದ್ದು, ಉಡುಪಿ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಮಹೇಶ ಠಾಕೂರ್, ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಉಪೇಂದ್ರ ನಾಯಕ್, ಬಿಜೆಪಿ ಯುವ ಮೋರ್ಚ ಉಪಾಧ್ಯಕ್ಷ ರೋಶನ್ ಶೆಟ್ಟಿ ಹಾಗೂ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಜುಲೈಗೆ ನೋಟಿಸ್ ನೀಡಿದೆ. ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಅಕ್ಷಮ್ಯ ಅಪರಾಧ. ಪಕ್ಷದ ಉಲ್ಲಂಘಿಸಿದ್ದಕ್ಕೆ 48 ಗಂಟೆಗಳ ಒಳಗೆ ಉಡುಪಿ ಜಿಲ್ಲಾ ಬಿಜೆಪಿ ಅಧ್ಯಕ್ಷರ ಮುಂದೆ ಸ್ಪಷ್ಟೀಕರಣ ನೀಡುವಂತೆ ನೋಟಿಸ್ ಜಾರಿ ಮಾಡಿದೆ. ರಘುಪತಿ ಭಟ್ ಜೊತೆ ಗುರುತಿಸಿಕೊಂಡ ಬಿಜೆಪಿ ನಾಯಕರಿಗೆ ನೋಟಿಸ್ ನೀಡಲಾಗಿದೆ. ರಘುಪತಿ ಭಟ್ ನೈರುತ್ಯ ಪದವೀಧರ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿದ್ದಾರೆ.

ಮಧು ಬಂಗಾರಪ್ಪ ಕಟ್ಟಿಂಗ್‌ಗೆ ಬಿಜೆಪಿ ಯುವ ಮೋರ್ಚಾ ಹಣ

• ಉದಯವಾಹಿನಿ, ಬೆಂಗಳೂರು

ಸಚಿವ ಮಧು ಬಂಗಾರಪ್ಪ ಕಟ್ಟಿಂಗ್ ಗೆ ಬಿಜೆಪಿ ಯುವ ಮೋರ್ಚಾದಿಂದ ಹಣ ನೀಡಲಾಗುವುದು ಎಂದು ಬಿ.ವೈ ವಿಜಯೇಂದ್ರ ಹೇಳಿದ್ದಾರೆ. ವಿಜಯೇಂದ್ರ ಫ್ರೀ ಇದ್ದರೆ ಬಂದು ನನ್ನ ಕಟ್ಟಿಂಗ್ ಮಾಡಲಿ ಎಂಬ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ಹೇಳಿಕೆಗೆ ಬಿ.ವೈ ವಿಜಯೇಂದ್ರ ಟಾಂಗ್ ನೀಡಿದ್ದಾರೆ. ಮಧು ಬಂಗಾರಪ್ಪ ಹೇರ್ ಸ್ಟೈಲ್ ಬಗ್ಗೆ ಶಿಕ್ಷಕರು ದಾವಣಗೆರೆಯಲ್ಲಿ ಹೇಳಿದ್ದನ್ನು, ನಾನು ಹೇಳಿದ್ದೇನೆ. ಮಧು ಬಂಗಾರಪ್ಪಗೆ ಹಣದ ಸಮಸ್ಯೆ ಇದ್ರೆ ಹೇಳಲಿ, ಮಧು ಬಂಗಾರಪ್ಪ ಕಟ್ಟಿಂಗ್ಗಾಗಿ ತಿಂಗಳಿಗೆ ಇಷ್ಟು ಹಣ ಕೊಡ್ತೇವೆ. ಕಟ್ಟಿಂಗ್ ಮಾಡಿ ಶಿಸ್ತಿನಿಂದ ಇರಲಿ ಎಂದು ಬಿ.ವೈ ವಿಜಯೇಂದ್ರ ಟಾಂಗ್ ನೀಡಿದ್ದಾರೆ.

ಮಂಗಳೂರಿನಲ್ಲಿ ನಡು ರಸ್ತೆಯಲ್ಲೇ ನಮಾಜ್: ಸರ್ಕಾರ ಸತ್ತಿದೆಯೋ

• ಉದಯವಾಹಿನಿ, ಉಡುಪಿ

ಮಂಗಳೂರಿನ ಕಂಕನಾಡಿಯಲ್ಲಿ ನಡು ರಸ್ತೆಯಲ್ಲೇ ನಮಾಜ್ ಮಾಡಿರುವ ಘಟನೆ ಕಳೆದ ಶುಕ್ರವಾರ ನಡೆದಿದ್ದು, ಈ ವಿಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ. ಈ ಬಗ್ಗೆ ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ಪ್ರತಿಕ್ರಿಯಿಸಿದ್ದು ರಾಜ್ಯ ಸರ್ಕಾರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮಂಗಳೂರು ಹಿಂದುತ್ವ ವೀರರ ಭೂಮಿ. ರಸ್ತೆಯಲ್ಲಿ ನಮಾಜ್ ಮಾಡಲು ದುಷ್ಟ ಶಕ್ತಿಗಳ ಯಶಸ್ವಿಯಾಗಿದ್ದು ನೋವಾಗಿದೆ. ಕರ್ನಾಟಕದಲ್ಲಿ ಮುಖ್ಯಮಂತ್ರಿಗಳು, ಗೃಹ ಸಚಿವರು, ಸರ್ಕಾರ ಸತ್ತಿದೆಯೋ, ಬದುಕಿದೆಯೋ ಎಂದು ಪ್ರಶ್ನಿಸಿದ್ದಾರೆ. ಒಬ್ಬ ಇದು ನಮ್ಮ ಸರ್ಕಾರ ಟಿಪ್ಪು ಸುಲ್ತಾನ್‌ನ ರಾಜ್ಯ ಅಂತಾನೇ, ಮುಸಲ್ಮಾನ್ ಗೂಂಡಾ, ರಾಷ್ಟ್ರದ್ರೋಹಿ ಈ ಮೆಸೇಜ್ ಮಾಡಿದ್ದಾನೆ. ಬಿಟ್ಟರೆ ಹಿಂದೂಗಳ ಮನೆಗೆ ಬಂದು ನಮಾಜ್ ಮಾಡುತ್ತಾರೆ. ರಾಜ್ಯದಲ್ಲಿ ಪೊಲೀಸ್ ಇಲಾಖೆ ಬದುಕಿದೆಯೋ ಸತ್ತಿದೆಯೋ ಗೊತ್ತಾಗುತ್ತಿಲ್ಲ. ಚೆನ್ನಗಿರಿಯಲ್ಲಿ ನಿರಪರಾಧಿ ಪೊಲೀಸ್ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಲಾಯಿತು.

ಕೈ ಟಿಕೆಟ್ ; ಪರಿಷತ್ ಫೈಟ್

ಸಿಎಂ, ಡಿಸಿಎಂ ವಿರುದ್ಧ ಪರಂ ಗರಂ

ಅಭ್ಯರ್ಥಿ ಆಯ್ಕೆಗೆ ಮೂಡದ ಒಮ್ಮತ

ಯತೀಂದ್ರ, ಭೋಸರಾಜು ಪಕ್ಕಾ

ವಿಧಾನಪರಿಷತ್ ಸದಸ್ಯತ್ವಕ್ಕಾಗಿ ಲಾಬಿ

ವಿಧಾನಪರಿಷತ್‌ನ ಸದಸ್ಯ ಸ್ಥಾನಕ್ಕಾಗಿ ಮಾಜಿ ಸಚಿವ ರಮೇಶ್‌ಕುಮಾರ್ ಲಾಬಿ ನಡೆಸಿದ್ದಾರೆ. ಕೋಲಾರ ಜಿಲ್ಲೆಯ ಶಾಸಕರಾದ ಪ್ರದೀಪ್ ಈಶ್ವರ್, ಕೊತ್ತನೂರು ಮಂಜುನಾಥ್, ವಿಧಾನಪರಿಷತ್ ಸದಸ್ಯರಾದ ನಜೀರ್ ಅಹಮದ್, ಅನಿಲ್‌ಕುಮಾರ್ ಅವರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮನೆಗೆ ಭೇಟಿ ನೀಡಿದ ನಿಯೋಗ ರಮೇಶ್ ಕುಮಾರ್ ಅವರನ್ನು ವಿಧಾನಪರಿಷತ್ ಸದಸ್ಯರನ್ನಾಗಿ ನೇಮಿಸಬೇಕು ಎಂದು ಒತ್ತಡ ಹೇರಿದೆ. ವಿಧಾನಸಭಾ ಚುನಾವಣೆಯಲ್ಲಿ ಸೋಲು ಕಂಡಿದ್ದರೂ ರಮೇಶ್‌ಕುಮಾರ್ ಜಿಲ್ಲಾ ರಾಜಕಾರಣದಲ್ಲಿ ಪ್ರಬಲ ಹಿಡಿತ ಹೊಂದಿದ್ದಾರೆ. ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳ ಆಯ್ಕೆ ಸಂಬಂಧಪಟ್ಟಂತೆ ಗಂಭೀರ ಚರ್ಚೆಗಳು ನಡೆಯುವ ವೇಳೆಯಲ್ಲಿ ಸಚಿವ ಕೆ.ಎಚ್.ಮುನಿಯಪ್ಪ ಅವರಿಗೆ ಪ್ರತಿತಂತ್ರ ರೂಪಿಸಿ ರಮೇಶ್ ಕುಮಾರ್ ಯಶಸ್ವಿಯಾಗಿದ್ದರು. ಮುನಿಯಪ್ಪ ತಮ್ಮ ಅಳಿಯ ದೊಡ್ಡ ಪೆದ್ದಣ್ಣ ಅವರಿಗೆ ಟಿಕೆಟ್ ಕೊಡಿಸಲು ನಡೆಸುತ್ತಿದ್ದ ಲಾಬಿಗೆ ಎದುರೇಟು ನೀಡಿದ್ದ ರಮೇಶ್‌ಕುಮಾರ್, ಶಾಸಕರು ಹಾಗೂ ಸಚಿವರಿಂದ ರಾಜೀನಾಮೆ ಕೊಡಿಸಲು ಮುಂದಾಗಿದ್ದರು.



• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಸದಸ್ಯರ ಆಯ್ಕೆ ವಿಚಾರದಲ್ಲಿ ಹಿರಿಯರು, ಅನುಭವಿಗಳ ಜೊತೆ ಸಮಾಲೋಚನೆ ನಡೆಸದೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಏಕಾಏಕಿ ನಿರ್ಧಾರ ತೆಗೆದುಕೊಳ್ಳುವುದು ಸರಿಯಲ್ಲ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ಅಸಮಾಧಾನ ಹೊರಹಾಕಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ರವರು ನಮ್ಮನ್ನೂ ಸೇರಿದಂತೆ ಪಕ್ಷದ ಹಿರಿಯರ ಜೊತೆ ಚರ್ಚೆ ಮಾಡಬೇಕು. ಪಕ್ಷ, ಸರ್ಕಾರದಲ್ಲಿ ಕೆಲಸ ಮಾಡಿದವರ ಸಂಪರ್ಕದಲ್ಲಿರುವವರ ಬಗ್ಗೆ ಚರ್ಚೆ ಮಾಡಬೇಕು.

ಇದರಿಂದ ಪಕ್ಷಕ್ಕೆ ಅನುಕೂಲವಾಗುತ್ತದೆ. ಕೆಪಿಸಿಸಿ ಅಧ್ಯಕ್ಷರಾಗಿದ್ದವರು ಪಕ್ಷದಲ್ಲಿ ಅನೇಕ ಜವಾಬ್ದಾರಿ ನಿಭಾಯಿಸಿ ಅನುಭವಿಗಳಾಗಿರುವವರ ಸಲಹೆ ಸೂಚನೆಗಳನ್ನು ತೆಗೆದುಕೊಳ್ಳಬೇಕು. ಜಿಲ್ಲಾವಾರು, ಜಾತಿವಾರು, ಪಕ್ಷ ಸಂಘಟನೆಯಲ್ಲಿ ಸಹಾಯ ಮಾಡಿದವರು ಯಾವ ಜಾತಿ ಕಾಂಗ್ರೇಸ್ ಜೊತೆ ದೃಢವಾಗಿ ನಿಂತಿದೆ ಎಂಬುದನ್ನು ನಮೊಂದಿಗೆ ಚರ್ಚೆ ಮಾಡಬೇಕಿದೆ. ಏಕಾಏಕಿ ಇಬ್ಬರೇ ಕುಳಿತು ನಿರ್ಧಾರ ತೆಗೆದುಕೊಳ್ಳುವುದು ಸರಿಯಲ್ಲ ಎಂದರು. ಬಿಜೆಪಿಯವರು ಯಾವುದೇ ವಿಚಾರವನ್ನು ಮುಂದಿಟ್ಟುಕೊಂಡು ಪ್ರತಿಭಟನೆ ಮಾಡಲಿ, ಅದು ಅವರ ಹಕ್ಕು. ಅವರ ಟೀಕೆಗಳಿಗೆ ನಾವು ಸರಿಯಾದ ಉತ್ತರ ನೀಡುತ್ತೇವೆ ಎಂದು ಹೇಳಿದರು. ಸರ್ಕಾರದ ಸಚಿವರು ಪಕ್ಷದ ಕಚೇರಿಗೆ ಭೇಟಿ ನೀಡಬೇಕು. ಜಿಲ್ಲಾ ಪ್ರವಾಸದಲ್ಲೂ ಜಿಲ್ಲಾ ಕಾಂಗ್ರೇಸ್ ಕಚೇರಿಗಳಿಗೆ ಭೇಟಿ ನೀಡಿ ಕಾರ್ಯಕರ್ತರ ಮುಖಂಡರ ಜೊತೆ ಚರ್ಚೆ ಮಾಡಬೇಕು ಎಂಬುದು ಹೊಸದಲ್ಲ.

ಈ ಹಿಂದೆ ನಾನು ಎಂಟು ವರ್ಷ ಪಕ್ಷದ ಅಧ್ಯಕ್ಷನಾಗಿದ್ದಾಗ ಇದೇ ಕೆಲಸ ಮಾಡಿದ್ದೇನೆ. ಇತ್ತೀಚೆಗೆ ಸಚಿವರು ಪಕ್ಷದ ಕಚೇರಿಯತ್ತ ಬರುತ್ತಿರಲಿಲ್ಲ ಎಂಬುದನ್ನು ಪಕ್ಷದ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಗಮನಿಸಿದ್ದಾರೆ. ನಿನ್ನೆ ಒಳ್ಳೆಯ ಸೂಚನೆ ನೀಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಮಾಡಬೇಕೋ ಅಥವಾ ಬೇಡವೋ ಎಂಬುದನ್ನು ಪಕ್ಷದ ಹೈಕಮಾಂಡ್ ನಾಯಕರು ತೀರ್ಮಾನ ಮಾಡುತ್ತಾರೆ. ಡಿ.ಕೆ.ಶಿವಕುಮಾರ್ ಅವರನ್ನು ಬದಲಾಯಿಸಬೇಕು ಎಂದರೆ ನಿರ್ಧಾರ ತೆಗೆದುಕೊಳ್ಳುತ್ತಾರೆ. ಇಲ್ಲವಾದರೆ ಮುಂದುವರೆಸುತ್ತಾರೆ. ನಾನು ಎಂಟು ವರ್ಷ ಅಧ್ಯಕ್ಷನಾಗಿದ್ದೆ. ಎರಡು ಬಾರಿ ಚರ್ಚೆಗಳು ಬಂದಾಗಲಾದರೂ ಬದಲಾವಣೆ ಮಾಡದೇ ಮುಂದುವರೆಸಲಾಗಿತ್ತು. ಈಗಲೂ ಅದೇ ರೀತಿ ಹೈಕಮಾಂಡ್ ನಿರ್ಧರಿಸುತ್ತಿದೆ. ಈ ವಿಚಾರವನ್ನು ಡಿ.ಕೆ.ಶಿವಕುಮಾರ್ ಆಗಲೀ, ಮುಖ್ಯಮಂತ್ರಿ ಸಿದ್ದರಾಮಯ್ಯನವರಾಗಲೀ ತೀರ್ಮಾನ ಮಾಡುವುದಿಲ್ಲ. ಡಿ.ಕೆ.ಶಿವಕುಮಾರ್ ರವರು ಉಪಮುಖ್ಯಮಂತ್ರಿ ಹಾಗೂ ಪಕ್ಷದ ಅಧ್ಯಕ್ಷರಾಗಿ ಎರಡೂ ಹುದ್ದೆಗಳನ್ನು ನಿಭಾಯಿಸಲು ಸಮರ್ಥರಿದ್ದಾರೆ. ಅದು ಹೊರೆಯಾಗಿದ್ದರೆ ಅದನ್ನು ಅವರು ಹೇಳುತ್ತಾರೆ. ಜವಾಬ್ದಾರಿ ಹೆಚ್ಚಾಗಿದೆ ಎಂದು ಹೈಕಮಾಂಡ್‌ಗೆ ಅನಿಸಿದರೆ ಆಗ ಬದಲಾವಣೆಯಾಗುವ ಸಂಭವವಿದೆ. ಆದರೆ ಯಾವುದೇ ನಿರ್ಧಾರವಾಗಲು ವರಿಷ್ಠರು ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದರು. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ವಿರುದ್ಧ ಫೋಕ್ಸೊ ಕಾಯ್ದೆಯಡಿ ದೂರು ದಾಖಲಿಸಿದ್ದ ಮಹಿಳೆ ಕ್ಯಾನ್ಸರ್‌ನಿಂದಾಗಿ ವಾರದ ಹಿಂದೆ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು, ನಿಧನರಾಗಿದ್ದಾರೆ ಎಂಬ ಮಾಹಿತಿ ಇದೆ. ಅನಂತರ ಯಾವೆಲ್ಲಾ ಬೆಳವಣಿಗೆಗಳಾಗಿವೆ ಎಂಬುದನ್ನು ಪರಿಶೀಲಿಸಲಾಗಿದೆ ಎಂದು ತಿಳಿಸಿದರು.

ತಮನ್ನು ಪಕ್ಷದ ಅಧ್ಯಕ್ಷರನ್ನಾಗಿ ಮಾಡಿದರೆ ನಿಭಾಯಿಸಲು ಸಿದ್ಧ ಎಂದು ಸಚಿವ ಕೆ.ಎನ್. ರಾಜಣ್ಣ ನೀಡಿದ ಹೇಳಿಕೆಗೆ ಪ್ರತಿಕ್ರಿಯಿಸಿದ ಪರಮೇಶ್ವರ, ಪಕ್ಷಕ್ಕಾಗಿ ತ್ಯಾಗ ಮಾಡಲು ಬಹಳಷ್ಟು ಜನ ಇದ್ದಾರೆ. ಈ ಸಂಖ್ಯೆಯೇನು ಕಡಿಮೆಯಿಲ್ಲ.

ರಾಜಣ್ಣ ಅವರು ಸಚಿವ ಸ್ಥಾನ ತ್ಯಾಗ ಮಾಡುವುದಾಗಿ ಹೇಳಿರುವುದು ಸಂತೋಷದ ವಿಚಾರ ಎಂದರು. ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಪಟ್ಟಂತೆ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಕಾನೂನು ಪ್ರಕಾರ ಕ್ರಮಗಳು ಜಾರಿಯಲ್ಲಿವೆ. ಈಗಾಗಲೇ ಬ್ಲೂ ಕಾರ್ನರ್ ನೋಟೀಸ್ ಜಾರಿ ಮಾಡಲಾಗಿದೆ. ಎಸ್‌ಐಟಿ ಅಧಿಕಾರಿಗಳು ಸಿಆರ್‌ಪಿಸಿ 41ಎ ನೋಟೀಸ್ ಜಾರಿ ಮಾಡಲಾಗಿದೆ. ವಿದೇಶದಲ್ಲಿ ಇರುವ ಅವರನ್ನು ಬಂಧಿಸಿ ಕರೆತರುವ ಎಲ್ಲಾ ಪ್ರಕ್ರಿಯೆಗಳು ಜಾಲನೆಯಲ್ಲಿದ್ದು, ವಿಳಂಬವಾಗಿಲ್ಲ ಎಂದು ಸಮರ್ಥಿಸಿಕೊಂಡರು.

1 ಪರಿಷತ್ ಟಿಕೆಟ್‌ಗೆ 300ಕ್ಕೂ ಹೆಚ್ಚು ಆಕಾಂಕ್ಷಿಗಳು, ಮಾನದಂಡ ಹೈಕಮಾಂಡ್ ನಿರ್ಧಾರ ಎಂದ ಡಿಸಿಎಂ ಡಿಕೆ ಶಿವಕುಮಾರ್

2 ಈ ಬಾರಿ ಎಲ್ಲಾ ವರ್ಗದವರಿಗೆ ಅವಕಾಶ ಕಲ್ಪಿಸಲು ಸಾಧ್ಯವಿಲ್ಲ ಎಂದ ಡಿಕೆಶಿ.

3 ಪರಿಷತ್ತಿನ ಕೆಲವು ಸ್ಥಾನಗಳಲ್ಲಿ ಹಾಲಿ ಸದಸ್ಯರು ಇದ್ದಾರೆ. ಹೀಗಾಗಿ ಈ ಬಾರಿ ಕಷ್ಟಕರ ಪರಿಸ್ಥಿತಿ ಎದುರಾಗಿದೆ ಎಂದ ಡಿಕೆ ಶಿವಕುಮಾರ್.

ವಿಧಾನಸಭೆಯಿಂದ ವಿಧಾನಪರಿಷತ್‌ನ 11 ಸ್ಥಾನಗಳಿಗೆ ಜೂನ್ 13 ರಂದು ನಡೆಯಲಿರುವ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆಯನ್ನು ಹೈಕಮಾಂಡ್ ಜತೆ ಚರ್ಚಿಸಿ ಅಂತಿಮಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಇವರುಗಳು ದೆಹಲಿಗೆ ತೆರಳಿದರು. ವಿಧಾನಸಭೆಯ ಬಲಾಬಲದ ಪ್ರಕಾರ 11 ಸ್ಥಾನಗಳ ಪೈಕಿ 7 ಸ್ಥಾನಗಳು ಕಾಂಗ್ರೇಸ್ ಪಕ್ಷಕ್ಕೆ ಸಿಗಲಿದ್ದು, ಈ 7 ಸ್ಥಾನಗಳಿಗೆ 80 ಕ್ಕೂ ಹೆಚ್ಚು ಆಕಾಂಕ್ಷಿಗಳಿದ್ದು, ಆಕಾಂಕ್ಷಿಗಳ ಪಟ್ಟಿಯನ್ನು ಅಳೆದು ತೂಗಿ ಜಾತಿವಾರು ಲೆಕ್ಕಾಚಾರದ ಮೇಲೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇವರಿಬ್ಬರೂ ಸೇರಿ ಪಟ್ಟಿಯೊಂದನ್ನು ಸಿದ್ಧಪಡಿಸಿದ್ದು, ಈ ಪಟ್ಟಿ ಜತೆಗೆ ಇವರಿಬ್ಬರೂ ಒಂದೇ ವಿಮಾನದಲ್ಲಿ ದೆಹಲಿಗೆ ತೆರಳಿದರು. ದೆಹಲಿಯಲ್ಲಿ ಮೊಕ್ಕಾಂ ಹೂಡಲಿರುವ ಈ ಇಬ್ಬರು ನಾಯಕರುಗಳು ವರಿಷ್ಠರ ಜತೆ ಚರ್ಚಿಸಿ ವಿಧಾನಪರಿಷತ್‌ನ ಚುನಾವಣೆಗೆ 7 ಸ್ಥಾನಗಳಿಗೆ ಅಭ್ಯರ್ಥಿಗಳ ಆಯ್ಕೆಯನ್ನು ಅಂತಿಮಗೊಳಿಸಲಿದ್ದು, 2-3 ದಿನಗಳಲ್ಲಿ ಅಭ್ಯರ್ಥಿಗಳ ಘೋಷಣೆ ದೆಹಲಿಯಿಂದಲೇ ಆಗಲಿದೆ.

3 ದಿನದಲ್ಲಿ ಕೈ ಅಭ್ಯರ್ಥಿಗಳ ಘೋಷಣೆ

ಕಷ್ಟಕರ ಪರಿಸ್ಥಿತಿ ಎದುರಾಗಿದೆ

ಪರಿಷತ್ತಿನ 7 ಸ್ಥಾನಗಳಿಗೆ ಪಕ್ಷದಲ್ಲಿ 300ಕ್ಕೂ ಹೆಚ್ಚು ಆಕಾಂಕ್ಷಿಗಳಿದ್ದಾರೆ. ಎಲ್ಲಾ ವರ್ಗದಲ್ಲೂ ಆಕಾಂಕ್ಷಿಗಳಿದ್ದಾರೆ. ಈ ಬಾರಿ ಎಲ್ಲಾ ವರ್ಗದವರಿಗೆ ಅವಕಾಶ ಕಲ್ಪಿಸಲು ಸಾಧ್ಯವಿಲ್ಲ. ಎಲ್ಲಾರೂ ಬ್ಲಾಕ್, ಜಿಲ್ಲಾ, ರಾಜ್ಯಮಟ್ಟದಲ್ಲಿ ಪಕ್ಷಕ್ಕೆ ದುಡಿದಿದ್ದಾರೆ. ಕರಾವಳಿ ಕರ್ನಾಟಕ, ಕಿತ್ತೂರು ಕರ್ನಾಟಕ, ಕಲ್ಯಾಣ ಕರ್ನಾಟಕ, ಹಳೇ ಮೈಸೂರು ಭಾಗ ಸೇರಿದಂತೆ ಎಲ್ಲಾ ಕಡೆಯಿಂದ ಅವಕಾಶ ನೀಡಬೇಕು ಎನ್ನುವ ಬೇಡಿಕೆ ಇದೆ. ಕೆಲವು ಸ್ಥಾನಗಳಲ್ಲಿ ಹಾಲಿ ಸದಸ್ಯರು ಇದ್ದಾರೆ. ಹೀಗಾಗಿ ಈ ಬಾರಿ ಕಷ್ಟಕರ ಪರಿಸ್ಥಿತಿ ಎದುರಾಗಿದೆ. ಹೈಕಮಾಂಡ್ ಯಾವ ತೀರ್ಮಾನ ಮಾಡಲಿದೆ ಎಂದು ನೋಡೋಣ.

ಗುತ್ತಿಗೆದಾರರಿಂದ ಹೆಚ್ಚುವರಿ 25 ಪರ್ಸೆಂಟ್ ಹಣ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಮೂಲಸೌಕರ್ಯ ಕಡೆಗಣನೆ ವಿಚಾರಕ್ಕೆ ಸಂಬಂಧಿಸಿದಂತೆ ಫ್ರೀಡಂ ಪಾರ್ಕ್ ನಲ್ಲಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸುತ್ತಿದ್ದಾರೆ ಈ ವೇಳೆ ಆರ್ ಆರ್ ನಗರ ಶಾಸಕರು ಮಾತನಾಡಿ, ಗುತ್ತಿಗೆದಾರರಿಂದ ಹೆಚ್ಚುವರಿ 25 ಪರ್ಸೆಂಟ್ ರಷ್ಟು ಹಣ ಪಡೆಯುತ್ತಿದ್ದಾರ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಅಕ್ಕ ಅನ್ನಪೂರ್ಣಾ ತಾಯಿ

ಬೀದರ್ ನ ಬಸವಸೇವಾ ಪ್ರತಿಷ್ಠಾನ ಮತ್ತು ಲಿಂಗಾಯತ ಮಹಾ ಮಠದ ಸಂಸ್ಥಾಪಕಿ ಅಕ್ಕ ಅನ್ನಪೂರ್ಣಾ ತಾಯಿ ಅರವತ್ತೊಂದರ ಹರೆಯದಲ್ಲಿ ಮೊನ್ನೆ ಲಿಂಗೈಕ್ಯರಾದರು. ಶರಣ ಬಳಗಕ್ಕೆ ಅವರ ಅಗಲಿಕೆ ತುಂಬಲಾರದ ನಷ್ಟ. ಎರಡು ಸಾವಿರದ ಹದಿನಾರರಲ್ಲಿ ಬೀದರ್ ನ ರಾಮಕೃಷ್ಣ ವಿವೇಕಾನಂದ ಆಶ್ರಮದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಮೊದಲ ಬಾರಿ ಅವರನ್ನು ಕೇಳಿ ಕಂಡಿದ್ದೆ. ಅವರ ವಿದ್ವತ್ಪೂರ್ಣ ನಿರರ್ಗಳ ಅಸ್ಖಲಿತ ಕರಾರುವಕ್ಕಾದ ಭಾಷಣವನ್ನು ಕೇಳಿ ಸಂತಸಪಟ್ಟೆ. ಅವರ ಅಭಿಮಾನಿಯಾದೆ. ಅವರೊಬ್ಬ ಅತ್ಯುತ್ತಮ ಶರಣೆ ಹಾಗೂ ಪ್ರವಚನಗಾರ್ತಿ. ಅವರ ವಿದ್ಯೆ ವಚನಪಾಂಡಿತ್ಯ ವೈಚಾರಿಕತೆ ಮೊಣಚು ಮಾತು ದಿಟ್ಟತನ ಮೆಚ್ಚುವಂಥದ್ದು. ಅವರನ್ನು ಮಾತನಾಡಿಸಲಾಗಲಿಲ್ಲ, ಮತ್ತೆ ಭೇಟಿಯೂ ಇಲ್ಲ, ಆದರೆ ಎರಡು ಸಾವಿರದ ಹತ್ತೊಂಭತ್ತರಿಂದ ಆರಂಭಗೊಂಡ ನನ್ನ ಸಿದ್ಧಸೂಕ್ತಿಗಳು ವಾಟ್ಸಾಪ್ ಮೂಲಕ ಅವರನ್ನು ತಲುಪುತ್ತಿದ್ದವು. ಅವರು ಗಮನಿಸುತ್ತಿದ್ದರು, ಆಸಕ್ತಿಯಿಂದ ಓದುತ್ತಿದ್ದರು! ಇದ್ದಕ್ಕಿದ್ದಂತೆ ಅವರೊಮ್ಮೆ ದೂರವಾಣಿ ಕರೆ ಮಾಡಿ ಸಿದ್ಧಸೂಕ್ತಿ ಮಾರ್ಮಿಕವಾಗಿ ಮೂಡಿ ಬರುತ್ತಿದೆ. ಗಂಭೀರ ಚಿಂತನೆ, ಅನಗತ್ಯ ಶಬ್ದವಿಲ್ಲ ವಿಷಯಾಂತರವಿಲ್ಲ, ಸುಂದರ ಶಬ್ದ ಜೋಡಣೆ ಎಂದರು. ನನಗಾದ ಆಶ್ಚರ್ಯ ಸಂತಸ ಹೇಳಲಾಗದು. ಇನ್ನೂ ಬಹುಕಾಲ ಬೆಳಗಬೇಕಾದ ಜ್ಯೋತಿಯೊಂದು ನಂದಿದೆ. ಇಂಥ ಈ ಜ್ಯೋತಿ ಮತ್ತೆ ಹೊತ್ತಿ ಜಗವ ಬೆಳಗಲಿ.

ಕಾಂಗ್ರೇಸ್ ಪಕ್ಷದವರು ಭ್ರಷ್ಟಾಚಾರದ ಪಿತಾಮಹರೆಂದು ರುಜುವಾತು

■ ಬಿಜೆಪಿ ರಾಜ್ಯಾಧ್ಯಕ್ಷ, ಶಾಸಕ ಬಿ.ವೈ. ವಿಜಯೇಂದ್ರ ಟೀಕೆ ■ ಹೊಸ ಯೋಜನೆಗಳನ್ನು ಘೋಷಿಸಿಲ್ಲ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕಾಂಗ್ರೇಸ್ ಸರಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಆಗಿದೆ. ಒಂದು ವರ್ಷದ ಅವಧಿಯಲ್ಲಿ ಈ ಸರಕಾರದ ಸಾಧನೆ ಶೂನ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಟೀಕಿಸಿದರು. ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ಸ್ಥಗಿತಗೊಂಡಿವೆ. ಮಾನ್ಯ ಮುಖ್ಯಮಂತ್ರಿಗಳು, ಯಾರೇ ಒಬ್ಬ ಸಚಿವರು ಒಂದೇ ಒಂದು ಗುದ್ದಲಿಪೂಜೆ ಮಾಡಿಲ್ಲ; ಒಂದೇ ಒಂದು ಶಂಕುಸ್ಥಾಪನೆ ಆಗಿಲ್ಲ. ಹೊಸ ಯೋಜನೆಗಳನ್ನು ಘೋಷಿಸಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ರಾಜ್ಯವು ಭೀಕರ ಬರಗಾಲದಿಂದ ತತ್ತರಿಸಿದೆ. ಕೇಂದ್ರ ಸರಕಾರದಿಂದ ಅನುದಾನ ಬಂದರೂ ತಾಂತ್ರಿಕ ಕಾರಣಗಳನ್ನು ಒಡ್ಡಿ ರೈತರಿಗೆ ಇನ್ನೂ ಸರಿಯಾದ ರೀತಿಯಲ್ಲಿ ಪರಿಹಾರ ಮೊತ್ತವನ್ನು ನೀಡಿಲ್ಲ. ಬೆಳೆ ವಿಮೆಯನ್ನೂ ಕೊಟ್ಟಿಲ್ಲ. ಇದು ರೈತರಲ್ಲಿ ಸಾಕಷ್ಟು ಆತಂಕ ಉಂಟುಮಾಡಿದೆ ಎಂದು ವಿವರಿಸಿದರು.

ಈ ರಾಜ್ಯ ಸರಕಾರಕ್ಕೆ ರೈತಪರ ಕಾಳಜಿ ಇಲ್ಲದೇ ಇರುವುದು ಮೇಲ್ನೋಟಕ್ಕೆ ಕಾಣುತ್ತಿದೆ. ಕರ್ನಾಟಕದ ಕಾನೂನು ಸುವ್ಯವಸ್ಥೆ ಕುಸಿತದ ಕುರಿತು ಇಡೀ ದೇಶದಲ್ಲಿ ಚರ್ಚೆ ಆಗಿದೆ. ಎಲ್ಲಿ ನೋಡಿದರೂ ಕೊಲೆಗಳು ನಡೆಯುತ್ತಿವೆ. ಚನ್ನಗಿರಿಯಲ್ಲಿ ಪೊಲೀಸರಿಗೇ ಪೊಲೀಸರು ರಕ್ಷಣೆ ಕೊಡಬೇಕಾದ ಸಂದರ್ಭ ಸೃಷ್ಟಿ ಆಗಿದೆ. ಮಟ್ಕಾ ದಂಧೆ ಯಥೇಚ್ಛವಾಗಿ ರಾಜ್ಯಾದ್ಯಂತ ನಡೆದಿದೆ. ಕಾನೂನುಬಾಹಿರ ದುಷ್ಕೃತ್ಯಗಳು ಯಾರ ಭಯವೂ ಇಲ್ಲದೇ ನಡೆಯುತ್ತಿವೆ ಎಂದು ತಿಳಿಸಿದರು.

ಕೈ ವಿರುದ್ಧ ವಿಜಯೇಂದ್ರ ಕೆಂಡ

ಲೋಕಸಭಾ ಚುನಾವಣೆ ಸಂಬಂಧ ದೊಡ್ಡ ನಿರಾಸೆ ಕಾಂಗ್ರೇಸ್ಸಿಗರಿಗೆ ಕಾದಿದೆ ಎಂದ ಅವರು, ಶಿಕ್ಷಣ ಸಚಿವರಿಗೆ ಹಣಕಾಸಿನ ಸಮಸ್ಯೆ ಇದ್ದರೆ ಅವರ ಹೇರ್ ಕಟಿಂಗ್‌ಗೆ ಹಣ ಸಂಗ್ರಹಿಸಿ ಕೊಡಲು ಯುವ ಮೋರ್ಚಾದವರಿಗೆ ಹೇಳುವೆ ಎಂದು ವಿಜಯೇಂದ್ರ ಅವರು ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು.

ಒಬ್ಬರು ಶಿಕ್ಷಣ ಸಚಿವರು ಹೇಗಿರಬೇಕು ಅವರು ಮಾದರಿ ಆಗಿರಬೇಕು. ನಮ್ಮ ಶಿಕ್ಷಣ ಸಚಿವರು ಒಂದು ಕಡೆ ನನಗೆ ಕನ್ನಡ ಬರುವುದಿಲ್ಲ ಎನ್ನುತ್ತಾರೆ. ಮತ್ತೊಂದು ಕಡೆ ಯಾವ ರೀತಿ ಅವಾಂತರ ಮಾಡಿದ್ದಾರೆಂಬುದು ನಿಮಗೂ ಗೊತ್ತಿದೆ. ಬೆಂಗಳೂರಿನಲ್ಲಿ ತಾತ್ಕಾಲಿಕವಾಗಿ ಶಿಕ್ಷಕರ ನೇಮಕಕ್ಕೆ ಖಾಸಗಿ ಕಾರ್ಮಿಕರನ್ನು ಗುತ್ತಿಗೆ ಮಾಡಿಕೊಳ್ಳುವವರಿಗೆ ಜವಾಬ್ದಾರಿ ಕೊಟ್ಟಿದ್ದಾರೆ. ಶಿಕ್ಷಣ ಸಚಿವರು ಎಷ್ಟು ಗಂಭೀರವಾಗಿ ಇಲಾಖೆಯನ್ನು ಪರಿಗಣಿಸಿದ್ದಾರೆಂದು ಗೊತ್ತಾಗುತ್ತದೆ ಎಂದು ಟೀಕಿಸಿದರು. ಶಿಕ್ಷಕರು- ಮಕ್ಕಳು ಸಮಸ್ಯೆ ಎದುರಿಸುತ್ತಿದ್ದಾರೆ. ಪೋಷಕರೂ ಚಿಂತೆಗೀಡಾಗಿದ್ದಾರೆ. ಇಂಥ ಶಿಕ್ಷಣ ಸಚಿವರು ಬೇಕೇ ಎಂದು ಜನತೆ ಪ್ರಶ್ನಿಸುತ್ತಿದ್ದಾರೆ ಎಂದರು.

> ಇಲಾಖೆ ಸಚಿವರ ಮೌಖಿಕ ಆದೇಶದ ಮೇರೆಗೆ ಆತ್ಮಹತ್ಯೆ ಮಾಡಿಕೊಂಡಿದ್ದಾಗಿ ಡೆತ್ ನೋಟಿನಲ್ಲಿ ತಿಳಿಸಿದ್ದು, ತಕ್ಷಣ ಆ ಸಚಿವರನ್ನು ತಮ್ಮ ಮಂತ್ರಿಮಂಡಲದಿಂದ ಕೈಬಿಡಬೇಕು; ಹೈಕೋರ್ಟ್ ನ್ಯಾಯಾಧೀಶರಿಂದ ಉನ್ನತ ಮಟ್ಟದ ತನಿಖೆ ಮಾಡಿ ಎಂದು ಆಗ್ರಹಿಸಿದರು.
>
> – ಬಿ.ವೈ.ವಿಜಯೇಂದ್ರ

> ಎಸ್‌ಟಿ ಅಭಿವೃದ್ಧಿ ನಿಗಮದ 187 ಕೋಟಿಗೂ ಹೆಚ್ಚು ಮೊತ್ತದ ಹಗರಣ ನಿನ್ನೆ ನಡೆದಿದೆ. ಇಲಾಖೆ ಅಕೌಂಟೆಂಟ್ ಡೆತ್ ನೋಟ್ ಬರೆದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯದ ಸಿಎಂ, ಡಿಸಿಎಂ ಕಳಕಳಿ, ಪ್ರಾಮಾಣಿಕತೆ ಎಲ್ಲಿ ಹೋಗಿದೆ? ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ನಮ್ಮ ಸರಕಾರದ ಮೇಲೆ ಭ್ರಷ್ಟಾಚಾರದ ಆರೋಪ ಮಾಡಿ, ಒಂದು ಸುಳ್ಳನ್ನು ನೂರು ಬಾರಿ ಹೇಳಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೇಸ್ ಪಕ್ಷವು ಭ್ರಷ್ಟಾಚಾರದ ಪಿತಾಮಹರೆಂದು ರುಜುವಾತಾಗಿದೆ ಎಂದು ನುಡಿದರು.

ಹಿಂದೆ ಯಡಿಯೂರಪ್ಪ ಅವರು ಬಿಜೆಪಿ ಮುಖ್ಯಮಂತ್ರಿಯಾಗಿದ್ದಾಗ ಹೈನುಗಾರಿಕೆಗೆ ಪ್ರೋತ್ಸಾಹ ನೀಡುತ್ತಿದ್ದರು.

ಈ ಸರಕಾರ ಬಂದ ಬಳಿಕ ಕಳೆದ ಅಕ್ಟೋಬರ್ನಿಂದ 800 ಕೋಟಿಗೂ ಹೆಚ್ಚು ಪ್ರೋತ್ಸಾಹಧನ ಬಾಕಿ ಉಳಿಸಿಕೊಂಡಿದೆ ಎಂದು ಟೀಕಿಸಿದರು.

ಅಧಿಕಾರಿ ಆತ್ಮಹತ್ಯೆ ಪ್ರಕರಣ ಸಿಐಡಿಗೆ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆತ್ಮಹತ್ಯೆ ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ ಎಂದು ಬೆಂಗಳೂರಿನಲ್ಲಿ ಸಚಿವ ನಾಗೇಂದ್ರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಣ ಯಾವ ರೀತಿ ದುರುಪಯೋಗ ಆಗಿದೆ.

ಈ ಬಗ್ಗೆ ನಾವು ಪರಿಶೀಲನೆ ಮಾಡುತ್ತಿದ್ದೇವೆ. ನಿಗಮದ ಎಮ್ ಡಿ ಕೂಡ ದೂರು ಮಾಡಿದ್ದಾರೆ. ನಮ್ಮ ಇಲಾಖೆ ಅಧಿಕಾರಿಗಳ ಮೇಲೆ ದೂರು ದಾಖಲಾಗಿದೆ. ಎಮ್ ಡಿ ಅವರ ಸಹಿಗೆ ಕಳುಹಿಸಿದ್ದೇವೆ ಎಂದು ತಿಳಿಸಿದರು. ಸುಮಾರು 87 ಕೋಟಿ ಬ್ಯಾಂಕ್ ನಿಂದ ಹಣ ವರ್ಗಾವಣೆ ಆಗಿದೆ ಎಂದು ತಿಳಿದು ಬಂದಿದ್ದು ಇಲ್ಲಿವರೆಗೆ 28 ಕೋಟಿ ಅಧಿಕಾರಿ ಆಗಿದ್ದು ಉಳಿದ ಹಣವನ್ನು ಇಂದು ಸಂಜೆ ಒಳಗೆ ರಿಕವರಿ ಮಾಡಲಾಗುತ್ತದೆ ಎಂದು ಎಂಡಿ ಅವರು ತಿಳಿಸಿದ್ದಾರೆ ಎಂದು ಸಚಿವ ನಾಗೇಂದ್ರ ತಿಳಿಸಿದರು.

> ಇದರ ಹಿಂದೆ ಯಾರ ಕೈವಾಡ ಇದೆ ಎಷ್ಟೇ ಪ್ರಭಾವಿಗಳು ಇದ್ದರೂ ಸರ್ಕಾರ ಇವರನ್ನು ಖಂಡಿತವಾಗಿ ಬಿಡಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ಬಹಳ ಗಂಭೀರವಾದ ಪ್ರಕರಣ ಎಂದು ಪರಿಗಣಿಸಿದ್ದಾರೆ ಹಾಗಾಗಿ ಯಾರನ್ನು ಪ್ರಶ್ನೆ ಇಲ್ಲ ಎಂದು ಅವರು ತಿಳಿಸಿದರು.

ಸಂಜೆಯ ಒಳಗೆ ಸಂಬಂಧಪಟ್ಟ ಖಾತೆಗೆ ಹಣ ರಿಕವರಿ ಯಾಗುತ್ತದೆ ಈ ಬಗ್ಗೆ ಬ್ಯಾಂಕ್ ಅಧಿಕಾರಿಗಳಿಗೆ ಡೆಡ್ ಲೈನ್ ನೀಡಿದ್ದೇವೆ ಎಲ್ಲಾ ಹಣ ನಿಗಮದ ಖಾತೆಗೆ ವಾಪಸ್ ಬರಬೇಕು ಗಡವ ಮೀರಿದರೆ ಬ್ಯಾಂಕ್ ಅಧಿಕಾರಿಗಳ ಮೇಲು ಅಪಾಯ ದಾಖಲಾಗುತ್ತದೆ ಇಷ್ಟು ದೊಡ್ಡ ಜವಾಬ್ದಾರಿ ಸಣ್ಣಾಧಿಕಾರಿಗೆ ಹೇಗೆ ನೀಡಲಾಯಿತು ಎಂದು ಪರಿಶೀಲ ನಡೆಸಲಾಗುತ್ತದೆ ಎಂದರು.

ಮೇ.31ರೊಳಗೆ ಪ್ಯಾನ್ ಜೊತೆ ಆಧಾರ್ ಲಿಂಕ್ ಮಾಡಿ

• ಉದಯವಾಹಿನಿ, ಬೆಂಗಳೂರು

ರೊಳಗೆ ಪ್ಯಾನ್ ಅನ್ನು ಆಧಾರ್ ಜೊತೆ ಲಿಂಕ್ ಮಾಡುವಂತೆ ಆದಾಯ ತೆರಿಗೆ ಇಲಾಖೆ ತೆರಿಗೆದಾರರಿಗೆ ಸೂಚನೆ ನೀಡಿದೆ. ಪೋಸ್ಟ್ ಮಾಡಿದ ಐಟಿ ಇಲಾಖೆ, ಮೂಲದಲ್ಲಿ ಹೆಚ್ಚಿನ ತೆರಿಗೆ ಕಡಿತಗಳನ್ನು (ಟಿಡಿಎಸ್) ತಪ್ಪಿಸಲು ಈ ಗಡುವನ್ನು ಪೂರೈಸುವುದು ಮುಖ್ಯ ಎಂದು ಹೇಳಿದೆ.

ತೆರಿಗೆದಾರರೇ ಈ ಬಗ್ಗೆ ದಯವಿಟ್ಟು ಗಮನ ಹರಿಸಿ, ದಯವಿಟ್ಟು ನಿಮ್ಮ ಪ್ಯಾನ್ ಅನ್ನು ಆಧಾರ್ನೊಂದಿಗೆ ಮೇ 31, 2024 ರೊಳಗೆ ಲಿಂಕ್ ಮಾಡಿ ಮೇ 31 ರೊಳಗೆ ನಿಮ್ಮ ಪ್ಯಾನ್ ಅನ್ನು ನಿಮ್ಮ ಆಧಾರ್ನೊಂದಿಗೆ ಲಿಂಕ್ ಮಾಡುವುದರಿಂದ ಆದಾಯ ತೆರಿಗೆ ಕಾಯ್ದೆ, 1961 ರ ಸೆಕ್ಷನ್ 206 ಎಎ ಮತ್ತು 206 ಸಿಸಿ ಅಡಿಯಲ್ಲಿ ಹೆಚ್ಚಿನ ತೆರಿಗೆ ಕಡಿತ / ತೆರಿಗೆ ಸಂಗ್ರಹವನ್ನು ನೀವು ಎದುರಿಸುವುದಿಲ್ಲ ಎಂದು ಖಚಿತಪಡಿಸುತ್ತದೆ ಎಂದು ಹೇಳಿದೆ.

ಆಧಾರ್ ನೊಂದಿಗೆ ಪ್ಯಾನ್ ಲಿಂಕ್ ಮಾಡುವುದು ಹೇಗೆ?

- incometaxindiaefiling.gov.in ಆದಾಯ ತೆರಿಗೆ ಇಲಾಖೆಯ ಅಧಿಕೃತ ವೆಬ್ಸೈಟ್ಗೆ ಭೇಟಿ ನೀಡಿ
- ಕ್ವಿಕ್ ಲಿಂಕ್ಸ್ ವಿಭಾಗಕ್ಕೆ ಹೋಗಿ ಮತ್ತು ಲಿಂಕ್ ಆಧಾರ್ ಆಯ್ಕೆಯನ್ನು ಆರಿಸಿ
- ನಿಮ್ಮ ಪ್ಯಾನ್ ಮತ್ತು ಆಧಾರ್ ಸಂಖ್ಯೆಯನ್ನು ನಮೂದಿಸಿ ಮತ್ತು ಮೌಲ್ಯೀಕರಿಸಿ ಬಟನ್ ಕ್ಲಿಕ್ ಮಾಡಿ
- ನಿಮ್ಮ ಹೆಸರು ಮತ್ತು ಮೊಬೈಲ್ ಸಂಖ್ಯೆಯನ್ನು ನಮೂದಿಸಿ ಮತ್ತು ಲಿಂಕ್ ಆಧಾರ್ ಬಟನ್ ಕ್ಲಿಕ್ ಮಾಡಿ
- ನಿಮ್ಮ ಮೊಬೈಲ್ ಸಂಖ್ಯೆಗೆ ಕಳುಹಿಸಲಾದ ಒಟಿಪಿಯನ್ನು ನಮೂದಿಸಿ ಮತ್ತು ಪ್ರಕ್ರಿಯೆಯನ್ನು ಪೂರ್ಣಗೊಳಿಸಲು 'ಮೌಲ್ಯೀಕರಿಸಿ' ಬಟನ್ ಕ್ಲಿಕ್ ಮಾಡಿ

ಉದಯವಾಹಿನಿ ಚಿತ್ರ

ಗಡುವನ್ನು ತಪ್ಪಿಸುವ ತೆರಿಗೆದಾರರು ಆದಾಯ ತೆರಿಗೆ ಕಾಯ್ದೆ, 1961 ರ ಸೆಕ್ಷನ್ 206 ಎಎ ಮತ್ತು 206 ಸಿಸಿ ಪ್ರಕಾರ ಹೆಚ್ಚಿನ ತೆರಿಗೆ ಕಡಿತಗಳು ಮತ್ತು ಸಂಗ್ರಹಗಳಿಗೆ ಒಳಪಡುವುದರಿಂದ ಆರ್ಥಿಕ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ.

ಹರಿದಾಸ ಮಂಜರಿ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಪವಮಾನಪುರದಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ

ದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜ್ ಆಚಾರ್ ಅವರ ನೇತೃತ್ವದಲ್ಲಿ ಮೇ 30, ಗುರುವಾರ ಸಂಜೆ 6-30ಕ್ಕೆ ಶ್ರೀಮತಿ ಸಹನಾ ಶ್ರೀವತ್ಸ ಮತ್ತು ಸಂಗಡಿಗರಿಂದ ಹರಿದಾಸ ಮಂಜರಿ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ವ್ಯವಸ್ಥಾಪಕರಾದ ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ: ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಒಂದನೇ ಮುಖ್ಯರಸ್ತೆ, ಪವಮಾನಪುರ, ಬೆಂಗಳೂರು-560062

ಆರೋಪಿಗಳಾದ ನವೀನ ಗೌಡ, ಚೇತನನ್ನು ಬಂಧಿಸಿದ ಎಸ್‌ಐಟಿ

• ಉದಯವಾಹಿನಿ, ಬೆಂಗಳೂರು

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪೆನ್ ಡ್ರೈವ್ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಎಸ ಐ ಟಿ ಅಧಿಕಾರಿಗಳು ಆರೋಪಿಗಳಾದ ನವೀನ್ ಗೌಡ ಹಾಗೂ ಚೇತನ್ ನನ್ನು ಬಂಧಿಸಿದ್ದಾರೆ. ಹೈಕೋರ್ಟಿಗೆ ಜಾಮೀನು ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಇಂದು ಅವರು ಹೈಕೋರ್ಟಿಗೆ ಬಂದಿದ್ದರು. ಈ ವೇಳೆ ನವೀನ ಗೌಡ ಹಾಗೂ ಚೇತನನ್ನು ಎಸ್‌ಐಟಿ ಅಧಿಕಾರಿಗಳು ಬಂಧಿಸಿದ್ದಾರೆ.

ಆರೋಪಿಗಳು ಹೈಕೋರ್ಟ್‌ಗೆ ಬಂದಿದ್ದ ವೇಳೆ ಎಸ್‌ಐಟಿ ಅಧಿಕಾರಿಗಳು ಅವರನ್ನು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ. ನವೀನ್ ಗೌಡ ಅರೆಸ್ಟ್ ಆಗದ ಬಗ್ಗೆ ಸಾಕಷ್ಟು ಅನುಮಾನ ಹುಟ್ಟು ಹಾಕಿತ್ತು ಈ ಬಗ್ಗೆ ಎಚ್ ಡಿ ಕುಮಾರಸ್ವಾಮಿ ಸೇರಿದಂತೆ ಹಲವು ನಾಯಕರು ಪ್ರಶ್ನೆ ಮಾಡಿದ್ದರು. ಇದೀಗ ಕೊನೆಗೂ ಇಬ್ಬರು ಆರೋಪಿಗಳನ್ನು ಎಸ್‌ಐಟಿ ಅಧಿಕಾರಿಗಳು ಬಂಧಿಸಿದ್ದಾರೆ. ಹೈಕೋರ್ಟ್ ನಲ್ಲಿ ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸಿದ್ದ ಆರೋಪಿಗಳು. ಹೀಗಾಗಿ ಹೈಕೋರ್ಟ್ ಕಡೆ ಬಂದಿದ್ದ ಇಬ್ಬರನ್ನು ಇದೀಗ ಎಸ್ ಐ ಟಿ ಅಧಿಕಾರಿಗಳು ಬಂಧಿಸಿದ್ದಾರೆ.

ಶಾಲೆಗೆ ಹೋಗಲು ಮಕ್ಕಳು ಅತ್ತರೆ..ಹೀಗೆ ಮಾಡಿ..!

• ಉದಯವಾಹಿನಿ, ಬೆಂಗಳೂರು

2024 -25ನೇ ಸಾಲಿನ ಶೈಕ್ಷಣಿಕ ಅವಧಿ ಆರಂಭವಾಗಲಿದೆ. ಇಷ್ಟು ದಿನ ಬೇಸಿಗೆ ರಜೆಯ ಮಜ ಅನುಭವಿಸಿದ್ದ ಮಕ್ಕಳು ನಾಳೆ ಶಾಲೆಗೆ ಹೋಗಲು ಹಠ ಹಿಡಿಯಬಹುದು, ನಾಳೆಯಿಂದ ಶಾಲೆಗೆ ಕಳುಹಿಸುವುದು ಸ್ವಲ್ಪ ಕಷ್ಟದ ಕೆಲಸವಾಗಿದೆ.

- ಮಕ್ಕಳಿಗೆ ಹೊಸ ಬಟ್ಟೆ, ಶೂ, ಬ್ಯಾಗ್ ಛತ್ರಿ ಕೊಡಿಸಿ..ಇದರಿಂದ ಮಕ್ಕಳು ಶಾಲೆಗೆ ಬಹಳ ಖುಷಿಯಿಂದ ಹೋಗುತ್ತಾರೆ.
- ಶಾಲೆಯ ಹೆಸರು ಕೇಳಿದ ತಕ್ಷಣ ಮಕ್ಕಳಿಗೆ ಭಯ ಶುರುವಾಗುತ್ತದೆ. ನೀವು ಅವರನ್ನು ಶಾಲೆಗೆ ಹೋಗಲು ಮಾನಸಿಕವಾಗಿ ಸಿದ್ಧಪಡಿಸಬೇಕು. ಶಾಲೆಯ ಬಗ್ಗೆ ಇರುವ ಭಯವನ್ನು ಮೊದಲು ತೆಗೆದು ಹಾಕಿ.
- ನಿಮ್ಮ ಮಗುವಿಗೆ ಊಟದ ಬಾಕ್ಸ್ ನಲ್ಲಿ ಅವರ ಇಷ್ಟದ ಆಹಾರವನ್ನು ನೀಡಬೇಕು. ಇದರಿಂದ ಅವರ ಮನಸ್ಸಿಗೆ ಸಂತೋಷವಾಗುತ್ತದೆ.
- ಮಕ್ಕಳನ್ನು ಒತ್ತಾಯಪೂರ್ವಕವಾಗಿ ಏಳಿಸ್ಬೇಡಿ, ಚಿಕ್ಕಮಕ್ಕಳಾದ್ರೆ ಹೆಚ್ಚಿನ ನಿದ್ರೆ ಅಗತ್ಯ, ಆದ್ದರಿಂದ ಬೆಳಗ್ಗೆ ಹೆಚ್ಚು ಹೊತ್ತು ನಿದ್ದೆ ಮಾಡಲು ಬಿಡಿ.
- ಮಗು ಶಾಲೆಗೆ ಹೋಗಲು ಅಳ್ತಿದ್ರೆ ಬೈಯಬೇಡಿ, ಹೊಡೆಯಬೇಡಿ. ಮೊದಲ ದಿನ ಮಗುವಿಗೆ ಚಾಕೊಲೇಟ್ ಅಥವಾ ಐಸ್ ಕ್ರೀಮ್ ಕೊಟ್ಟು ಖುಷಿಯಿಂದ ಕಳುಹಿಸಿಕೊಡಿ.

ಉದಯವಾಹಿನಿ ಚಿತ್ರ

ಈ ಬಾರಿ ಶಾಲೆಗೆ ಮಕ್ಕಳು ಬರುತ್ತಿದ್ದಂತೆ ಎರಡು ಜೊತೆ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳನ್ನು ನೀಡಲು ಶಿಕ್ಷಣ ಇಲಾಖೆ ಸಿದ್ಧತೆ ಮಾಡಿಕೊಂಡಿದೆ. ಹಾಗೂ ನಾಳೆಯಿಂದಲೇ ಮಕ್ಕಳಿಗೆ ಕ್ಷೀರಭಾಗ್ಯ, ಬಿಸಿಯೂಟ ನೀಡಲು ಆದೇಶ ಹೊರಡಿಸಿದೆ.

ಆಪರೇಷನ್ ಕಮಲ ಭ್ರಷ್ಟಾಚಾರವಲ್ಲ, ಗ್ಯಾರಂಟಿ ಯೋಜನೆಗಳು ಮಾತ್ರ ಮಹಾಪರಾಧವೆ!

• ಉದಯವಾಹಿನಿ, ಬೆಂಗಳೂರು

'ಆಪರೇಷನ್ ಕಮಲ' ಭ್ರಷ್ಟಾಚಾರವಲ್ಲ, 'ಗ್ಯಾರಂಟಿ ಯೋಜನೆಗಳು' ಮಾತ್ರ ಮಹಾಪರಾಧ ಎಂದು ಕಾಂಗ್ರೇಸ್ ಟ್ವೀಟ್ ಮೂಲಕ ಕಿಡಿಕಾರಿದೆ.

ಡವರ ಬದುಕಿನ ಕಲ್ಯಾಣ ವೆಂದರೆ ಬಿಜೆಪಿಗೆ ಎಲ್ಲಿಲ್ಲದ ಅಸಹನೆ, ಗ್ಯಾರಂಟಿ ಯೋಜನೆಗಳ ವಿರುದ್ಧ ಬಿಜೆಪಿ ನಡೆಸಿದ ಪಿತೂರಿ, ಅಪಪ್ರಚಾರ ಒಂದೆರಡಲ್ಲ.

ನಮ್ಮ ಪ್ರಣಾಳಿಕೆಯ ಭರವಸೆಗಳನ್ನು ಆಮಿಷ ಎಂದು ನ್ಯಾಯಾಲಯದಲ್ಲಿ

ದಕ್ಷಿಣ ಶಿಕ್ಷಕರ ಕ್ಷೇತ್ರ ಚುನಾವಣೆ: '1'ಕ್ಕಾಗಿ 11 ಮಂದಿ ಪೈಪೋಟಿ

● ಅಭ್ಯರ್ಥಿಗಳ ಹೆಸರಿನ ಮುಂದೆ ಯಾವುದೇ ಚಿಹ್ನೆ ಇರುವುದಿಲ್ಲ, ಪ್ರಾಶಸ್ತ್ಯದ ಮತಗಳ ಮೇಲೆ ಗೆಲುವು ನಿರ್ಧಾರ

• ಉದಯವಾಹಿನಿ ಮೈಸೂರು

ವಿಧಾನಪರಿಷತ್ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಮತದಾನ ಪ್ರಕ್ರಿಯೆಯು ವಿಧಾನಸಭೆ, ಲೋಕಸಭೆ ಚುನಾವಣೆಯಂತೆ ಇರುವುದಿಲ್ಲ. ಇಲ್ಲಿ ಅಭ್ಯರ್ಥಿಗಳ ಹೆಸರಿನ ಮುಂದೆ ಯಾವುದೇ ಚಿಹ್ನೆ ಇರುವುದಿಲ್ಲ. ಪ್ರಾಶಸ್ತ್ಯದ ಮತಗಳ ಮೇಲೆ ಗೆಲುವನ್ನು ನಿರ್ಧರಿಸಲಾಗುತ್ತದೆ.

ಹೀಗಾಗಿ, ಪ್ರಥಮ ಪ್ರಾಶಸ್ತ್ಯದ ಮತಕ್ಕಾಗಿ ಅಂದರೆ ತಮ್ಮ ಹೆಸರಿನ ಮುಂದೆ ಮತದಾರರು '1' ಎಂದು ಬರೆಯಲೆಂದು (ನಮಗಷ್ಟೇ ಬರೆಯಲೆಂದೂ) ಅಭ್ಯರ್ಥಿಗಳು ಬಯಸುತ್ತಿದ್ದಾರೆ.

ಕ್ಷೇತ್ರದಲ್ಲಿ ಪ್ರಮುಖ ಪಕ್ಷ ಕಾಂಗ್ರೇಸ್‌ನ ಮರಿತಿಬ್ಬೇಗೌಡ, ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿ ಕೆ.ವಿವೇಕಾನಂದ, ಕನ್ನಡ ಚಳವಳಿ ವಾಟಾಳ್ ಪಕ್ಷದ ವಾಟಾಳ್ ನಾಗರಾಜ್, ಪಕ್ಷೇತರ ಅಭ್ಯರ್ಥಿ ಕೆ.ಸಿ. ಪುಟ್ಟಸಿದ್ದಶೆಟ್ಟಿ ಸೇರಿದಂತೆ 11 ಅಭ್ಯರ್ಥಿಗಳು ಕಣದಲ್ಲಿದ್ದಾರೆ.

ಪ್ರಥಮ ಪ್ರಾಶಸ್ತ್ಯದ ಮತ ಗಳಿಸುವುದೇ ಅವರೆಲ್ಲರ ಗುರಿ. ಅದಕ್ಕಾಗಿಯೇ ಮತದಾರರ ಮನವೊಲಿಸಿಕೊಳ್ಳುವ ಕಸರತ್ತುಗಳನ್ನು ನಡೆಸುತ್ತಿದ್ದಾರೆ.

> ರಾಜ್ಯದಲ್ಲಿ ಕಾಂಗ್ರೇಸ್ ಆಡಳಿತದಲ್ಲಿರುವುದರಿಂದ ಹಾಗೂ ಮೈಸೂರಿನವರೇ ಮುಖ್ಯಮಂತ್ರಿ ಆಗಿರುವುದರಿಂದ ಸಮಸ್ಯೆಗಳ ಪರಿಹಾರಕ್ಕೆ ಅನುಕೂಲವಾಗುತ್ತದೆ ಎಂದು ಪ್ರಬುದ್ಧ ಮತದಾರರು ನಮ್ಮ ಅಭ್ಯರ್ಥಿ ಮರಿತಿಬ್ಬೇಗೌಡ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತವನ್ನು ನೀಡಲಿದ್ದಾರೆ. ಹೀಗಾಗಿ ಈ ಬಾರಿ ಸ್ಪಷ್ಟ ಫಲಿತಾಂಶ ಹೊರಬೀಳಲಿದೆ ಎನ್ನುವುದು ನಮ್ಮ ನಿರೀಕ್ಷೆ' ಎಂದು ಹೋದ ಚುನಾವಣೆಯಲ್ಲಿ ಪರಾಜಿತರಾಗಿದ್ದ -ಎಂ. ಲಕ್ಷ್ಮಣ

ಮೊದಲ ಪ್ರಾಶಸ್ತ್ಯದ ಮತಗಳಲ್ಲಿ ಭಾರಿ ಅಂತರ ಇದ್ದಲ್ಲಿ ಮಾತ್ರ ಅಭ್ಯರ್ಥಿಯು ಗೆಲುವಿನ ದಡವನ್ನು ತಲುಪುವುದು ಸುಲಭವಾಗುತ್ತದೆ. ಇಲ್ಲದಿದ್ದರೆ ಕಡಿಮೆ ಮತ ಪಡೆದ ಅಭ್ಯರ್ಥಿಯನ್ನು ಹೊರ ಹಾಕುವ, ಆತ ಪಡೆದ ದ್ವಿತೀಯ ಪ್ರಾಶಸ್ತ್ಯದ ಮತಗಳನ್ನು ಹಂಚುವ ಪ್ರಕ್ರಿಯೆಯು ಆರಂಭವಾಗುತ್ತದೆ. ಆ ಬೆಳವಣಿಗೆಯಲ್ಲಿ ಯಾರ ಕೈ ಬೇಕಾ

ಉದಯವಾಹಿನಿ ಚಿತ್ರ

ದರೂ ಮೇಲಾಗಬಹುದು. ಎಣಿಕೆಗೆ ಹೆಚ್ಚಿನ ಸಮಯವೂ ಬೇಕಾಗಬಹುದು. ಹಿಂದಿನ ಕೆಲವು ಚುನಾವಣೆಗಳಲ್ಲಿ ಆ 'ಸರ್ಕಸ್' ನಡೆದಿದೆ. ಆದ್ದರಿಂದ 'ನಮಗೆ ಮಾತ್ರವೇ ಪ್ರಾಶಸ್ತ್ಯದ (1) ಮತ ಕೊಡಿ ಉಳಿದವರಿಗೆ ನಮೂದಿಸಲೇಬೇಡಿ' ಎಂಬ ಮನವಿಯನ್ನೂ ಅಭ್ಯರ್ಥಿಗಳು ಮಾಡಿಕೊಳ್ಳುತ್ತಿದ್ದಾರೆ. ವಿಶೇಷವಾಗಿ, ಇದೇ ಮೊದಲ ಬಾರಿಗೆ ಈ ಚುನಾವಣೆಯಲ್ಲಿ ಮತದಾನ ಮಾಡುತ್ತಿರುವವರಿಗೆ ಹೆಚ್ಚಿನ ಮಾಹಿತಿ ಕೊಡುವ ಕೆಲಸವೂ ನಡೆದಿದೆ.

ಮತಗಟ್ಟೆಯಲ್ಲಿ ಒದಗಿಸುವ ಪೆನ್ ಅನ್ನು

ಮತಗಟ್ಟೆಗಳಲ್ಲೂ ಜಾಗೃತಿ

ಈ ಚುನಾವಣೆಯಲ್ಲಿ ಚಿಹ್ನೆ ಇರುವುದಿಲ್ಲ ಪ್ರಥಮ ಪ್ರಾಶಸ್ತ್ಯದ ಮತವನ್ನೇ ಕೇಳುತ್ತಿರುವ ಅಭ್ಯರ್ಥಿಗಳು ಮತಗಟ್ಟೆಗಳಲ್ಲೂ ಜಾಗೃತಿಗೆ ಕ್ರಮ ಜಿ.ಸಿ. ಪ್ರಕಾಶ್ ಚುನಾವಣಾಧಿಕಾರಿ ಚುನಾವಣಾ ಆಯೋಗದ ಸೂಚನೆಯಂತೆ ಮತದಾರರ ತೋರು ಬೆರಳಿಗೆ ಅಳಿಸಲಾಗದ ಶಾಯಿ ಹಾಕಲಾಗುವುದು. ಈ ಚುನಾವಣೆಯಲ್ಲಿ ಎನ್‌ಒಟಿಎ (ನೋಟಾ) ಇರುವುದಿಲ್ಲ ಈ ಬಾರಿ ಕಾಂಗ್ರೇಸ್ ಹಾಗೂ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳ ನಡುವೆ ನೇರ ಹಣಾಹಣಿ ಇರುವುದರಿಂದ ಹೆಚ್ಚು ಗೊಂದಲ ಉಂಟಾಗುವುದಿಲ್ಲ ಎಂಬ ವಿಶ್ವಾಸವಿದೆ.

ಮಾತ್ರವೇ ಬಳಸಿ ಬರೆಯಬೇಕು. ರೋಮನ್ ಅಂಕಿ ಅಥವಾ ಕನ್ನಡ ಅಂಕಿ ಬರೆಯುವುದಕ್ಕೂ ಅವಕಾಶವಿದೆ. ಆದರೆ, ಯಾವುದಾದರೂ ಒಂದನ್ನೇ ಅಂದರೆ ಏಕರೂಪವಾಗಿ ಬಳಸಬೇಕು. ಬ್ಯಾಲೆಟ್ ಪೇಪರ್ ಮೇಲೆ ಯಾವುದೇ ಗುರುತು ಅಥವಾ ಚಿತ್ರವನ್ನು ಬರೆದರೆ ಸಿಂಧುವಾಗುವುದಿಲ್ಲ. ಎಲ್ಲಾ ಅಭ್ಯರ್ಥಿಗೂ ಮೊದಲ ಪ್ರಾಶಸ್ತ್ಯವನ್ನೇ ನೀಡಿದರೆ ಮಾನ್ಯವಾಗುವುದಿಲ್ಲ. ಪ್ರಥಮ ಪ್ರಾಶಸ್ತ್ಯದಲ್ಲಿ ಶೇ 50ಕ್ಕಿಂತ ಹೆಚ್ಚಿನ ಮತ ಪಡೆದವರನ್ನು ವಿಜೇತರು ಎಂದು ಘೋಷಿಸಲಾಗುತ್ತದೆ. ಇದನ್ನು ಯಾವ ಅಭ್ಯರ್ಥಿಯೂ ಪಡೆಯದಿದ್ದರೆ 2ನೇ ಪ್ರಾಶಸ್ತ್ಯದ ಮತ ಎಣಿಕೆ ಮಾಡಲಾಗುತ್ತದೆ.

ಈ ಚುನಾವಣೆಯಲ್ಲಿ ಮತ ಚಲಾವಣೆಯ ಬಗ್ಗೆ ಮತದಾರರಲ್ಲಿ ಸಾಕಷ್ಟು ಜಾಗೃತಿಯೂ ಬೇಕಾಗುತ್ತದೆ. ಏಕೆಂದರೆ, 2018ರಲ್ಲಿ ನಡೆದಿದ್ದ ಚುನಾವಣೆಯಲ್ಲಿ 819 ಮತಗಳನ್ನು 'ಕುಲಗೆಟ್ಟ ಮತ'ಗಳು ಎಂದು ಪರಿಗಣಿಸಿ ತಿರಸ್ಕರಿಸಲಾಗಿತ್ತು. ಇದು, ಫಲಿತಾಂಶದ ಮೇಲೆ ಬಹಳಷ್ಟು ಪರಿಣಾಮವನ್ನು ಬೀರಿತ್ತು. ಆಗ ಜೆಡಿಎಸ್ ಅಭ್ಯರ್ಥಿ ಮರಿತಿಬ್ಬೇಗೌಡ ಗೆದ್ದಿದ್ದರು; ಕಾಂಗ್ರೇಸ್‌ನ ಎಂ. ಲಕ್ಷ್ಮಣ ಸೋಲನುಭವಿಸಿದ್ದರು. ಮರಿತಿಬ್ಬೇಗೌಡ ಅವರು ಈಗ ಕಾಂಗ್ರೇಸ್‌ನಿಂದ ಕಣದಲ್ಲಿದ್ದಾರೆ. ಅವರ ಪರವಾಗಿ ಲಕ್ಷ್ಮಣ ಕೆಲಸ ಮಾಡುತ್ತಿದ್ದಾರೆ.

ಮತ ಎಣಿಕಾ ಕೇಂದ್ರಕ್ಕೆ 3 ಸುತ್ತಿನ ಭದ್ರತೆ : ಡಿಸಿ ಶುಭ ಕಲ್ಯಾಣ್

• ಉದಯವಾಹಿನಿ ತುಮಕೂರು

ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಜೂನ್ 4ರಂದು ನಗರದ ವಿಶ್ವವಿದ್ಯಾಲಯ ವಿಜ್ಞಾನ ಕಾಲೇಜು ಹಾಗೂ ಪಾಲಿಟೆಕ್ನಿಕ್ ಕಾಲೇಜ್‌ನಲ್ಲಿ ಮತ ಎಣಿಕೆ ನಡೆಯಲಿದ್ದು, ಎಣಿಕಾ ಕೇಂದ್ರಕ್ಕೆ 3 ಸುತ್ತಿನ ಭದ್ರತೆ ಒದಗಿಸಲು ಭಾರತ ಚುನಾವಣಾ ಆಯೋಗವು ಸೂಚಿಸಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿರುವ ಎನ್‌ಐಸಿಕಚೇರಿಯಲ್ಲಿಂದು ನವದೆಹಲಿಯ ಭಾರತ ಚುನಾವಣಾ ಆಯೋಗದಿಂದ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಭಾಗವಹಿಸಿದ ನಂತರ ಪತ್ರಿಕಾ ಹೇಳಿಕೆ ನೀಡಿದ ಅವರು ಎಣಿಕೆ ಪ್ರಕ್ರಿಯೆಯನ್ನು ಸುವ್ಯವಸ್ಥಿತವಾಗಿ ನಡೆಸುವ ನಿಟ್ಟಿನಲ್ಲಿ ಎಣಿಕಾ ಕೇಂದ್ರದ ಆವರಣದ ಸುತ್ತಲಿನ 100 ಮೀಟರ್ ವ್ಯಾಪ್ತಿಯ ಪರಿಧಿಯಲ್ಲಿ ವಾಹನಗಳನ್ನು ನಿರ್ಬಂ

ಉದಯವಾಹಿನಿ ಚಿತ್ರ

> ಚುನಾವಣಾ ಆಯೋಗದ ನಿರ್ದೇಶನದಂತೆ ಮತ ಎಣಿಕಾ ದಿನದಂದು ಭದ್ರತಾ ಕೊಠಡಿಯಿಂದ ಎಣಿಕಾ ಕೇಂದ್ರದೊಳಗೆ ವಿದ್ಯುನ್ಮಾನ ಮತ ಯಂತ್ರಗಳನ್ನು ಸಾಗಿಸುವ ಪೂರ್ಣ ಪ್ರಕ್ರಿಯೆಯನ್ನು ನಿಗಾವಹಿಸಲು 360 ಡಿಗ್ರಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು -ಶುಭ ಕಲ್ಯಾಣ್

ಧಿಸಿ ಪಾದಚಾರಿ ವಲಯವೆಂದು ಗುರುತಿಸಿ ಮೊದಲ ಸುತ್ತಿನ ಭದ್ರತೆ ಒದಗಿಸಲಾಗುವುಲ್ಲದೆ 2ನೇ ಸುತ್ತಿನಲ್ಲಿ ರಾಜ್ಯ ಪೊಲೀಸ್ ಹಾಗೂ 3ನೇ ಸುತ್ತಿನಲ್ಲಿ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಯಿಂದ ಭದ್ರತೆ ಒದಗಿಸಲಾಗುವುದು ಎಂದು ತಿಳಿಸಿದರು.

ಮತ ಎಣಿಕಾ ಸಿಬ್ಬಂದಿ, ಎಣಿಕಾ ಏಜೆಂಟ್, ಅಭ್ಯರ್ಥಿಗಳು ಸೇರಿದಂತೆ ಯಾರಿಗೂ ಎಣಿಕಾ ಕೇಂದ್ರದೊಳಗೆ ಮೊಬೈಲ್ ತರಲು ಅವಕಾಶವಿರುವುದಿಲ್ಲ. ಮೊಬೈಲ್‌ಗಳನ್ನು ಸುರಕ್ಷಿತವಾಗಿಡಲು ಎಣಿಕಾ ಕೇಂದ್ರದ ಆವರಣದಲ್ಲಿ ಮೊಬೈಲ್ ಡೆಪಾಸಿಟ್ ಕೇಂದ್ರಗಳ ವ್ಯವಸ್ಥೆ ಮಾಡಲಾಗಿದ್ದು, ಸಂಬಂಧಿಸಿದವರು ಎಣಿಕಾ ಕೇಂದ್ರದೊಳಗೆ ಬರುವ ಮುನ್ನ ತಮ್ಮ ಮೊಬೈಲ್‌ಗಳನ್ನು ಈ ಡೆಪಾಸಿಟ್ ಕೇಂದ್ರದಲ್ಲಿಡತಕ್ಕದ್ದು. ಮಹಿಳೆ ಹಾಗೂ ಪುರುಷರನ್ನು ತಪಾಸಣೆ ಮಾಡಲು ಪ್ರತ್ಯೇಕವಾಗಿ ಮಹಿಳಾ ಹಾಗೂ ಪುರುಷ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುವುದು ಎಂದು ತಿಳಿಸಿದರು. ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳೆ, ಚುನಾವಣಾ ತಹಶೀಲ್ದಾರ್ ರೇಷ್ಮ, ಟೂಡಾ ಆಯುಕ್ತ ಬಸಂತಿ ಸೇರಿದಂತೆ ಮತ್ತಿತರರಿದ್ದರು.

ಗೋಪಹಳ್ಳಿ ಗ್ರಾ.ಪಂ.ಗೆ ಕವಿತಾ ಅಧ್ಯಕ್ಷೆ

• ಉದಯವಾಹಿನಿ ರಾಮನಗರ

ತಾಲ್ಲೂಕಿನ ಬಿಡದಿ ಹೋಬಳಿಯ ಎಂ. ಗೋಪಹಳ್ಳಿ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷೆಯಾಗಿ ಕಾಂಗ್ರೇಸ್ ಬೆಂಬಲಿತ ಅಭ್ಯರ್ಥಿ ಕವಿತಾ ಭುಜಲಿಂಗಯ್ಯ ಹಾಗೂ ಉಪಾಧ್ಯಕ್ಷರಾಗಿ ಪ್ರಕಾಶ್ ಸೋಮವಾರ ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ. ಪಂಚಾಯಿತಿ ಕಾರ್ಯಾಲಯದದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಹುಚ್ಚಮ್ಮನದೊಡ್ಡಿಯ ಕವಿತಾ ಹಾಗೂ ಕೆ.ಗೋಪಹಳ್ಳಿಯ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಲತಾ ನಾಮಪತ್ರ ಸಲ್ಲಿಸಿದ್ದರು.

ಚುನಾವಣೆಯಲ್ಲಿ ಕವಿತಾ 16 ಮತ ಪಡೆದು ಪ್ರತಿಸ್ಪರ್ಧಿ ಲತಾ ಅವರ ವಿರುದ್ಧ 6 ಮತಗಳ ಅಂತರದಿಂದ ಗೆಲುವು ಸಾಧಿಸಿದರು.

ಉಪಾಧ್ಯಕ್ಷ ಸ್ಥಾನಕ್ಕೆ ಚೌಕಹಳ್ಳಿಯ ಪ್ರಕಾಶ್ ಹಾಗೂ ಎಂ.ಜಿ. ಪಾಳ್ಯದ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ವಿನೋದ್ ನಾಮಪತ್ರ ಸಲ್ಲಿಸಿದ್ದರು. ಚುನಾವಣೆಯಲ್ಲಿ ಪ್ರಕಾಶ್ 15 ಮತ ಪಡೆದು, ವಿನೋದ್ ವಿರುದ್ಧ


ಉದಯವಾಹಿನಿ ಚಿತ್ರ

4 ಮತಗಳ ಅಂತರದಿಂದ ಜಯ ಸಾಧಿಸಿದರು. ಪಂಚಾಯಿತಿಯ 26 ಸದಸ್ಯರ ಪೈಕಿ ಕಾಂಗ್ರೇಸ್ ಬೆಂಬಲಿತ 15 ಹಾಗೂ ಜೆಡಿಎಸ್ ಬೆಂಬಲಿ 11 ಸದಸ್ಯರಿದ್ದರು. ಆದರೆ, ಅಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಕವಿತಾ ಅವರು 16 ಮತ ಪಡೆದು ಅಚ್ಚರಿ ಮೂಡಿಸಿದರು.

ಚುನಾವಣಾ ಅಧಿಕಾರಿಯಾಗಿ ಅರಣ್ಯ ಇಲಾಖೆಯ ಮಲ್ಲೇಶ್ ಕಾರ್ಯನಿರ್ವಹಿಸಿದರು. ಚುನಾವಣೆ ಫಲಿತಾಂಶ ಘೋಷಣೆಯಾಗುತ್ತಿದ್ದಂತೆ ಕಾಂಗ್ರೇಸ್ ಕಾರ್ಯಕರ್ತರು ಮತ್ತು ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ನೂತನ ಅಧ್ಯಕ್ಷ-ಉಪಾಧ್ಯಕ್ಷರನ್ನು ಮುಖಂಡರು ಅಭಿನಂದಿಸಿದರು.

ನನ್ನ ಕೂದಲಿನ ಬಗ್ಗೆ ಮಾತಾಡಿ ಬಿಜೆಪಿ 26 ಸ್ಥಾನದಿಂದ 6 ಕ್ಕೆ ಇಳಿಯುತ್ತೆ : ಮಧು ಬಂಗಾರಪ್ಪ ಲೇವಡಿ

• ಉದಯವಾಹಿನಿ ಮೈಸೂರು

ಮಧು ಹೇರ್ ಕಟ್ ವಿಚಾರವಾಗಿ ವಿಜಯೇಂದ್ರ ಹೇಳಿಕೆ ವಿಚಾರ ಮೈಸೂರಿನಲ್ಲಿ ವಿಜಯೇಂದ್ರ ವಿರುದ್ಧ ಮಧು ಬಂಗಾರಪ್ಪ ಆಕ್ರೋಶ ಹೊರ ಹಾಕಿದ್ದಾರೆ. ಮಾತನಾಡುವವರು ಬಂದು ಹೇರ್ ಕಟ್ ಮಾಡಲಿ. ಡಿಕೆ ಗಡ್ಡದ ಬಗ್ಗೆ ಮಾತನಾಡಿ 130 ಸ್ಥಾನದಿಂದ 60ಕ್ಕೆ ಬಂದರು. ಈಗ ನನ್ನ ಕೂದಲು ಬಗ್ಗೆ ಮಾತಾಡಿ 26 ರಿಂದ 6ಕ್ಕೆ ಬರುತ್ತಾರೆ ಎಂದು ಲೇವಡಿ ಮಾಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಬ್ದುಲ್ ಕಲಾಂ ಹೇರ್ ಸ್ಟೈಲ್ ಬಗ್ಗೆ ಬಿಜೆಪಿಗರು ಮಾತಾಡಿದ್ರಾ? ಮೋದಿ ಕೊವಿಡ್ ಟೈಮ್ ನಲ್ಲಿ ಗಡ್ಡ ಬಿಟ್ಟಿದ್ದರು ಏಕೆ ಪ್ರಶ್ನೆಸಲಿಲ್ಲ? ನನ್ನ ಹೇರ್ ಸ್ಟೈಲ್ ಬಗ್ಗೆ ಮಾತನಾಡುವುದು ಒಂದು ವಿಷಯವಾ? ಎಂದು ಮೈಸೂರಿನಲ್ಲಿ ವಿಜಯೇಂದ್ರ ವಿರುದ್ಧ ಮಧು ಬಂಗಾರಪ್ಪ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದಲ್ಲಿ ಈಗಾಗಲೇ ಶಾಲೆಗಳು ಆರಂಭವಾಗಿ

ಉದಯವಾಹಿನಿ ಚಿತ್ರ

ದ್ದು, ಮಕ್ಕಳು ಉತ್ಸಾಹದಿಂದ ಶಾಲೆಯತ್ತ ಮುಖ ಮಾಡಿದ್ದಾರೆ. ಇದೆ ವೇಳೆ ಈ ಬಾರಿ ಶಾಲಾ ಪಠ್ಯ ಪುಸ್ತಕದಲ್ಲಿ ಯಾವುದೇ ರೀತಿಯಾದ ಪರಿಷ್ಕರಣೆ ಇಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಪಷ್ಟಣೆ ನೀಡಿದರು. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಶಾಲಾ ಪಠ್ಯಪುಸ್ತಕದ ಪರಿಷ್ಕರಣೆ ಇಲ್ಲ. ಕೆಲವು ವ್ಯಾಕರಣ ಹಾಗೂ ಪದಗಳ ಬದಲಾವಣೆ ಮಾಡಲಾಗಿದೆ. ತಪ್ಪಿದ್ದನ್ನು ಸರಿ ಮಾಡಲಾಗಿದೆ. ಒಂದು ಪೇಜ್ ಬದಲಾಗಿದೆ ಎಂದು ಮೈಸೂರಿನಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿಕೆ ನೀಡಿದರು.

ಬೆಳ್ಳೂರಿನಲ್ಲಿ ಗುಂಪು ಘರ್ಷಣೆ: ಬಿಗುವಿನ ವಾತಾವರಣ

• ಉದಯವಾಹಿನಿ ಮಂಡ್ಯ

ನಾಗಮಂಗಲ ತಾಲ್ಲೂಕು ಬೆಳ್ಳೂರು ಪಟ್ಟಣದಲ್ಲಿ ಸೋಮವಾರ ರಾತ್ರಿ 2 ಗುಂಪುಗಳ ನಡುವೆ ಘರ್ಷಣೆ ನಡೆದಿದ್ದು ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ಪರಿಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದ್ದು ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

ಮುಸ್ಲಿಂ ಯುವಕರ ಗುಂಪೊಂದು ಬೆಳ್ಳೂರಿನ ಯುವಕ ಅಭಿಲಾಷ್ ಮನೆಗೆ ನುಗ್ಗಿ ಹಲ್ಲೆ ಮಾಡಿದ್ದಾರೆ, ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಬೆಳ್ಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆ ಖಂಡಿಸಿ ನೂರಾರು ಜನರು ಸೋಮವಾರ ರಾತ್ರಿಯೇ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಿದರು. ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಪಟ್ಟುಹಿಡಿದರು. ಈ ವೇಳೆ ಪ್ರತಿಭಟನಾಕಾರರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸಪಡಬೇಕಾಯಿತು.

ಉದಯವಾಹಿನಿ ಚಿತ್ರ

> ಸ್ಥಳಕ್ಕೆ ದಕ್ಷಿಣ ವಲಯ ಐಜಿಪಿ ಅಮಿತ್ ಸಿಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. 'ದೂರು-ಪ್ರತಿದೂರು ದಾಖಲಾಗಿದ್ದು ವಿಚಾರಣೆ ನಡೆಸಲಾಗುತ್ತಿದೆ. ಪರಿಸ್ಥಿತಿಯನ್ನು ತಿಳಿಗೊಳಿಸಲಾಗಿದೆ' -ಎನ್.ಯತೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಘಟನೆಯ ವಿವರ: ಮೇ 25ರಂದು ಅಭಿಷೇಕ್ ಬೈಕ್‌ನಲ್ಲಿ ತೆರಳುತ್ತಿದ್ದಾಗ ಯುವಕರ ಗುಂಪು ವೇಗವಾಗಿ ಬೈಕ್‌ನಲ್ಲಿ ಬಂದಿದೆ. ಅಭಿಲಾಷ್ ಬೈಕ್‌ಗೆ ಸ್ಪರ್ಶಿಸಿ ಮುಂದೆ ತೆರಳಿದ್ದಾರೆ. ಇದನ್ನು ಪ್ರಶ್ನಿಸಿದ ಕಾರಣಕ್ಕೆ ಅವರು ಅಭಿಲಾಷ್ ಮೇಲೆ ಹಲ್ಲೆ ನಡೆಸಿದ್ದಾರೆ. ಜೊತೆಗೆ ಗುಂಪು ಕಟ್ಟಿಕೊಂಡು ಮನೆಗೆ ನುಗ್ಗಿ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಲಾಗಿದೆ. ಮುಸ್ಲಿಂ ಯುವಕರು ಕೂಡ ಅಭಿಲಾಷ್ ಹಾಗೂ ಇತರರು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿ ಪ್ರತಿ ದೂರು ನೀಡಿದ್ದಾರೆ.

ಘಟನೆಯಲ್ಲಿ ಗಾಯಗೊಂಡಿದ್ದ ಅಭಿಲಾಷ್ ಆದಿಚುಂಚನಗಿರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಜೆಡಿಎಸ್ ಮುಖಂಡ ಸುರೇಶ್‌ಗೌಡ ಮಂಗಳವಾರ ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಕಾಂಗ್ರೇಸ್ ಸರ್ಕಾರ ರಚನೆಯಾದ ನಂತರ ಹಿಂದೂ ಯುವಕರ ಮೇಲೆ ಹಲ್ಲೆ, ಕೊಲೆ ಪ್ರಕರಣಗಳು ಹೆಚ್ಚುತ್ತಿವೆ. ಇದಕ್ಕೆಲ್ಲಾ ಸರ್ಕಾರವೇ ಕುಮ್ಮಕ್ಕು ನೀಡುತ್ತಿದೆ' ಎಂದು ಆರೋಪಿಸಿದರು.

• ಉದಯವಾಹಿನಿ ಚಿಕ್ಕಬಳ್ಳಾಪುರ

ಗುರುವನ್ನು ಸಾಕ್ಷತ್ ಪರಬ್ರಹ್ಮನಿಗೆ ಹೋಲಿಕೆ ಮಾಡಲಾಗುತ್ತದೆ. ಮಕ್ಕಳಿಗೆ ದಾರಿ ತೋರಿಸದ ಬೇಕಾದ ಗುರುವೇ ದಾರಿ ತಪ್ಪಿದ್ದಾನೆ. ಚಿಕ್ಕಬಳ್ಳಾಪುರದಲ್ಲಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಅಪ್ರಾಪ್ರ ಮೇಲೆ ಎರಗಿ ಲೈಂಗಿಕ ದೌರ್ಜನ್ಯವನ್ನು ಎಸಗಿದ್ದಾನೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟದಲ್ಲಿ 7ನೇ ತರಗತಿ ವಿದ್ಯಾರ್ಥಿನಿಯ ಮೇಲೆ ಮುಖ್ಯ ಶಿಕ್ಷಕನೇ ಅತ್ಯಾಚಾರವೆಸಗಿದ್ದಾನೆ ಎಂಬ ಆರೋಪ ಕೇಳಿ ಬಂದಿದೆ. ಸರ್ಕಾರಿ ಶಾಲೆ ಮುಖ್ಯ ಶಿಕ್ಷಕ ವೆಂಕಟೇಶ ಎಂಬಾತನನ್ನು ಬಂಧಿಸಲಾಗಿದೆ. ವೆಂಕಟೇಶ್ 7ನೇ ತರಗತಿಯ ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ್ದು, ಆಕೆ 3 ತಿಂಗಳ ಗರ್

ಅಂತರಾಳದಿಂದ... EDITORIAL

ಐಪಿಎಲ್: ಕೋಲ್ಕತ್ತ ತಂಡದ ಸಾಂಘಿಕ ಪ್ರಯತ್ನಕ್ಕೆ ಸಂದ ಜಯ

ಹೊಸ ಚಿಗುರು ಹಳೆ ಬೇರು ಕೂಡಿರಲು ಮರ ಸೊಬಗು ಎಂಬುದನ್ನು ಕೋಲ್ಕತ್ತ ನೈಟ್ ರೈಡರ್ಸ್ ತಂಡವು ಸಾಬೀತು ಮಾಡಿದೆ. ಅನುಭವಿ ಹಾಗೂ ಯುವ ಆಟಗಾರರ ಸಾಂಘಿಕ ಪ್ರಯತ್ನವು ತಂಡದ ಬಲ ಹೆಚ್ಚಿಸಿತು. ಜೊತೆಗೆ ಶಿಸ್ತಿನ ಮಾರ್ಗದರ್ಶನವೂ ದೊರೆತ ಕಾರಣ ತಂಡವು ಇಂಡಿಯನ್ ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಿಯ 17ನೇ ಆವೃತ್ತಿಯಲ್ಲಿ ಪ್ರಶಸ್ತಿ ಜಯಿಸಿತು. ಈ ತಂಡವು ಐಪಿಎಲ್ ಇತಿಹಾಸದಲ್ಲಿ ಜಯಿಸಿದ ಮೂರನೇ ಟ್ರೋಫಿ ಇದಾಗಿದೆ. ಅದೂ ಹತ್ತು ವರ್ಷಗಳ ನಂತರ ಈ ಸಾಧನೆ ಮಾಡಿದೆ. 2012 ಹಾಗೂ 2014ರಲ್ಲಿ ತಂಡವು ಪ್ರಶಸ್ತಿ ಜಯಿಸಿದಾಗ ನಾಯಕರಾಗಿದ್ದ ಗೌತಮ್ ಗಂಭೀರ್ ಈ ಬಾರಿ ಮೆಂಟರ್ ಆಗಿದ್ದರು. ಅವರೊಂದಿಗೆ ದೇಶಿ ಕ್ರಿಕೆಟ್‌ನ ಯಶಸ್ವಿ ತರಬೇತುದಾರರಾದ ಚಂದ್ರಕಾಂತ್ ಪಂಡಿತ್, ಅಭಿಷೇಕ್ ನಾಯರ್, ಭರತ್ ಅರುಣ್ ಹಾಗೂ ನೆರವು ಸಿಬ್ಬಂದಿಯ ಶ್ರಮಕ್ಕೆ ಸಿಹಿಫಲ ಲಭಿಸಿದೆ. ರಣಜಿ ಟ್ರೋಫಿ ಟೂರ್ನಿಯ ಪಂದ್ಯಗಳಲ್ಲಿ ಆಡದ ಕಾರಣಕ್ಕೆ ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿಯ ಕೆಂಗಣ್ಣಿಗೆ ಗುರಿಯಾಗಿದ್ದ ಶ್ರೇಯಸ್ ಆಯ್ಕರ್ ಅವರಿಗೆ ನಾಯಕತ್ವದ ಜವಾಬ್ದಾರಿ ನೀಡಿದ ಕೆಕೆಆರ್ ಆಡಳಿತ ಮಂಡಳಿ ಬಗ್ಗೆ ಟೀಕೆಗಳು ಕೇಳಿಬಂದಿದ್ದವು. ಹರಾಜು ಪ್ರಕ್ರಿಯೆಯಲ್ಲಿ ರೂ.24.75 ಕೋಟಿ (ಐಪಿಎಲ್ ಇತಿಹಾಸದ ಗರಿಷ್ಠ ಮೌಲ್ಯ) ಪಡೆದು ಕೆಕೆಆರ್‌ಗೆ ಸೇರ್ಪಡೆಯಾಗಿದ್ದ ಆಸ್ಟ್ರೇಲಿಯಾದ ವೇಗಿ ಮಿಚೆಲ್ ಸ್ಟಾರ್ಕ್ ಅವರು ಆರಂಭಿಕ ಪಂದ್ಯಗಳಲ್ಲಿ ವೈಫಲ್ಯ ಅನುಭವಿಸಿದ್ದರು. ಆದರೆ ಫೈನಲ್ ಹಾಗೂ ಕ್ವಾಲಿಫೈಯರ್ ಪಂದ್ಯಗಳಲ್ಲಿ ಸ್ಟಾರ್ಕ್ ಅವರೇ ತಂಡದ ಗೆಲುವಿನ ರೂವಾರಿಯಾದರು. ಅನುಭವಿ ಆಲ್‌ರೌಂಡರ್ ಸುನಿಲ್ ನಾರಾಯಣ್ ಮತ್ತು ಆಯಂಡ್ರೆ ರಸೆಲ್ ಅವರ ಮೇಲೆ ತಂಡವು ಇಟ್ಟ ವಿಶ್ವಾಸ ಹುಸಿಯಾಗಲಿಲ್ಲ. ಯುವ ಆಟಗಾರರಾದ ವರುಣ್ ಚಕ್ರವರ್ತಿ, ಅಂಗಕ್ರಿಷ್ ರಘುವಂಶಿ, ರಮಣದೀಪ್ ಸಿಂಗ್ ಹಾಗೂ ವೆಂಕಟೇಶ್ ಅಯ್ಯರ್ ಅವರೂ ತಮ್ಮ ಮೇಲಿಟ್ಟ ನಂಬಿಕೆ ಉಳಿಸಿಕೊಂಡರು. ಎಲ್ಲಾಕ್ಕಿಂತ ಮುಖ್ಯವಾಗಿ ಈ ತಂಡದಲ್ಲಿ ವಿರಾಟ್ ಕೊಹ್ಲಿ, ರೋಹಿತ್ ಶರ್ಮಾ ಅಥವಾ ಮಹೇಂದ್ರಸಿಂಗ್ ಧೋನಿ ಅವರಂತಹ ದೊಡ್ಡ ತಾರೆಗಳು ಇರಲಿಲ್ಲ. ಆದರೂ ಒಂದು ತಂಡವಾಗಿ ಆಲ್‌ರೌಂಡ್ ಆಟವಾಡಿದರೆ ಪ್ರಶಸ್ತಿ ಜಯಿಸುವುದು ಸಾಧ್ಯ ಎಂಬ ಮಾದರಿಯನ್ನು ಚಲನಚಿತ್ರ ನಟ ಶಾರೂಕ್ ಖಾನ್ ಮಾಲೀಕತ್ವದ ಕೆಕೆಆರ್ ತೋರಿಸಿಕೊಟ್ಟಿದೆ. ಜೂನ್ 2ರಿಂದ ವೆಸ್ಟ್ ಇಂಡೀಸ್ ಮತ್ತು ಅಮೆರಿಕ ಆತಿಥ್ಯದಲ್ಲಿ ನಡೆಯಲಿರುವ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಆಡಲಿರುವ ತಂಡಗಳಿಗೂ ಕೆಕೆಆರ್ ಅನುಸರಿಸಿದ ಮಾದರಿಯು ನೆರವಾಗಬಹುದು. ಫೈನಲ್‌ಗೆ ಪ್ರವೇಶಿಸಿದ್ದ ಪ್ಯಾಟ್ ಕಮಿನ್ಸ್ ನಾಯಕತ್ವದ ಸನ್‌ರೈಸರ್ಸ್ ಹೈದರಾಬಾದ್ ತಂಡದ ಬ್ಯಾಟರ್‌ಗಳು ಟೂರ್ನಿಯ ಆರಂಭದಿಂದಲೂ ಅಬ್ಬರಿಸಿದ್ದರು. ರನ್‌ಗಳ ಹೊಳೆ ಹರಿಸಿದ್ದರು. ಆದರೆ ಫೈನಲ್‌ನಲ್ಲಿ ಕೆಕೆಆರ್ ಬೌಲರ್‌ಗಳು ಚುಟುಕು ಮಾದರಿಯ ಕ್ರಿಕೆಟ್ ಬರೀ ಬ್ಯಾಟರ್ಗಳದ್ದಲ್ಲ ಎಂಬುದನ್ನು ತೋರಿಸಿಕೊಟ್ಟರು. ಈ ಬಾರಿಯ ಟೂರ್ನಿಯಲ್ಲಿ ಭಾಗವಹಿಸಿದ್ದ ಹತ್ತು ತಂಡಗಳಲ್ಲಿಯೂ ಹೊಸ ಪ್ರತಿಭೆಗಳು ಗಮನ ಸೆಳೆದವು. ಅಭಿಷೇಕ್ ಶರ್ಮಾ. ರಘುವಂಶಿ. ಅಶುತೋಷ್ ಸಿಂಗ್, ಅಭಿಷೇಕ್ ಪೊರೆಲ್, ತುಷಾರ್ ದೇಶಪಾಂಡೆ, ಸಾಯಿಸುದರ್ಶನ್, ಮಯಂಕ್ ಯಾದವ್, ಆಕಾಶ್ ಮಧ್ವಾಲ್, ರಿಯಾನ್ ಪರಾಗ್ ಹಾಗೂ ರಜತ್ ಪಾಟೀದಾರ್ ಭವಿಷ್ಯದಲ್ಲಿಯೂ ಬೆಳಗುವ ಭರವಸೆ ಮೂಡಿಸಿದರು. ಆಸ್ಟ್ರೇಲಿಯಾದ ಬೇಕ್ ಪ್ರೈಸರ್ ಮೆಕ್‌ರ್ಕ್ ಹಾಗೂ ಆರ್‌ಸಿಬಿಯಲ್ಲಿ ಆಡಿದ ಇಂಗ್ಲೆಂಡ್ ಆಟಗಾರ ವಿಲ್ ಜ್ಯಾಕ್ಸ್ ತಮ್ಮ ಛಾಪು ಮೂಡಿಸಿದರು. ಈ ಯುವ ಆಟಗಾರರೊಂದಿಗೆ ಪೈಪೋಟಿಗೆ ಬಿದ್ದಂತೆ ಆಡಿದ ಅನುಭವಿ ಆಟಗಾರರೂ ಮಿಂಚಿದರು. ಟೂರ್ನಿಯಲ್ಲಿ ವಿರಾಟ್ ಕೊಹ್ಲಿ ಅತಿ ಹೆಚ್ಚು ರನ್ ಗಳಿಸಿ ಆರೆಂಜ್ ಕ್ಯಾಪ್ ಪಡೆದರು. ಬಹುತೇಕ ಕೊನೆಯ ಐಪಿಎಲ್ ಆಡಿದ ಮಹೇಂದ್ರಸಿಂಗ್ ಧೋನಿ ಅವರು 110 ಮೀಟರ್ ದೂರದ ಸಿಕ್ಸರ್ ಬಾರಿಸಿದರು. ಕ್ರಿಕೆಟ್‌ಗೆ ವಿದಾಯ ಘೋಷಿಸಿದ ದಿನೇಶ್ ಕಾರ್ತಿಕ್, ಫಫ್ ಡುಪ್ಲೆಸಿ, ಟ್ರಾವಿಸ್ ಹೆಡ್. ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡು ದೀರ್ಘಕಾಲದ ಚಿಕಿತ್ಸೆಯ ನಂತರ ಕಣಕ್ಕೆ ಮರಳಿದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಾಯಕ ರಿಷಭ್ ಪಂತ್ ಅವರ ಆಟ ಉತ್ತಮವಾಗಿತ್ತು. ಆದರೆ ಅಪಾರ ನಿರೀಕ್ಷೆ ಮೂಡಿಸಿದ್ದ ಕೆಲವು ಆಟಗಾರರು ನಿರಾಶೆಗೊಳಿಸಿದರು. ಅದರಲ್ಲಿ ಹಾರ್ದಿಕ್ ಪಾಂಡ್ಯ ಪ್ರಮುಖರು. ಗುಜರಾತ್ ಟೈಟನ್ಸ್‌ನಿಂದ ಅವರನ್ನು ಮುಂಬೈ ಇಂಡಿಯನ್ಸ್ ತಂಡವು ಕರೆದುಕೊಂಡು ಬಂದು ನಾಯಕತ್ವ ನೀಡಿತ್ತು. ಅದಕ್ಕಾಗಿ ರೋಹಿತ್ ಶರ್ಮಾ ಅವರನ್ನು ಕೆಳಗಿಳಿಸಲಾಗಿತ್ತು. ಆದರೆ ಆ ತಂಡದ ಅಭಿಮಾನಿಗಳು ಇದನ್ನು ಒಪ್ಪಿಕೊಳ್ಳಲಿಲ್ಲ. ಮುಂಬೈ ಇಂಡಿಯನ್ಸ್ ತಂಡವು ಪಂದ್ಯಗಳನ್ನು ಆಡಿದ ಕ್ರೀಡಾಂಗಣಗಳಲ್ಲಿ ಸೇರಿದ್ದ ಅಭಿಮಾನಿಗಳು ಹಾರ್ದಿಕ್ ಅವರನ್ನು ನಿಂದಿಸಿದ್ದು ದೊಡ್ಡ ಸುದ್ದಿಯಾಯಿತು. ಇವೆಲ್ಲದರಾಚೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಈ ಸಲವೂ ಕಪ್ ಜಯಿಸಲಿಲ್ಲ. ಟೂರ್ನಿಯ ಮೊದಲಾರ್ಧದಲ್ಲಿ ಸತತ ಸೋಲುಗಳನ್ನು ಅನುಭವಿಸಿದ ಆರ್‌ಸಿಬಿ. ಲೀಗ್ ಹಂತದಲ್ಲಿ ತನ್ನ ಕೊನೆಯ ಆರು ಪಂದ್ಯಗಳಲ್ಲಿ ಸತತ ಜಯ ಸಾಧಿಸಿ ಪ್ಲೇಆಫ್ ಪ್ರವೇಶಿಸಿದ್ದು ರೋಚಕ ಕತೆಯಾಗಿ ದಾಖಲಾಯಿತು. ಹಣ ಹೂಡಿದವರಿಗೆ ಭರ್ಜರಿ ಆದಾಯ ಮತ್ತು ನೋಡುಗರಿಗೆ ಹೇರಳ ಮನರಂಜನೆ ನೀಡಿದ ಮತ್ತೊಂದು ಐಪಿಎಲ್ ಟೂರ್ನಿಯು ಇತಿಹಾಸದ ಪುಟ ಸೇರಿತು.

ಬೆಂಗಳೂರಿನಲ್ಲಿ ಆರ್‌ಸಿಬಿ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ಪಂದ್ಯದ ನಂತರವೂ ಉಭಯ ತಂಡಗಳ ಅಭಿಮಾನಿಗಳ ಸಂಘರ್ಷಗಳು ಸುದ್ದಿ ಮಾಡಿದ್ದವು. ಲಖನ್ ಸೂಪರ್‌ಜೈಂಟ್ಸ್ ನಾಯಕ, ಕನ್ನಡಿಗ ಕೆ.ಎಲ್. ರಾಹುಲ್ ಅವರನ್ನು ತಂಡದ ಮಾಲೀಕರು 'ತರಾಟೆ'ಗೆ ತೆಗೆದುಕೊಂಡ ವಿಡಿಯೊ ದೊಡ್ಡ ಚರ್ಚೆಗೆ ಕಾರಣವಾಯಿತು. ಇಂಪಾಕ್ಟ್ ಪ್ಲೇಯರ್ ನಿಯಮಕ್ಕೆ ಪ್ರಮುಖ ಆಟಗಾರರಿಂದ ವಿರೋಧ ವ್ಯಕ್ತವಾಯಿತು.

ಬಿಬಿಎಂಪಿ ಶಾಲಾ, ಕಾಲೇಜು ಶಿಕ್ಷಕರ ನೇಮಕಾತಿ ಗುತ್ತಿಗೆ ರದ್ದು

■ ಬಿಬಿಎಂಪಿ ಶಿಕ್ಷಕರ ನೇಮಕಾತಿ ಟೆಂಡರ್ ರದ್ದುಗೊಳಿಸಿ ಆದೇಶ

• ಉದಯವಾಹಿನಿ, ಬೆಂಗಳೂರು



ರಾಜ್ಯ ಸರ್ಕಾರದಿಂದ ಬಿಬಿಎಂಪಿ ಶಾಲಾ, ಕಾಲೇಜು ಶಿಕ್ಷಕರ ನೇಮಕಾತಿ ಗುತ್ತಿಗೆಯನ್ನು ರದ್ದುಗೊಳಿಸಿ ಆದೇಶಿಸಿದೆ. ಈ ಮೂಲಕ ತೀವ್ರ ಮುಜುಗರಕ್ಕೆ ಕಾರಣವಾಗಿದ್ದಂತ ಬಿಬಿಎಂಪಿ ಶಿಕ್ಷಕರ ನೇಮಕಾತಿ ಟೆಂಡರ್ ರದ್ದುಗೊಳಿಸಿ ಆದೇಶಿಸಿದೆ.

ಮಾಜಿ ಶಿಕ್ಷಣ ಸಚಿವ ಎಸ್ ಸುರೇಶ್ ಕುಮಾರ್ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಈ ಹಿಂದೆಯೂ ಈ ವಿಚಾರವನ್ನು ರಾಜ್ಯದ ಉಪಮುಖ್ಯಮಂತ್ರಿಗಳ ಗಮನಕ್ಕೆ ಹಾಗೂ ಬಿಬಿಎಂಪಿಯ ಮುಖ್ಯ ಆಯುಕ್ತರ ಗಮನಕ್ಕೆ ತಂದಿದ್ದೆ. ಆಗ ಅದನ್ನು ಪರಿಶೀಲಿಸುವುದಾಗಿ ಹೇಳಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಯಿತು ಎಂದಿದ್ದರು.

ಇದೀಗ ಮತ್ತೆ ಅದೇ ಹುಚ್ಚು ಅಥವಾ ಹಾಸ್ಯಾಸ್ಪದ ಪ್ರಯತ್ನ. ಬಿಬಿಎಂಪಿ ಹೊರ ಗುತ್ತಿಗೆ ಶಿಕ್ಷಕರ ಸೇವಾ ಪೂರೈಕೆ ಮಾಡಲು 3 ಸೆಕ್ಯೂರಿಟಿ ಏಜೆನ್ಸಿ ಪರವಾನಗಿ.

ಶಿಕ್ಷಕರ ನೇಮಕಾತಿ ಮತ್ತು ಸೇವಾ ಪೂರೈಕೆ ಮಾಡಲು ಸೆಕ್ಯೂರಿಟಿ ಏಜೆನ್ಸಿ ಗುತ್ತಿಗೆ, ಎಂತಹ ಸ್ಥಿತಿ ತಲುಪಿತು ಶಿಕ್ಷಣ ಕ್ಷೇತ್ರ. ಬಿಬಿಎಂಪಿ ಹೊರಗುತ್ತಿಗೆ ಶಿಕ್ಷಕರ ಸೇವಾ ಪೂರೈಕೆ ಮಾಡಲು ಮೂರು ಸೆಕ್ಯೂರಿಟಿ ಏಜೆನ್ಸಿ ಗುತ್ತಿಗೆ ನೀಡಿದೆ.

ಆರ್ಥಿಕವಾಗಿ ಹಿಂದುಳಿದ ಕುಟುಂಬದ ಮಕ್ಕಳು ಸರ್ಕಾರಿ ಶಾಲೆ ಮತ್ತು ಬಿಬಿಎಂಪಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಲು ಬರುತ್ತಾರೆ. ಬಿಬಿಎಂಪಿ 700ಕ್ಕೂ ಹೆಚ್ಚು ಹೊರಗುತ್ತಿಗೆ ಶಿಕ್ಷಕರು ಕೆಲಸ ಮಾಡುತ್ತಿದ್ದಾರೆ.

ಹೊರಗುತ್ತಿಗೆ ಶಿಕ್ಷಕರ ಸರಬರಾಜು ಮಾಡಲು ಈ ಬಾರಿ ಮೂರು ಸೆಕ್ಯೂರಿಟಿ ಏಜೆನ್ಸಿರವರಿಗೆ ಗುತ್ತಿಗೆ.

ಭದ್ರತಾ ಸಿಬ್ಬಂದಿ ನೇಮಿಸುವ ಮೂರು ಸೆಕ್ಯೂರಿಟಿ ಏಜೆನ್ಸಿಗಳಿಗೆ ಯಾವ ಮಾನದಂಡ ಅನುಸಾರ ಗುತ್ತಿಗೆ ನೀಡಿದರು ಎಂಬುದು ಯಕ್ಷ ಪ್ರಶ್ನೆಯಾಗಿದೆ. ಸೆಕ್ಯೂರಿಟಿ ಸರ್ವಿಸಸ್ ಸಂಸ್ಥೆಗಳು ಶಿಕ್ಷಕರ ಅರ್ಹತೆ, ಶಿಕ್ಷಕರು ಶಾಲೆಯಲ್ಲಿ ಪಾಠ ಮಾಡುವುದು ಮತ್ತು ನಡವಳಿಕೆ ಮಾಪನ ಮಾಡಲು ಸಾಧ್ಯವೇ? ಈ ಹಿಂದೆ ರಾಜ್ಯ ಶಿಕ್ಷಣ ಇಲಾಖೆಯ ವತಿಯಿಂದ ಹೊರಗುತ್ತಿಗೆ ಮೇಲೆ ಶಿಕ್ಷಕರನ್ನ ನೇಮಿಸಿಕೊಳ್ಳಲಾಗುವುದು ಎಂದು ಹೇಳಿದ್ದರು ಆದರೆ ಅದು ನಡೆಯಲಿಲ್ಲ ಸೆಕ್ಯೂರಿಟಿ ಏಜೆನ್ಸಿಗೂ ಶಿಕ್ಷಕರ ಸೇವಾ ಪೂರೈಕೆಗೆ ಎತ್ತಣ ಸಂಬಂಧ. ರಸ್ತೆ ಕಾಮಗಾರಿ ಮಾಡಲು ಮತ್ತು ಕ್ರೀಡಾ ಸಲಕರಣೆ ಸರಬರಾಜು ಮಾಡಲು ನಿರ್ದಿಷ್ಟ ಗುತ್ತಿಗೆದಾರರಿಗೆ ನೀಡುತ್ತಾರೆ. ಆದರೆ ಶಿಕ್ಷಕರ ಸೇವಾ ಪೂರೈಕೆ ಮಾಡಲು ಸೆಕ್ಯೂರಿಟಿ ಏಜೆನ್ಸಿ ನೀಡಲು ಯಾವ ಮಾನದಂಡ ಉಪಯೋಗಿಸಿದರು ಎಂಬುದು ನಿಗೂಢವಾಗಿದೆ. ಈ ಹಿಂದೆ ಗುತ್ತಿಗೆ ಪಡೆದ ಕ್ರಿಸ್ಟಲ್ ಸಂಸ್ಥೆಯಲ್ಲಿರುವ ಶಿಕ್ಷಕರನ್ನ ಮುಂದು ವರಿಸಲು ಹೊಸದಾಗಿ ಗುತ್ತಿಗೆ ಪಡೆದ ಸೆಕ್ಯೂರಿಟಿ ಅರ್ಜಿ ಆಹ್ವಾನ ಮಾಡಿದ್ದಾರೆ ಮತ್ತು ಹೊಸ ಶಿಕ್ಷಕರನ್ನ ನೇಮಿಸಿಕೊಳ್ಳಲು ಸೆಕ್ಯೂರಿಟಿ ಏಜೆನ್ಸಿಗಳಿಗೆ ಶಿಕ್ಷಣ ಕ್ಷೇತ್ರ ಕುರಿತು ಅನುಭವವಿರಬೇಕು ಈ ಏಜೆನ್ಸಿಗಳಿಗೆ ಇದ್ದೀಯ ಎಂದು ನೋಡಿಲ್ಲ. ಶಾರ್ಪ್ ವಾಚ್ ಇನ್ ವೆಸ್ಟಿಂಗ್ ಸೆಕ್ಯೂರಿಟಿ ಸರ್ವಿಸಸ್ ಪ್ರೈ ಲಿಮಿಟೆಡ್ ಮೈಸೂರು ನಗರದಲ್ಲಿ ಕಛೇರಿ ಹೊಂದಿದೆ.

ಶಿಕ್ಷಕರು ಇ.ಎಸ್.ಐ.ಮತ್ತು ಪಿ.ಎಫ್ ಏನಾದರು ಸಹಿ, ಸಮಸ್ಯೆ ಬಗೆಹರಿಸಲು ಮೈಸೂರಿಗೆ ಹೋಗುವ ಪರಿಸ್ಥಿತಿ ಬರುತ್ತದೆ ಇದು ಸಾಧ್ಯವೇ! ಒಟ್ಟಿನಲ್ಲಿ ಶಿಕ್ಷಣ ಕ್ಷೇತ್ರವನ್ನೂ ಗುತ್ತಿಗೆ ಕೊಡ ಹೊರಟಿರುವ ಬಿಬಿಎಂಪಿ ಎಂಬುದಾಗಿ ವಾಗ್ದಾಳಿ ನಡೆಸಿದ್ದರು. ಈ ಬಗ್ಗೆ ಡಿಸಿಎಂ ಡಿ.ಕೆ ಶಿವಕುಮಾರ್ ಸೂಚನೆ ಬೆನ್ನಲ್ಲೇ ಬಿಬಿಎಂಪಿ ಶಾಲಾ, ಕಾಲೇಜು ಶಿಕ್ಷಕರ ನೇಮಕಾತಿ ಗುತ್ತಿಗೆ ರದ್ದುಗೊಳಿಸಿ, ರಾಜ್ಯ ಸರ್ಕಾರ ಆದೇಶಿಸಿದೆ.

ಸೆಕ್ಯೂರಿಟಿ ಏಜೆನ್ಸಿಗೂ ಶಿಕ್ಷಕರ ಸೇವಾ ಪೂರೈಕೆ

- ■ ದಕ್ಷಿಣ ವಲಯ ಮತ್ತು ಆರ್.ಆರ್ ನಗರ ವಲಯಕ್ಕೆ ಅಪ್ಪು ಡಿಟೆಕ್ಟಿವ್ ಆಂಡ್ ಸೆಕ್ಯೂರಿಟಿ ಸರ್ವೀಸ್.
- ■ ಪೂರ್ವ ವಲಯ ಡಿಟೆಕ್ಟಿವೆಲ್ ಅಂಡ್ ಸೆಕ್ಯೂರಿಟಿ ಸರ್ವಿಸಸ್ ಪ್ರೈ ಲಿ.
- ■ ಪಶ್ಚಿಮ ವಲಯ: ಶಾರ್ಪ್ ವಾಚ್ ಇನ್ ವೆಸ್ಟಿಂಗ್ ಸೆಕ್ಯೂರಿಟಿ ಸರ್ವಿಸಸ್ ಪ್ರೈವೇಟ್ ಲಿಮಿಟಿಡ್

ತರಾತುರಿಯಲ್ಲಿ ಅನುಮತಿ

ಶಿಕ್ಷಕರು ನೇಮಿಸಿಕೊಳ್ಳಲು ಸೇವೆ ಒದಗಿಸಲು ಶಿಕ್ಷಣ ಕ್ಷೇತ್ರದ ಅರಿವು ಇರುವವರು ಮತ್ತು ನುರಿತ ಏಜೆನ್ಸಿರವರಿಗೆ ನೀಡಬೇಕು. ಅದರೆ ಶಿಕ್ಷಕ ಸೇವಾ ಪೂರೈಕೆ ಮಾಡಲು ಸೆಕ್ಯೂರಿಟಿ ಏಜೆನ್ಸಿ ನೀಡಿರುವುದು ಬಿಬಿಎಂಪಿಯ ವಿಚಿತ್ರ ವೈಖರಿ. ಈ ಹಿಂದೆ ಸೆಕ್ಯೂರಿಟಿ ಏಜೆನ್ಸಿಗೆ ಗುತ್ತಿಗೆ ನೀಡುವುದಿಲ್ಲ ಎಂದು ಹೇಳಿದ್ದರು. ಅದರೆ ಇಂದು ತರಾತುರಿಯಲ್ಲಿ ಅನುಮತಿ ನೀಡಿರುವುದು ಅಧಿಕಾರಿಗಳ ಬೇಜವಾದ್ದಾರಿ ಎದ್ದು ಕಾಣುತ್ತದೆ.

ಕಲಾ ಸಾಹಿತ್ಯ

ವೈ.ಕೆ. ಸಂಧ್ಯಾಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ವಾಗ್ಗೇಯ ನೃತ್ಯವೈಭವ ಹೊಸತನದ ಅನಾವರಣ

• ಉದಯವಾಹಿನಿ, ವಿಶೇಷ

ಸಾಮಾನ್ಯವಾಗಿ ನಾಟ್ಯಗುರುಗಳು ಪಾರಂಪರಿಕವಾಗಿ ಬಂದ ಸಾಂಪ್ರದಾಯಕ ಕೃತಿಗಳನ್ನೇ ತಮ್ಮ ಶಿಷ್ಯರಿಗೆ ಕಲಿಸುತ್ತ ಬಂದಿರುವುದು ಅನೂಚಾನ ನಡೆದುಕೊಂಡು ಬಂದಿರುವ

ರೂಢಿ. ಅದರಲ್ಲೂ 'ರಂಗಪ್ರವೇಶ'ಗಳಲ್ಲಂತೂ 'ಮಾರ್ಗಂ' ಸಂಪ್ರದಾಯದ ಕೃತಿಗಳ ಪ್ರಸ್ತುತಿ ನಿಯಮೋಪಾದಿಯಲ್ಲಿ ನಡೆದು ಬರುತ್ತಿದೆ. ಕೆಲವು ಗುರುಗಳು ಹೊಸ ಸಂರಚನೆ-ಸಂಯೋಜನೆಗಳನ್ನು ಮಾಡುತ್ತಿರುವುದು ಉಂಟು. ಆದರೆ ಅದು ವಿರಳ. ಈ ನಿಟ್ಟಿನಲ್ಲಿ ಕಲಾಯೋಗಿ ಎಸ್. ರಘುನಂದನ್ ಏನಾದರೊಂದು ಹೊಸಪ್ರಯೋಗ ಮಾಡುವುದರಲ್ಲಿ ತಲ್ಲೀನರು. ಈಗಾಗಲೇ ಅಂಥ ಹಲವಾರು ಹೊಸ ಅನ್ವೇಷಣೆಗಳು - ಪ್ರಯೋಗಗಳನ್ನು ಮಾಡಿಕೊಂಡು ಬಂದಿರುವ ಹಿನ್ನಲೆಯಲ್ಲಿ ಅವರ ಅಧ್ಯಯನಶೀಲತೆ, ನವ ಪರಿಕಲ್ಪನೆ -ಸಂಯೋಜನೆಗಳ ಬಗೆಗಿನ ಅಪಾರ ಆಸಕ್ತಿ-ಶ್ರದ್ಧೆ, ಕಾಳಜಿಗಳು ಸುವ್ಯಕ್ತವಾಗುತ್ತವೆ. ಇದುವರೆಗೂ ರಘುನಂದನ್-ಶ್ರೀ ಪುರಂದರ ದಾಸರು, ಮಹಾರಾಜ ಸ್ವಾತಿ ತಿರುನಾಳ್, ಶ್ರೀ ಹೆಚ್.ಆರ್. ಕೇಶವಮೂರ್ತಿ, ಸ್ವಾಮಿ ವೇದಾಂತ ದೇಶಿಕನ್, ಮೈಸೂರು ಸದಾಶಿವರಾವ್ ಮತ್ತು ಶ್ರೀ ಶಾಮಾಶಾಸ್ತ್ರಿಗಳು ಮುಂತಾದ ವಾಗ್ಗೇಯಕಾರರು ರಚಿಸಿದ ಕೃತಿಗಳಿಗೆ ತಮ್ಮ ವಿಶಿಷ್ಟ ಛಾಪಿನ ನೃತ್ಯ ಸಂಯೋಜನೆಯ ಚೆಲುವನ್ನು ತೊಡಿಸಿ, ಶಿಷ್ಯೆಯರ ಪ್ರತಿಭಾ ನೈಪುಣ್ಯದಲ್ಲಿ ರಂಗಕ್ಕಿಳಿಸುತ್ತ ಬಂದಿರುವುದು ಅವರ ಅಗ್ಗಳಿಕೆ.

ಇತ್ತೀಚಿನ ಇವರ ಇಂಥ ಕುತೂಹಲ ಕೆರಳಿಸಿದ ಹೊಸ ಪರಿಕಲ್ಪನೆ- ಮೈಸೂರು ವಾಸುದೇವಾಚಾರ್ಯ ಮತ್ತು ಜಯಚಾಮರಾಜೇಂದ್ರ ಒಡೆಯರ ರಚನೆಗಳನ್ನು ತಮ್ಮ ಶಿಷ್ಯೆ ವಿದುಷಿ ಗುಣಶ್ರೀ ನೃತ್ಯಾವಳಿಗಳ ಮೂಲಕ ಸಾಕಾರಗೊಳಿಸಿದ 'ವಾಗ್ಗೇಯ ನೃತ್ಯವೈಭವ' 'ನಯನ ರಂಗಮಂದಿರ'ದಲ್ಲಿ ಯಶಸ್ವಿಯಾಗಿ ನೆರವೇರಿತು. ಮೂಲತಃ ಸಂಗೀತ ಕಛೇರಿಗಳಿಗೆ ಹೇಳಿ ಮಾಡಿಸಿದಂಥ ಘನವಾದ, ಕ್ಲಿಷ್ಟ ಸಾಹಿತ್ಯಕೃತಿಗಳನ್ನು ನೃತ್ಯಕ್ಕೆ ಅಳವಡಿಸುವುದು ಅಂಥ ಸುಲಭವಲ್ಲ. ಶ್ರವ್ಯ ಮಾಧ್ಯಮದ ನಾದಸುಧೆಯನ್ನು ಕಲಾರಸಿಕರ ಕಣ್ಮನ ತಣಿಸುವಂತೆ ದೃಶ್ಯವತ್ತಾದ ಸಚಿತ್ರ ನಾಟ್ಯಾರಾಧನೆಗೆ, ನೃತ್ಯವೈಭವದ ಸಾಕ್ಷಾತ್ಕಾರಕ್ಕೆ ಅನುವುಗೊಳಿಸಿದ್ದು ಮೆಚ್ಚುಗೆ ಗಳಿಸಿತು.

ಗುಣಶ್ರೀಯ ಪ್ರಸ್ತುತಿ ಜಯಚಾಮರಾಜೇಂದ್ರ ಒಡೆಯರ ಶ್ರೀ ಮಹಾ ಗಣಪತಿಂ ಭಜೆಯಿಂದ ಶುಭಾರಂಭಗೊಂಡು ಪ್ರಥಮ ಪೂಜಿತ-ವಿಘ್ನನಿವಾರಕನ ಮಹತ್ವ-ವೈಶಿಷ್ಟ್ಯಗಳನ್ನು ಸುಮನೋಹರವಾಗಿ ಅಭಿವ್ಯಕ್ತವಾಯಿತು. ನಂತರ- 'ಶಂಕರಿ ಸದಾನಂದ ಲಹರಿ'ಯ ದೈವೀಕ ವರ್ಣನೆ ಮನಸ್ಸನ್ನು ಆವರಿಸಿತು. ದೇವಿಯ ಪ್ರಫುಲ್ಲ ಭಂಗಿಗಳು, ಅರೆಮಂಡಿ, ರಂಗಾಕ್ರಮಣದ ಆಂಗಿಕಾಭಿನಯ ಗಮನಾರ್ಹವಾಗಿದ್ದವು.

ಮುಂದೆ- 'ವನಜಾಕ್ಷ' ತಾನವರ್ಣದ ಕ್ಲಿಷ್ಟಗತಿಗಳಿಗೆ ಕಲಾವಿದೆ ಯಾವುದೇ ಗೊಂದಲವಿಲ್ಲದೆ ನಿರಾಯಾಸವಾಗಿ ನರ್ತನ ಮಾಡಿದ್ದು ಆಹ್ಲಾದಕರವಾಗಿತ್ತು. ನಡುನಡುವೆ ಗುರು ರಘುನಂದನ್ ಅವರ ಸ್ಫುಟವಾದ ನಟುವಾಂಗ ಕಲಾವಿದೆಯ ಹೆ

ಯಾವಾಗ ಮಳೆಯಾಗುತ್ತೋ? ಹೊಳೆಯಲ್ಲಿ ನೀರು ಹರಿಯುತ್ತೋ?

ಕನ್ನಡ ನಾಡಿನ ಜನತೆಯ ಕನಸಿಗೆ ಮಹಾರಾಷ್ಟ್ರ ಸರ್ಕಾರ ರಾಜಾಪೂರ ಬಳಿಯಲ್ಲಿ ಕೃಷ್ಣೆಯನ್ನು ತಡೆಯುವ ಮೂಲಕ ತಣ್ಣೀರೆರಚಿದೆ

• ಉದಯವಾಹಿನಿ, ಚಿಕ್ಕೋಡಿ

ಉದಯವಾಹಿನಿ ಚಿತ್ರ

ಗಡಿಯಾಚೆ ಕೃಷ್ಣೆಗೆ ಮಹಾ ದಿಗ್ಬಂಧನ

ಉತ್ತರ ಕರ್ನಾಟಕದ ಜೀವನದಿ ಕೃಷ್ಣೆಯ ಪಾತ್ರದಲ್ಲಿ ನೀರಿಲ್ಲದೇ ಬತ್ತಿ ಬರಿದಾಗಿದೆ. ನದಿ ತೀರದ ಗ್ರಾಮಗಳಲ್ಲಿಯೇ ಜಲಕ್ಷಾಮ ಉಂಟಾಗಿದೆ. ನೀರಿಲ್ಲದೇ ಮೀನುಗಳು ಸಾಯುತ್ತಿವೆ. ಮೊಸಳೆಗಳು ಆಹಾರ ಹುಡುಕಿಕೊಂಡು ದಾಳಿ ಮಾಡುತ್ತಿವೆ. ಯಾವಾಗ ಮಳೆಯಾಗುತ್ತೋ? ಹೊಳೆಯಲ್ಲಿ ನೀರು ಹರಿಯುತ್ತೋ ಅಂತಾ ಕಾದು ಕುಳಿತ ಕನ್ನಡ ನಾಡಿನ ಜನತೆಯ ಕನಸಿಗೆ ಮಹಾರಾಷ್ಟ್ರ ಸರ್ಕಾರ ರಾಜಾಪೂರ ಬಳಿಯಲ್ಲಿ ಕೃಷ್ಣೆಯನ್ನು ತಡೆಯುವ ಮೂಲಕ ತಣ್ಣೀರೆರಚಿದೆ.

ಮಹಾರಾಷ್ಟ್ರ ರಾಜ್ಯದ ಕೊಲ್ಹಾಪುರ ಜಿಲ್ಲೆಯಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿರುವ ರಾಜಾಪೂರ ಬ್ಯಾರೇಜಿನ ಎಲ್ಲಾ 26 ಗೇಟ್ ಗಳನ್ನು ರವಿವಾರ ಮೇ 26ರಂದು ಬಂದ್ ಮಾಡಿ ಕರ್ನಾಟಕಕ್ಕೆ ನೀರು ಹರಿದು ಹೋಗದಂತೆ ಮಹಾರಾಷ್ಟ್ರ ಕುತಂತ್ರ ಮಾಡಿದೆ. ಮಹಾ ನಡೆಯಿಂದ ಕೃಷ್ಣಾ ನದಿ ತೀರದ ಗ್ರಾಮಗಳ ಜನರಿಗೆ ತೀವ್ರ ನಿರಾಶೆಯಾಗಿದೆ. ಉಪ ವಿಭಾಗದ ಜುಗೂಳ, ಮಂಗಾವತಿ, ಯಡೂರ, ಯಡೂರವಾಡಿ, ಶಹಾಪೂರ, ಚಂದೂರ, ಚಂದೂರ ಟೇಕ್, ಮಾಂಜರಿ, ಅಂಕಲಿ, ಕಲ್ಲೋಳ ಗ್ರಾಮಗಳ ಜನರು ಮಳೆ ಯಾಗಿಯೂ ನೀರಿಲ್ಲದೇ ಪರಿತಪಿಸಬೇಕಿದೆ.

ರಾಜಾಪೂರ ಬ್ಯಾರೇಜ್, ಮಹಾರಾಷ್ಟ್ರ ರಾಜ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿರುವ ಕೊನೆಯ ಬ್ಯಾರೇಜ್ ಆಗಿದ್ದು, ಕೆಳಭಾಗದಲ್ಲಿ ಮಹಾರಾಷ್ಟ್ರಕ್ಕೆ ಸೇರಿದ ಖಿದ್ರಾಪೂರ, ಸೈನಿಕ ಟಾಕಳಿ, ದತ್ತವಾಡ, ದಾ ನವಾಡ ಗ್ರಾಮಗಳಿವೆ. ಹೀಗಿದ್ದರೂ ಮಹಾರಾಷ್ಟ್ರ ಅಮಾನವೀಯವಾಗಿ ವರ್ತಿಸಿ ನೈಸರ್ಗಿಕವಾಗಿರುವ ನೀರನ್ನು ಕರ್ನಾಟಕಕ್ಕೆ ಹರಿಯಲು ಬಿಡದೇ ತಡೆದಿದ್ದು ಮಹಾರಾಷ್ಟ್ರದ ಷಡ್ಯಂತ್ರಕ್ಕೆ ಸ್ಪಷ್ಟ ನಿದರ್ಶನವಾಗಿದೆ. ಗಡಿಯಲ್ಲಿ ಭಾಷಾ ತಂಟೆಯನ್ನು ಮಾಡುತ್ತಿದ್ದ ಮಹಾರಾಷ್ಟ್ರ ಇದೀಗ ಜಲತಂಟೆ ಗೂ ಈ ಮೂಲಕ ಮುಂದಾಗಿದ್ದು, ಗಡಿ ಭಾಗದಲ್ಲಿ ಕನ್ನಡಿಗರ ಆಕ್ರೋಶಕ್ಕೆ ಕಾರಣವಾಗಿದೆ.

ಕಳೆದ ಎರಡು ದಿನಗಳಿಂದ ರಾಜಾಪೂರ ಬ್ಯಾರೇಜಿನ ಎಲ್ಲಾ ಗೇಟುಗಳನ್ನು ಮುಚ್ಚಿದ್ದರಿಂದ ನೀರು ಹೊರಸೂಸಿ ಕರ್ನಾಟಕ-ಮಹಾರಾಷ್ಟ್ರ ನಡುವಿನ ಸಂಪರ್ಕ ಕಡಿತವಾಗಿದೆ. ಮತ್ತೇ ಮಳೆಯಾದಲ್ಲಿ ನೀರು ನಿರ್ವಹಣೆಗಾಗಿ ಸೋಮವಾರ ಬೆಳಿಗ್ಗೆ ಬ್ಯಾರೇಜಿನ 5 ಗೇಟ್ ಗಳನ್ನು 1 ಅಡಿಯಷ್ಟು ಇಳಿಸಿದ್ದರಿಂದ 500 ಕ್ಯೂಸೆಕ್ ನಷ್ಟು ನೀರು ಹೊರ ಹರಿವು ಇದೆ. ಇದು ಬ್ಯಾರೇಜ್ ಕೆಳ ಭಾಗದಲ್ಲಿರುವ ಮಹಾರಾಷ್ಟ್ರದ ನಾಲ್ಕು ಗ್ರಾಮಗಳ ಬಾಯಾರಿಕೆಯನ್ನು ನೀಗಿಸಬಹುದಾಗಿದೆ. ಕರ್ನಾಟಕಕ್ಕೆ ಇದರಿಂದ ಯಾವುದೇ ಪ್ರಯೋಜನವಿಲ್ಲ.

ಕಳೆದ ವರ್ಷ ಮಳೆ ಇಲ್ಲದೇ ಅದಾಗಲೇ ಕೃಷ್ಣಾ ನದಿಯು ಸಂಪೂರ್ಣ ಬತ್ತಿ ಬರಿದಾಗಿತ್ತು. ಇದೀಗ ಮಹಾರಾಷ್ಟ್ರದಿಂದ ಬಿಡುಗಡೆ ಮಾಡಿದ ಅಲ್ಪ ಪ್ರಮಾಣದ ನೀರಿನಿಂದ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಮಳೆ ಸುರಿಯುವರೆಗಾದರೂ ಅನುಕೂಲವಾಗುತ್ತದೆ ಎಂದು ಭಾವಿಸಲಾಗಿತ್ತು. ಆದರೆ ಬ್ಯಾರೇಜ್ ಪೂರ್ಣ ಪ್ರಮಾಣದಲ್ಲಿ ಬಂದ್ ಮಾಡಿದ್ದರಿಂದ ನೀರಿಲ್ಲದೇ ಕರ್ನಾಟಕದ ಗ್ರಾಮಗಳು ಮಳೆಯಾಗಿ ನದಿ ತುಂಬಿ ಹರಿಯುವವರಿಗೆ ಪರಿತಪಿಸಬೇಕಾಗುತ್ತಿದೆ.

> ಮಲ್ಲಪ್ಪ ಶೇಡಬಾಳೆ ಕೃಷ್ಣಾ ತೀರದ ನಿವಾಸಿ ಕಲ್ಲೋಳಕಳೆದ ನಾಲ್ಕೈದು ತಿಂಗಳಿನಿಂದ ಬತ್ತಿ ಬರಿದಾಗಿರುವ ಕೃಷ್ಣಾ ನದಿಯಲ್ಲಿ ನೀರಿಲ್ಲದೇ ಜನ ಜಾನುವಾರು ಪರಿತಪಿಸುವಂತಾಗಿದೆ. ಮಳೆರಾಯ ಕೃಪೆ ತೋರಿದರೂ ಮಹಾರಾಷ್ಟ್ರ ಕೃಪೆ ತೋರದ್ದರಿಂದ ನದಿಗೆ ನೀರು ಬರುತ್ತಿಲ್ಲ. ಈಗಲಾದರೂ ಕಪಟ ನಾಟಕ ಬಿಡಬೇಕು
> -ಅರುಣ ಯಲಗುದ್ರಿ
> ನಿವೃತ್ತ ಎಂಜಿನಿಯರ್

ಸುತ್ತಮುತ್ತಲಿನ ಗ್ರಾಮಗಳಿಗೆ ಅನುಕೂಲ

ಅಥಣಿರಾಜ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿರುವ ಹಿಪ್ಪರಗಿ ಬ್ಯಾರೇಜ್ ಹಿನ್ನೀರೇ ಮಳೆಗಾಲ ಇಲ್ಲದಾಗ ರಾಜಾಪೂರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ಅನುಕೂಲವಾಗುತ್ತದೆ. ಬ್ಯಾರೇಜ್ ಗೇಟ್ ಬಂದ್ ಮಾಡಿ ನೀರು ತಡೆದಿದ್ದು ಮಹಾರಾಷ್ಟ್ರದ ಅಮಾನವೀಯ ನಡೆ ಇತ್ತೀಚೆಗೆ ಸುರಿದ ಮಳೆಯಿಂದ ನೈಸರ್ಗಿಕವಾಗಿ ಮಹಾರಾಷ್ಟ್ರದಿಂದ ಕರ್ನಾಟಕಕ್ಕೆ ಕೃಷ್ಣಾ ನದಿಯ ಮೂಲಕ ಹರಿದು ಬರಬೇಕಿದ್ದ ನೀರನ್ನು ರಾಜಾಪೂರ ಬ್ಯಾರೇಜ್ ಗೇಟ್ ಹಾಕುವ ಮೂಲಕ ತಡೆದಿದ್ದ ಮಹಾರಾಷ್ಟ್ರ ಸೋಮವಾರ ಏಕಾಏಕಿ 5 ಗೇಟ್ ಗಳನ್ನು 1 ಅಡಿಯಷ್ಟು ತೆರೆಯುವ ಮೂಲಕ 500 ಕ್ಯೂಸೆಕ್ ನಷ್ಟು ನೀರು ಕರ್ನಾಟಕದತ್ತ ಹರಿದು ಬರುತ್ತಿದೆ.

ಪದವೀಧರ ಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷಕ್ಕೆ ಹೆಚ್ಚಿನ ಮತದಾರರ ಒಲವು ಇದೆ: ಶರಣುಪಾಟೀಲ

• ಉದಯವಾಹಿನಿ,ಚಿಂಚೋಳಿ

ಮತಕ್ಷೇತ್ರದಲ್ಲಿ ಈಶಾನ್ಯ ಪದವಿಧರರ ಕ್ಷೇತ್ರದಿಂದ ಕಾಂಗ್ರೇಸ್ ಪಕ್ಷದ ಅಭ್ಯರ್ಥಿ ಹಾಲಿ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲರಿಗೆ ಪದವೀಧರ ಮತದಾರರು ಹೆಚ್ಚಿನ ಒಲವುವಿದ್ದು ಬರುವ ಜೂನ್ 3 ರಂದು ಮತದಾರರ ಪ್ರಭುಗಳು ಹೆಚ್ಚಿನ ಮತಗಳು ನೀಡಿ ಗೆಲ್ಲಿಸುವಂತೆ ಕಾಂಗ್ರೇಸ್ ವಕ್ತಾರ ಶರಣುಪಾಟೀಲ ಮೋತಕಪಳ್ಳಿ ಮನವಿ ಮಾಡಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು, ಮುಖ್ಯ ಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರಕಾರ ಕರ್ನಾಟಕ ರಾಜ್ಯದಲ್ಲಿ ನುಡಿದಂತೆ ನಡೆದು ಪದವಿ ಮುಗಿಸಿದ ನಿರುದ್ಯೋಗಿ ಯುವಕರಿಗೆ ಡಿಪ್ಲೋಮೂ ಪದವೀಧರರಿಗೆ 1500ರೂ., ಪದವಿ ಪಡೆದ ಮತದಾರರಿಗೆ ಮಾಸಿಕ 3000 ರೂಪಾಯಿಗಳು ಸಹಾಯ ಧನವನ್ನು ನೀಡುತ್ತಿದೆ. ಡಾ.ಚಂದ್ರಶೇಖರ ಪಾಟೀಲರಿಗೆ ಪರಿಷತ್ ಚುನಾವಣೆಯಲ್ಲಿ ಗೆಲ್ಲಿಸಿದರೆ ರಾಜ್ಯದಲ್ಲಿ ಕಾಂಗ್ರೇಸ್ ಸರಕಾರ ಅಧಿಕಾರದಲ್ಲಿರುವುದರಿಂದ ಪದವೀಧರರ ಅವಶ್ಯಕತೆಗಳನ್ನು ಪೂರೈಸಲು ಹೊಸ ಉದ್ಯೋಗ ಸೃಷ್ಟಿಸಲು ಸಾಧ್ಯವಾಗುತ್ತದೆ.

ಯುವ ಜನತೆಯ ಮುಂದಿರುವ ಸವಾಲುಗಳನ್ನು ಎದುರಿಸುವ ಇಚ್ಛಾಶಕ್ತಿಯೊಂದಿಗೆ ಸದಾ ಜನಪರ ಕಾರ್ಯ ನಿರ್ವಹಿಸುತ್ತಿದ್ದು ಪದವೀಧರರ ಧ್ವನಿ ವಿಧಾನ ಪರಿಷತ್ ನಲ್ಲಿ ಚಂದ್ರಶೇಖರ ಪಾಟೀಲರವರು ಪ್ರತಿನಿಧಿಸುವುದು ತುಂಬಾ ಅವಶ್ಯವಿದೆ. ಡಾ.ಚಂದ್ರಶೇಖರ ಪಾಟೀಲ ಹುಮನಾಬಾದ ಸ್ವಯಂ ಪದವಿಧರರಾಗಿದ್ದು ಹುಮನಾಬಾದ ನಗರದಲ್ಲಿ ಅನೇಕ ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಶೈಕ್ಷಣಿಕ ಕ್ರಾಂತಿಯನ್ನೇ ಮಾಡಿದ್ದಾರೆ.

ಪರಿಷತ್ ಸದಸ್ಯರಾದ ನಂತರ ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡಿದ್ದು ಅನೇಕ ಜನಪರ ಕಾರ್ಯಗಳನ್ನು ಮಾಡಿದ್ದಾರೆ, ಹೀಗಾಗಿ ಮತ್ತೊಂದು ಅವಧಿಗೆ ಡಾ.ಚಂದ್ರಶೇಖರ ಪಾಟೀಲರಿಗೆ ಗೆಲ್ಲಿಸುವ ಮೂಲಕ ಇನ್ನೂ ಹೆಚ್ಚಿನ ಸೇವೆಯನ್ನು ಮಾಡಲು ಅನುವು ಮಾಡಿಕೊಡಬೇಕೆಂದು ಅವರು ಮನವಿ ಮಾಡಿದರು.

ಶಾಲಾರಂಭಕ್ಕೆ ಸಿದ್ಧತೆ: ಪಠ್ಯ ಪುಸ್ತಕ ವಿತರಣೆ

• ಉದಯವಾಹಿನಿ, ಕಡೂರು

ಉದಯವಾಹಿನಿ ಚಿತ್ರ

ದಾಖಲಾತಿ ಹೆಚ್ಚಿಸಲು ದಾಖಲಾತಿ ಆಂದೋಲ

ಮೇ 29ರಿಂದ ಶಾಲೆಗಳು ಆರಂಭವಾಗುತ್ತಿದ್ದು, ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ಮತ್ತಿತರ ಪರಿಕರಗಳ ವಿತರಣೆಯನ್ನು ಶಿಕ್ಷಣ ಇಲಾಖೆ ಈಗಾಗಲೇ ಪ್ರಾರಂಭಿಸಿದೆ. ಕಡೂರು ಶೈಕ್ಷಣಿಕ ವಲಯದಲ್ಲಿ 126 ಕಿರಿಯ ಪ್ರಾಥಮಿಕ ಶಾಲೆಗಳು, (3 ಅನುದಾನಿತ, 10 ಅನುದಾನ ರಹಿತ), 130 ಹಿರಿಯ ಪ್ರಾಥಮಿಕ ಶಾಲೆಗಳು (2 ಅನುದಾನ ಸಹಿತ ಮತ್ತು ಅನುದಾನ ರಹಿತ 14), ಸರ್ಕಾರಿ ಪ್ರೌಢ ಶಾಲೆಗಳು 15 ಇವೆ.

ಈ ಎಲ್ಲಾ ಶಾಲೆಗಳಲ್ಲಿ 1 ರಿಂದ 10ನೇ ತರ ಗತಿಯವರೆಗೆ 2023-24 ನೇ ಸಾಲಿನಲ್ಲಿ ಒಟ್ಟು 22,086 ಸಾವಿರ ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ.

ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ಉಚಿತವಾಗಿ ನೀಡಲಾಗುತ್ತದೆ. ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಎರಡು ಜೊತೆ ಸಮವಸ್ತ್ರ ಉಚಿತವಾಗಿ ನೀಡಲಾಗುತ್ತದೆ.

ಹೈ ಸ್ಕೂಲ್ ವಿದ್ಯಾರ್ಥಿನಿಯರಿಗೆ ಈ ವರ್ಷದಿಂದ ಸಮವಸ್ತ್ರಕ್ಕಾಗಿ ಚೂಡಿದಾರವನ್ನು ನೀಡಲಾಗುತ್ತಿದೆ. ಕಳೆದ ವರ್ಷ ದಾಖಲಾತಿ ಕೊರತೆಯಿಂದ ತಾಲ್ಲೂಕಿನ ಆಡಿಗೆರೆ, ವೈ. ಬಸವನಹಳ್ಳಿ, ದೇವರಹೊಸಹಳ್ಳಿ ಹುಲಿಗೊಂದಿ ಮತ್ತು ಮಾವಿನಹಳ್ಳಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರಭುಕುಮಾರ ಸ್ವಾಮಿ ಅನುದಾನಿ ಪ್ರೌಢ ಶಾಲೆಗಳನ್ನು ಮುಚ್ಚಲಾಗಿತ್ತು.

ಈ ಸಂಖ್ಯೆ ಹೆಚ್ಚಬಾರದು ಎಂಬ ಉದ್ದೇಶದಿಂದ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ದಾಖಲಾತಿ ಆಂದೋಲನವನ್ನು ಈಗಾಗಲೇ ಇಲಾಖೆ ಹಮ್ಮಿಕೊಂಡಿದೆ.

ಸರ್ಕಾರಿ ಶಾಲೆಗಳಲ್ಲಿರುವ ಸೌಲಭ್ಯಗಳು ಮತ್ತು ಗುಣಮಟ್ಟದ ಬಗ್ಗೆ ಪೋಷಕರಿಗೆ ಮನವರಿಕೆ ಮಾಡಿಕೊಟ್ಟು ಮಕ್ಕಳನ್ನು ದಾಖಲಾತಿ ಮಾಡಲು ಅವರ ಮನವೊಲಿಸುವ ಕಾರ್ಯವನ್ನು ಶಿಕ್ಷಕರು ತಮ್ಮ ಶಾಲಾ ವ್ಯಾಪ್ತಿಯಲ್ಲಿ ಮಾಡುತ್ತಿದ್ದಾರೆ.

> ಮೇ 29ರ ಬುಧವಾರ ಶಾಲೆಗಳು ಆರಂಭವಾಗಲಿದ್ದು, ವಿದ್ಯಾರ್ಥಿಗಳನ್ನು ಸ್ವಾಗತಿಸಲು ಶಾಲೆಗಳನ್ನು ಸಿಂಗರಿಸಲಾಗುತ್ತಿದೆ. ಅಂದು ವಿದ್ಯಾರ್ಥಿಗಳಿಗೆ ವಿಶೇಷವಾಗಿ ಸಿಹಿಯೂಟವನ್ನು ನೀಡಲು ಶಿಕ್ಷಕರು ಸಿದ್ಧತೆ ನಡೆಸಿದ್ದಾರೆ
> -ಬಿ.ಪಿ.ಲಿಂಗರಾಜು
> ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ

ಬಿತ್ತನೆ ಬೀಜ ವಿತರಣೆ ಶುರು; ರೈತ ಸಂಪರ್ಕ ಕೇಂದ್ರದಲ್ಲಿ ದಾಸ್ತಾನು ಲಭ್ಯ

• ಉದಯವಾಹಿನಿ, ಮುದ್ದೇಬಿಹಾಳ

ಉದಯವಾಹಿನಿ ಚಿತ್ರ

ಮುಂಗಾರು ಹಂಗಾಮಿನ ಬಿತ್ತನೆಗೆ ಪೂರ್ವ ಸಿದ್ಧತೆ ಆರಂಭವಾಗಿದ್ದು ರೈತರಿಗೆ ಅವಶ್ಯಕತೆ ಇರುವ ಬಿತ್ತನೆ ಬೀಜಗಳ ಪೂರೈಕೆ ಕೃಷಿ ಇಲಾಖೆಯಿಂದ ವ್ಯವಸ್ಥೆ ಕಲ್ಪಿಸಲಾಗಿದೆ. ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಒಟ್ಟು 56211 ಹೆಕ್ಟೇರ್ ಮುಂಗಾರು ಬಿತ್ತನೆ ಕ್ಷೇತ್ರ ಗುರಿ ಹೊಂದಲಾಗಿದೆ ಹಾಗೂ ತಾಳಿಕೋಟೆ ತಾಲ್ಲೂಕಿನಲ್ಲಿ 66330 ಹೆಕ್ಟೇರ್ ಗುರಿ ಹೊಂದಲಾಗಿದೆ ರೈತರು ಬೆಳೆ ಬದಲಾವಣೆ ಬೀಜೋಪಚಾರಗಳಂತಹ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಬಿತ್ತನೆ ಮಾಡುವಂತೆ ಕೃಷಿ ಸಹಾಯಕ ಅಧಿಕಾರಿ ಎಸ್ ಡಿ ಭಾವಿಕಟ್ಟಿ ತಾಲ್ಲೂಕ ಕೃಷಿ ಅಧಿಕಾರಿ ರಾಜೇಶ್ವರಿ ನಾಡಗೌಡ ತಿಳಿಸಿದ್ದಾರೆ.

ರೈತರು ಬಿತ್ತನೆ ಬೀಜ ಇಲ್ಲಿ ಪಡೆಯಬಹುದು; ಮುದ್ದೇಬಿಹಾಳ ತಾಲ್ಲೂಕಿನ ಢವಳಗಿ, ನಾಲತವಾಡ, ಮುದ್ದೇಬಿಹಾಳ, ತಾಳಿಕೋಟೆ ಈ ನಾಲ್ಕು ರೈತ ಕೇಂದ್ರದಲ್ಲಿ ಬಿತ್ತನೆ ಬೀಜಗಳ ದಾಸ್ತಾನು ಲಭ್ಯವಿವೆ ಯಾವುದೇ ಕೊರತೆ ಇರುವುದಿಲ್ಲ. ಹೆಸರು, ತೊಗರಿ ಸದ್ಯ ಲಭ್ಯವಿದ್ದು ಮುಂದಿನ ದಿನಗಳಲ್ಲಿ ಮುಸುಕಿನ ಜೋಳ, ಸಜ್ಜೆ ಸೂರ್ಯಕಾಂತಿ ಬೀಜಗಳನ್ನು ದಾಸ್ತಾನಿಕರಿಸಲಾಗುತ್ತದೆ. ಹೆಸರು BGS 9 (T/L), ತೊಗರಿ TS3R (C/S) GRG 811 (c/s) GRG 158 (C/S) ನೆಟೆರೋಗ ನಿರೋಧಕ ತಳಿಗಳು

ರೈತರು ಕಡ್ಡಾಯವಾಗಿ ಆಧಾರ ಕಾರ್ಡ್ ಹೊಲದ ಉತಾರೆ ಹಾಗೂ FID ಪು.ತಿ ಉತಾರೆ ರೈತರ ನೋಂದಣಿ ಸಂಖ್ಯೆಯನ್ನು ತರಬೇಕು, ಎಲ್ಲಾ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ಅಥವಾ ಅವರ ಹಿಡುವಳಿ ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಸೀಮಿತಗೊಳಿಸಿ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತದೆ ಎಲ್ಲಾ ಬೀಜಗಳ ಪ್ಯಾಕೆಟ್ ಮೇಲೆ ಕ್ಯೂ ಆರ್ ಕೋಡ ನಮೂದಿಸಲಾಗುತ್ತದೆ ಯಾವುದೇ ಅನುಮಾನಬೇಡ ರೈತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಜತೆಗೆ ನಕಲಿ ಬಿತ್ತನೆ ಬೀಜ ಮಾರಾಟ ಸಾಧ್ಯತೆ ಇರುವುದರಿಂದ ತಡೆಗಟ್ಟಲು ಗುಣಮಟ್ಟ ನಿಯಂತ್ರಣ ನಿರೀಕ್ಷಿರು ಪರಿಶೀಲನೆ ಮಾಡುತ್ತಾರೆ ತಾಲ್ಲೂಕಿನಲ್ಲಿ ಇಂತಹ ಪ್ರಕರಣ ಕಂಡು ಬಂದರೆ ರೈತ ಸಂಪರ್ಕ ಕೇಂದ್ರಕ್ಕೆ ಮುದ್ದೇಬಿಹಾಳ ಕೃಷಿ ಇಲಾಖೆಗೆ ಮಾಹಿತಿ ನೀಡಬಹುದು.

ಬಸವಾಪಟ್ಟಣ ಸೋಮವಾರದ ಸಂತೆಗಾಗಿ ಶೆಲ್ಟರ್ ನಿರ್ಮಾಣ

• ಉದಯವಾಹಿನಿ, ಬಸವಾಪಟ್ಟಣ

ಉದಯವಾಹಿನಿ ಚಿತ್ರ

ನೂರು ವರ್ಷಗಳ ಇತಿಹಾಸವಿರುವ ಇಲ್ಲಿನ ಸೋಮವಾರದ ಸಂತೆಯಲ್ಲಿ ಮಳೆ-ಗಾಳಿ-ಬಿಸಿಲಿನಿಂದ ವ್ಯಾಪಾರಿಗಳು ಮತ್ತು ಗ್ರಾಹಕರಿಗೆ ರಕ್ಷಣೆ ಒದಗಿಸಲು 18 ಲಕ್ಷ ವೆಚ್ಚದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ಶೆಲ್ಟರ್ ನಿರ್ಮಾಣ ಮಾಡಲಾಗುತ್ತಿದೆ. ಸುತ್ತಲಿನ ಗ್ರಾಮಗಳ ಜನರ ಬೇಡಿಕೆಯಂತೆ ನರೇಗಾ ಯೋಜನೆಯಲ್ಲಿ ಈ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯ ಡಿ.ಆರ್.ಹಾಲೇಶ್ ಮಾಹಿತಿ ನೀಡಿದರು.

ಈಗಾಗಲೇ ಅಡಿಪಾಯದ ಕಾಮಗಾರಿ ಮುಕ್ತಾಯ ಹಂತದಲ್ಲಿದೆ. ಎರಡು ವಾರಗಳಲ್ಲಿ ಕಬ್ಬಿಣದ ಪಿಲ್ಲರ್ ಅಳವಡಿಸಿ, ಅದರ ಮೇಲೆ ಕಬ್ಬಿಣದ ತಗಡು ಅಳವಡಿಸಿ ಸಂತೆ ವ್ಯಾಪಾರಕ್ಕೆ ಸಿದ್ಧಗೊಳಿಸಲಾಗುವುದು' ಎಂದರು.

6 ವರ್ಷಗಳ ಹಿಂದೆ ನಮ್ಮ ಸಂತೆ ಮೈದಾನದಲ್ಲಿ ಎಪಿಎಂಸಿ ವತಿಯಿಂದ ನಿರ್ಮಿಸಲಾಗಿದ್ದ ವಿಶಾಲವಾದ ಶೆಲ್ಟರ್ ಅನ್ನೂ ಸೇರಿಕೊಂಡಂತೆ, ಈಗ ಹೊಸದಾಗಿ 200 ಅಡಿ ಉದ್ದ 150 ಅಡಿ ಅಗಲದ ನಿವೇಶನದಲ್ಲಿ ಶೆಲ್ಟರ್ ನಿರ್ಮಿಸಲಾಗುವುದು.

ಇದರಲ್ಲಿ ಹೂವು, ಹಣ್ಣು ತರಕಾರಿ, ದಿನಸಿ, ತಿಂಡಿ, ಬಟ್ಟೆ, ಚಪ್ಪಲಿ ಮತ್ತು ಇತರ ವಸ್ತುಗಳ ಮಾರಾಟಕ್ಕೆ ಅವಕಾಶ ನೀಡಲಾಗುವುದು. ಇಲ್ಲಿನ ಸೋಮವಾರದ ಸಂತೆಗೆ 22 ಗ್ರಾಮಗಳ ಜನ ಖರೀದಿಗೆ ಬರುತ್ತಾರೆ.

ಜನರಿಗೆ ಅನುಕೂಲವಾಗಲು ಗ್ರಾಮ ಪಂಚಾಯಿತಿ ಈ ಕಾಮಗಾರಿಯನ್ನು ಕೈಗೊಂಡಿದೆ' ಎಂದು ಗ್ರಾಮ ಪಂಚಾಯಿತಿ ಪಿಡಿಒ ಅನಿಲ್ ಕುಮಾರ್ ತಿಳಿಸಿದರು.

ರೈತರಿಗೆ ಜೋಳದ ಖರೀದಿ ಹಣವನ್ನು ಬಿಡುಗಡೆ ಮಾಡಿ

• ಉದಯವಾಹಿನಿ, ಸಿಂಧನೂರು

ಉದಯವಾಹಿನಿ ಚಿತ್ರ

> ದೇವರು ವರ ಕೊಟ್ಟರು ಪೂಜಾರಿ ಕೊಡಲಿಲ್ಲ. ಎನ್ನುವ ಸ್ಥಿತಿ ತಾಲ್ಲೂಕಿನಲ್ಲಿ ನಿರ್ಮಾಣವಾಗಿದ್ದು ಹಾಗಾಗಿ ತಾಲ್ಲೂಕಿನ ರೈತರು ಪರವಾಗಿ ನಿಮ್ಮಲ್ಲಿ ಮನವಿ ಕೆಲವೇ ದಿನಗಳಲ್ಲಿ ರೈತರ ಖಾತೆಗೆ ಖಾತೆಗೆ ಹಣವನ್ನು ವರ್ಗಾವಣೆ ಮಾಡುಬೇಕೆಂದು. ನಮ್ಮ ಸಂಘಟನೆ ಒತ್ತಾಯಿಸುತ್ತದೆ

ಜೋಳ ಖರೀದಿಯ ಹಣವನ್ನು ಬಿಡುಗಡೆ ಮಾಡುವಂತೆ ಕೋರಿ ತಾಲ್ಲೂಕು ತಹಶೀಲ್ದಾರ್ ಅವರಿಗೆ ಕರ್ನಾಟಕ ರೈತ ಹಾಗೂ ಹಸಿರು ಸೇನೆ ತಾಲ್ಲೂಕು ಘಟಕ ವತಿಯಿಂದ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿತು. ನಂತರ ಮಾತನಾಡಿದ 2023 24 ನೇ ಸಾಲಿನ ಮುಂಗಾರು ಮಳೆ ರೈತರು ಬೆಳೆದ ಜೋಳವನ್ನು ಖರೀದಿ ಕೇಂದ್ರದಲ್ಲಿ ಸರ್ಕಾರದ ವತಿಯಿಂದ ನಿಗದಿ ಬೆಲೆಯಲ್ಲಿ ಖರೀದಿಸಿದ್ದು ಸುಮಾರು ಮೂರ್ನಾಲ್ಕು ತಿಂಗಳು ಮಾಸಿದರು ಇನ್ನು ಇದುವರೆಗೂ ಖಾತೆಗೆ ಜಮಾ ಆಗಿರುವುದಿಲ್ಲ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	12:00 ರಿಂದ 01:30
ಗುಳಿಕ ಕಾಲ	ಬೆಳಿಗ್ಗೆ	10:30 ರಿಂದ 12:00
ಯಮಗಂಡ ಕಾಲ	ಬೆಳಿಗ್ಗೆ	07:30 ರಿಂದ 09:00

ಮೇಷ – ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ.

ವೃಷಭ – ಕೋಪದ ಬಡಿದೆಬ್ಬಿಸುವಿಕೆ ಘರ್ಷಣೆಗೆ ಕಾರಣವಾಗಬಹುದು. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ.

ಮಿಥುನ – ನಿಮ್ಮ ಪ್ರೇಮ ಸಂಗಾತಿ ನಿಜಕ್ಕೂ ಇಂದು ಅದ್ಭುತವಾದದ್ದನ್ನು ಏನೋ ತರುತ್ತಾರೆ. ನಿಮ್ಮ ಕಲ್ಪನೆಗಳು ವಿಫಲಗೊಳ್ಳುವುದಿಲ್ಲವೆಂದು ನಿಮಗೆ ಖಚಿತವಾಗುವವರೆಗೂ ಅವುಗಳನ್ನು ಪ್ರಸ್ತುತಪಡಿಸಬೇಡಿ.

ಕರ್ಕಾಟಕ – ನಿಮ್ಮ ಸಕಾರಾತ್ಮಕ ದೃಷ್ಟಿಕೋನ ಮತ್ತು ಆತ್ಮವಿಶ್ವಾಸದಿಂದ ನಿಮ್ಮ ಸುತ್ತಲಿರುವ ಜನರನ್ನು ಪ್ರಭಾವಿಸಬಹುದಾದ ಸಾಧ್ಯತೆಗಳಿವೆ. ಈ ರಾಶಿ ಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ.

ಸಿಂಹ – ಇಂದು ಹಿಂದಿನ ಕೆಟ್ಟ ನಿರ್ಧಾರಗಳು ಹತಾಶೆ ಮತ್ತು ಮಾನಸಿಕ ಪ್ರಕ್ಷುಬ್ಧತೆಗೆ ಕಾರಣವಾಗುತ್ತದೆ – ನೀವು ಮುಂದೇನು ಮಾಡಬೇಕೆಂದು ನಿರ್ಧರಿಸಲಾಗದೇ ಸಲುಕಿಕೊಂಡಿರಬಹುದು. ಇತರರಿಂದ ಸಹಾಯ ಪಡೆಯಿರಿ.

ಕನ್ಯಾ – ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ.

ತುಲಾ – ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ ಮತ್ತು ಒಂಟಿತನದ ಭಾವನೆಯನ್ನು ತೊಡೆದುಹಾಕಿ. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳೆರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ.

ವೃಶ್ಚಿಕ – ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು.

ಧನಸ್ಸು – ಗಾಳಿಗೊಡ್ಡಿದ ಆಹಾರ ನಿಮಗೆ ಅನಾರೋಗ್ಯ ತರಬಹುದಾದ್ದರಿಂದ ಅವುಗಳನ್ನು ತಿನ್ನಬೇಡಿ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

ಮಕರ – ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

ಕುಂಭ – ಕೆಲವು ಬಿಕ್ಕಟ್ಟುಗಳು ಮತ್ತು ಭಿನ್ನಾಭಿಪ್ರಾಯಗಳು ನಿಮಗೆ ಕಿರಿಕಿರಿ ಹಾಗೂ ಆತಂಕವನ್ನು ತರಬಹುದು. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ.

ಮೀನ – ನೀವು ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ವಿವಾದಾತ್ಮಕ ವಿಷಯಗಳನ್ನು ತಪ್ಪಿಸಬೇಕು. ನಿಮ್ಮ ಪ್ರೇಮ ಜೀವನ ಶರದೃತುವಿನಲ್ಲಿನ ಮರದ ಎಲೆಯಂತಿರುತ್ತದೆ.

ದಾವಣಗೆರೆ ಲೋಕ ಚುನಾವಣೆ ಫಲಿತಾಂಶ: ಯಾರು ಗೆದ್ದರೂ ಇತಿಹಾಸ

ಬಿಜೆಪಿಯ ಜಿ.ಎಂ.ಸಿದ್ದೇಶ್ವರ ಮತ್ತು ಕಾಂಗ್ರೇಸ್‌ನ ಶಾಮನೂರು ಶಿವಶಂಕರಪ್ಪ ಕುಟುಂಬದ ನಡುವಿನ ಹೋರಾಟ

• ಉದಯವಾಹಿನಿ ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರದ 2024ರ ಚುನಾವಣೆಯಲ್ಲಿ ಯಾವ ಅಭ್ಯರ್ಥಿ ಗೆದ್ದರೂ ಸಹ ಇತಿಹಾಸ ನಿರ್ಮಾಣವಾಗಲಿದೆ. ಮೇ 7 ರಂದು ಕ್ಷೇತ್ರದಲ್ಲಿ ಶೇ 76.99ರಷ್ಟು ಮತದಾನವಾಗಿತ್ತು. ಜೂನ್ 4ರ ಮಂಗಳವಾರ ಚುನಾವಣಾ ಫಲಿತಾಂಶ ಪ್ರಕಟವಾಗುತ್ತಿದೆ. ಬೆಣ್ಣೆ ನಗರಿ ದಾವಣಗೆರೆಯ ಈ ಬಾರಿಯ ಚುನಾವಣೆ ಕುತೂಹಲಕ್ಕೆ ಕಾರಣವಾಗಿದೆ.

ಬಿಜೆಪಿಯಿಂದ ಗಾಯತ್ರಿ ಸಿದ್ದೇಶ್ವರ, ಕಾಂಗ್ರೇಸ್‌ನಿಂದ ಪ್ರಭಾ ಮಲ್ಲಿಕಾರ್ಜುನ್ ಅಭ್ಯ ಅಭ್ಯರ್ಥಿ. ಕಾಂಗ್ರೇಸ್ ಟಿಕೆಟ್ ಆಕಾಂಕ್ಷಿಯಾಗಿದ್ದ ಸಿದ್ದರಾಮಯ್ಯ ಆಪ್ತರಾದ ಜಿ. ಬಿ. ವಿನಯ್ ಕುಮಾರ್ ಪಕ್ಷೇತರ ಅಭ್ಯರ್ಥಿಯಾಗಿ ಕಣದಲ್ಲಿದ್ದಾರೆ. ದಾವಣಗೆರೆಯ ಲೋಕಸಭಾ ಚುನಾವಣೆ ಎಂದರೆ ಅದು ಬಿಜೆಪಿಯ ಜಿ. ಎಂ. ಸಿದ್ದೇಶ್ವರ ಮತ್ತು ಕಾಂಗ್ರೇಸ್‌ನ ಶಾಮನೂರು ಶಿವಶಂಕರಪ್ಪ ಕುಟುಂಬದ ನಡುವಿನ ಹೋರಾಟ. ಈ ಬಾರಿಯ ಚುನಾವಣೆಯಲ್ಲಿ ಜಿ. ಎಂ. ಸಿದ್ದೇಶ್ವರ ಪತ್ನಿ ಗಾಯತ್ರಿ ಸಿದ್ದೇಶ್ವರ ಬಿಜೆಪಿ ಅಭ್ಯರ್ಥಿ. ಶಾಮನೂರು ಶಿವಶಂಕರಪ್ಪ ಸೊಸೆ, ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಪತ್ನಿ ಡಾ. ಪ್ರಭಾಮಲ್ಲಿಕಾರ್ಜುನ್ ಕಾಂಗ್ರೇಸ್ ಅಭ್ಯರ್ಥಿ. ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ದಾವಣಗೆರೆಯಲ್ಲಿ ಅಭ್ಯರ್ಥಿ ಬದಲಾವಣೆ ಮಾಡಿದೆ.

ಹಾಲಿ ಸಂಸದರು ಜಿ. ಎಂ. ಸಿದ್ದೇಶ್ವರ. ಆದರೆ ಚುನಾವಣೆಯಲ್ಲಿ ಅವರಿಗೆ ಟಿಕೆಟ್ ನಿರಾಕರಿಸಲಾಗಿದ್ದು, ಗಾಯತ್ರಿ ಸಿದ್ದೇಶ್ವರ ಅವರನ್ನು ಅಭ್ಯರ್ಥಿಯಾಗಿ ಮಾಡಲಿದ್ದಾರೆ.

ಗಾಯತ್ರಿ ಸಿದ್ದೇಶ್ವರ, ಡಾ. ಪ್ರಭಾ ಮಲ್ಲಿಕಾರ್ಜುನ್ ಯಾರು ಗೆದ್ದರೂ ಸಹ ಹೊಸ ಇತಿಹಾಸ ನಿರ್ಮಾಣವಾಗಲಿದ್ದು, ದಾವಣಗೆರೆಯಿಂದ ಮಹಿಳಾ ಸಂಸದರು ಆಯ್ಕೆಯಾಗಲಿದ್ದಾರೆ. ದಾವಣಗೆರೆ ಕ್ಷೇತ್ರದ ಚುನಾವಣೆ ಜಿ. ಎಂ. ಸಿದ್ದೇಶ್ವರ ಮತ್ತು ಶಾಮನೂರು ಶಿವಶಂಕರಪ್ಪ ಕುಟುಂಬದ ನಡುವಿನ ಹೋರಾಟ, ಪ್ರತಿಷ್ಠೆ. 2004, 2009, 2014ರಲ್ಲಿ ಶಾಮನೂರು ಶಿವಶಂ ಕರಪ್ಪ ಪುತ್ರ ಎಸ್. ಎಸ್. ಮಲ್ಲಿಕಾರ್ಜುನ್ ಜಿ. ಎಂ. ಸಿದ್ದೇಶ್ವರ ವಿರುದ್ಧ ಸೋತಿದ್ದಾರೆ. 2019ರಲ್ಲಿ ಕಾಂಗ್ರೇಸ್ ಹೆಚ್. ಬಿ. ಮಂಜಪ್ಪ ಕಣಕ್ಕಿಳಿಸಿದರೂ ಅವರು ಸಹ ಸೋಲು ಕಂಡರು.

ದಾವಣಗೆರೆ ಕ್ಷೇತ್ರದ ವ್ಯಾಪ್ತಿಗೆ ಜಗಳೂರು, ಹರಪನಹಳ್ಳಿ, ಹರಿಹರ, ದಾವಣಗೆರೆ ಉತ್ತರ, ದಾವಣಗೆರೆ ದಕ್ಷಿಣ, ಮಾಯಕೊಂಡ, ಚನ್ನಗಿರಿ, ಹೊನ್ನಾಳಿ ವಿಧಾನಸಭಾ ಕ್ಷೇತ್ರಗಳು ಬರುತ್ತವೆ. ದಾವಣಗೆರೆ ಉತ್ತರ ಮತ್ತು ದಕ್ಷಿಣದಲ್ಲಿ ಶಾಮನೂರು ಕುಟುಂಬದವರೇ ಶಾಸಕರು. ಹರಪನಹಳ್ಳಿಯಲ್ಲಿ ಪಕ್ಷೇತರ ಶಾಸಕಿ ಲತಾ ಮಲ್ಲಿಕಾರ್ಜುನ ಕಾಂಗ್ರೇಸ್ ಬೆಂಬಲಿಸುತ್ತಾರೆ. ಹರಿಹರ ಶಾಸಕರು ಬಿ. ಪಿ. ಹರೀಶ್ (ಬಿಜೆಪಿ). ಶಾಮನೂರು ಶಿವಶಂಕರಪ್ಪ ಸೊಸೆ ಡಾ. ಪ್ರಭಾ ಮಲ್ಲಿಕಾರ್ಜುನ್ ಪ್ರಭಾವ ಕಡಿಮೆ ಏನಿಲ್ಲ. ಪತಿ ಎಸ್. ಎಸ್. ಮಲ್ಲಿಕಾರ್ಜುನ್ ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರು. ಶಾಮನೂರು ಶಿವಶಂಕರಪ್ಪ ಸಹ ಹಾಲಿ ಶಾಸಕರು. ಶಾಮನೂರು ಕುಟುಂಬದ ಪ್ರಭಾವ, ಪ್ರಭಾ ಮಲ್ಲಿಕಾರ್ಜುನ್ ಮಾಡುವ ಸಮಾಜ ಸೇವಾ ಚಟುವಟಿಕೆಗಳು ಗೆಲುವು ಸುಲಭವಾಗಿಸಲಿದೆ ಎಂಬುದು ಲೆಕ್ಕಾಚಾರವಾಗಿದೆ.

ಯಾರು ಗೆದ್ದರೂ ಇತಿಹಾಸ

ಉದಯವಾಹಿನಿ ಚಿತ್ರ

ಯಾರು ಗೆಲುವು ಸಾಧಿಸುತ್ತಾರೆ?

ಕುರುಬ ಸಮಯದಾಯಕ್ಕೆ ಸೇರಿದ ಜಿ. ಬಿ. ವಿನಯ್ ಕುಮಾರ್ ಕಾಂಗ್ರೇಸ್ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೆ ಟಿಕೆಟ್ ಶಾಮನೂರು ಕುಟುಂಬದ ಪಾಲಾದ ಬಳಿಕ ಸಿದ್ದರಾಮಯ್ಯ ಆಪ್ತರಾದ ಜಿ. ಬಿ. ವಿನಯ್ ಕುಮಾರ್ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದರು. ಆದರೆ ಚುನಾವಣಾ ಪ್ರಚಾರದಲ್ಲಿ ಸಿದ್ದರಾಮಯ್ಯ ಅವರೇ ವಿನಯ್ ಕುಮಾರ್‌ಗೆ ಮತ ಹಾಕಿದರೆ ಅದು ಬಿಜೆಪಿಗೆ ಹೋಗುತ್ತದೆ. ಅವರಿಗೆ ಮತ ಹಾಕಬೇಡಿ ಎಂದು ಕರೆ ನೀಡಿದರು. ಯಾರು ಗೆಲುವು ಸಾಧಿಸುತ್ತಾರೆ ಎಂದು ಜೂನ್ 4ರಂದು ತಿಳಿಯಲಿದೆ.

ಸಂಸದರಾಗಿ ಜಿ. ಎಂ. ಸಿದ್ದೇಶ್ವರ ಮಾಡಿರುವ ಅಭಿವೃದ್ಧಿ ಕಾರ್ಯಗಳು, ಪ್ರಧಾನಿ ನರೇಂದ್ರ ಮೋದಿ ಪ್ರಭಾವ ಮುಂತಾದ ಅಂಶಗಳು ಗಾಯತ್ರಿ ಸಿದ್ದೇಶ್ವರ ಅವರ ಗೆಲುವಿಗೆ ಸಹಕಾರಿಯಾಗಲಿದೆ ಎಂದು ಅಂದಾಜಿಸಲಾಗಿದೆ. ಎರಡೂ ರಾಷ್ಟ್ರೀಯ ಪಕ್ಷಗಳು ಮಹಿಳಾ ಅಭ್ಯರ್ಥಿಗಳನ್ನು ಕಣಕ್ಕಿಳಿಸಿರುವ ಕರ್ನಾಟಕದ ಏಕೈಕ ಕ್ಷೇತ್ರ ದಾವಣಗೆರೆಯಾಗಿದೆ. ಆದ್ದರಿಂದ ಯಾರು ಗೆದ್ದರೂ ರಾಜ್ಯದಿಂದ ಒಬ್ಬರು ಮಹಿಳಾ ಸಂಸದರು ಆಯ್ಕೆಯಾಗಲಿದ್ದಾರೆ.

ಕೀಟಗಳು ನಮ್ಮನ್ನಾಳುವ ಮುನ್ನ ಜಾಗೃತರಾಗಿ: ಜಿಲ್ಲಾ ಶಾಸ್ತ್ರಜ್ಞೆ ನಂದಿನಿ ಕಡಿ

• ಉದಯವಾಹಿನಿ ಚಿತ್ರದುರ್ಗ

ಕೀಟಗಳು ನಮ್ಮನ್ನಾಳುವ ಮುನ್ನ ಜಾಗೃತರಾಗಿ ಎಂದು ಜಿಲ್ಲಾ ಕೀಟ ಶಾಸ್ತ್ರಜ್ಞೆ ನಂದಿನಿ ಕಡಿ ಸಲಹೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಚಿತ್ರದುರ್ಗ ನಗರದ ವಾರ್ಡ್ ಸಂಖ್ಯೆ 21ರಲ್ಲಿ ಗುಂಪು ಸಭೆ ನಡೆಸಿ, ಮಂಗಳವಾರದಿಂದ ಆರಂಭವಾದ ಮೂರು ದಿನಗಳ ಡೆಂಗ್ಯೂ ನಿಯಂತ್ರಣಕ್ಕಾಗಿ ವಿಶೇಷ ಲಾರ್ವಾ ಸಮೀಕ್ಷೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಗರ ಪ್ರದೇಶಗಳಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿ ಕಂಡು ಬಂದಿದ್ದರಿಂದ, ಜಿಲ್ಲಾ ಮಟ್ಟದ ಅಂತರ್ ಇಲಾಖಾ ಸಮನ್ವಯ ಸಭೆಯಲ್ಲಿ ಜಿಲ್ಲಾಧಿಕಾರಿಗಳವರ ಮಾರ್ಗದರ್ಶನದಂತೆ ಸೊಳ್ಳೆಗಳ ನಿಯಂತ್ರಣಕ್ಕಾಗಿ ಲಾರ್ವಾ ಸಮೀಕ್ಷೆ ಹಮ್ಮಿಕೊಂಡಿದೆ. ಚಿತ್ರದುರ್ಗ ನಗರದ ಒಟ್ಟು 36 ವಾರ್ಡ್, 3 ನಗರ ಆರೋಗ್ಯ ಕೇಂದ್ರಗಳಿಂದ ಒಟ್ಟು 41117 ಮನೆ ಮನೆ ಭೇಟಿ ಲಾರ್ವಾ ಸಮೀಕ್ಷೆ, ಜ್ವರ ಪರೀಕ್ಷೆ, ಅಲ್ಲಲ್ಲಿ ಗುಂಪು ಸಭೆಯ ಮೂಲಕ ಡೆಂಗ್ಯೂ ನಿಯಂತ್ರಣ ಮಾಹಿತಿ ಶಿಕ್ಷಣ ನೀಡುವುದರ ಮೂಲಕ ಜನ ಜಾಗೃತಿ ಮೂಡಿಸಲಾಗುತ್ತಿದೆ. ಕೀಟಗಳು ನಮ್ಮನ್ನಾಳುವ ಮುನ್ನ ಜಾಗೃತರಾಗಿ ಎಂದು ಹೇಳಿದರು. ಡೆಂಗ್ಯೂ ಬಗ್ಗೆ ಆತಂಕ ಭಯ ಬೇಡ. ವಾರಕ್ಕೊಮ್ಮೆಯಾದರೂ ನೀರು ಸಂಗ್ರಹಿಸುವ ತೊಟ್ಟಿ ಟ್ಯಾಂಕ್ ಬ್ಯಾರೆಲ್ ಸ್ವಚ್ಛವಾಗಿ ತೊಳೆದು ಒಣಗಿಸಿ. ನೀರು ಸಂಗ್ರಹಿಸಿ ಮುಚ್ಚಳ ಮುಚ್ಚಿ. ತೀವ್ರ ಜ್ವರ, ತಲೆನೋವು, ಕಣ್ಣಿನ ಹಿಂಭಾಗ ನೋವು, ಮೈಕೈ ನೋವು ಕಂಡು ಬಂದಲ್ಲಿ ಸ್ವಯಂ ಚಿಕಿತ್ಸೆ ಮಾಡಿಕೊಳ್ಳದೇ ಹತ್ತಿರದ ನಗರ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷೆ, ಚಿಕಿತ್ಸೆ ಸಲಹೆ ಪಡೆದುಕೊಳ್ಳಿ. ಸಾರ್ವಜನಿಕರೆ ಎಚ್ಚರವಾಗಿ, ಬುದ್ಧಿವಂತರಾಗಿ ಸೊಳ್ಳೆಗಳ ಕಡಿತದಿಂದ ಸ್ವಯಂ ರಕ್ಷಣೆ ಮಾಡಿಕೊಳ್ಳಿ. ಮಾರಣಾಂತಿಕ ಡೆಂಗ್ಯೂ ನಿಯಂತ್ರಿಸಿ ಎಂದರು. ಮಂಗಳವಾರದಿಂದ ಆರಂಭವಾದ ಮೂರು ದಿನಗಳ ಡೆಂಗ್ಯೂ ನಿಯಂತ್ರಣಕ್ಕಾಗಿ ವಿಶೇಷ ಲಾರ್ವಾ ಸಮೀಕ್ಷೆ ಕಾರ್ಯಕ್ರಮದಲ್ಲಿ ಒಟ್ಟು 200 ತಂಡ 400 ಸಿಬ್ಬಂದಿಗಳು ಸಮೀಕ್ಷೆ ಕಾರ್ಯ ನಡೆಸಲಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣಾನಾಯ್ಕ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ, ಮಾರುತಿನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಯಶಸ್, ನಗರಸಭೆ ಆರೋಗ್ಯ ನಿರೀಕ್ಷಣಾಧಿಕಾರಿ ನಾಗರಾಜ್, ಆರೋಗ್ಯ ಇಲಾಖೆಯ ಆರೋಗ್ಯ ಸುರಕ್ಷತಾಧಿಕಾರಿಗಳಾದ ತಿಪ್ಪಮ್ಮ, ರೇಣುಕಾ, ಶೋಭಾ, ಶಿಲ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಂಗಾ ರೆಡ್ಡಿ, ಮಲ್ಲಿಕಾರ್ಜುನ, ನಾಗರಾಜ್, ತಿಪ್ಪೇಸ್ವಾಮಿ, ಶ್ರೀನಿವಾಸ್, ಪ್ರಶಾಂತ್, ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಭಾಗವಹಿಸಿದ್ದರು.

ಉದಯವಾಹಿನಿ ಚಿತ್ರ

ಮನೆಯ ಸುತ್ತಾ-ಮುತ್ತಾ ಪರಿಸರ ಸ್ವಚ್ಛವಾಗಿ ಇಟ್ಟುಕೊಳ್ಳಿ. ಘನತ್ಯಾಜ್ಯ ವಸ್ತುಗಳನ್ನು ಸರಿಯಾದ ಜಾಗದಲ್ಲಿ ವಿಲೇವಾರಿ ಮಾಡಿ ಹಂಚು, ಒಡೆದ ಮಡಕೆ, ಪ್ಲಾಸ್ಟಿಕ್ ಬಾಟಲ್, ಎಳನೀರಿನ ಚಿಪ್ಪು ಇವುಗಳಲ್ಲಿ ಮಳೆ ನೀರು ಸಂಗ್ರಹವಾಗಿ ಸೊಳ್ಳೆಗಳ ಉತ್ಪತ್ತಿ ತಾಣಗಳಾಗದಂತೆ ಕಾಳಜಿವಹಿಸಿ. ಹೂವಿನ ಗಿಡಗಳ ಕುಂಡಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಿ

-ಎನ್.ಎಸ್.ಮಂಜುನಾಥ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ

ಬರಗಾಲ: ಕುಂಠಿತಗೊಂಡ ಭತ್ತದ ಇಳುವರಿ

• ಉದಯವಾಹಿನಿ ಸಂತೇಬೆನ್ನೂರು

ಹೋಬಳಿ ವ್ಯಾಪ್ತಿಯಲ್ಲಿ ಈ ಬಾರಿ ಬೇಸಿಗೆ ಭತ್ತದ ಬೆಳೆಗೆ ಭದ್ರಾ ನಾಲೆ ನೀರು ಸಿಗದ ಕಾರಣ ನೀರಾವರಿ ಪ್ರದೇಶದ ಅನೇಕ ರೈತರು ಭತ್ತ ಬೆಳೆಯಲಿಲ್ಲ. ಕೊಳವೆಬಾವಿ ಸೌಲಭ್ಯ ಇರುವ ಕೆಲವೇ ರೈತರು ಈ ಬಾರಿ ಭತ್ತ ಬೆಳೆದಿದ್ದು, ಭತ್ತದ ಒಕ್ಕಲು ನಡೆದಿದೆ. ಮುಂಗಾರು ಪೂರ್ವ ಹಂತದಲ್ಲಿ ಪ್ರತಿ ಬಾರಿ ಭತ್ತದ ಒಕ್ಕಣೆ ಭರದಿಂದ ನಡೆಯುತ್ತಿತ್ತು.

ಬರಗಾಲದ ಹಿನ್ನೆಲೆಯಲ್ಲಿ ಕ್ಷೇತ್ರ ಕಡಿಮೆಯಾಗಿದ್ದು, ಅಲ್ಲಲ್ಲಿ ಕೆಲವು ರೈತರು ಮಳೆಯ ಆತಂಕದ ನಡುವೆಯೇ ಭತ್ತದ ಒಕ್ಕಣೆಯಲ್ಲಿ ತೊಡಗಿದ್ದಾರೆ. ಮಳೆಯ ಕೊರತೆ ಹಾಗೂ ಭದ್ರಾ ನೀರು ದೊರೆಯದ್ದರಿಂದ ಭತ್ತದ ಇಳುವರಿಯೂ ಕುಸಿದಿದೆ. ಎಕರೆಗೆ 20ರಿಂದ 30 ಕ್ವಿಂಟಲ್ ಭತ್ತದ ಇಳುವರಿ ಬರುತ್ತಿದೆ. ಬೆಲೆಯೂ ಈ ಬಾರಿ ಇಳಿದಿರುವ ಕಾರಣ ರೈತರು ನಿರಾಶೆಗೊಂಡಿದ್ದಾರೆ. ಪ್ರತಿ ಕ್ವಿಂಟಲ್‌ಗೆ ಭತ್ತದ ದರ 2,500ರಿಂದ 2,700ರ ಆಸುಪಾಸಿನಲ್ಲಿದೆ. ಕಳೆದ ಬಾರಿ 3,600ರ ವರೆಗೆ ಬೆಲೆ ಸಿಕ್ಕಿತ್ತು. ಹೋಬಳಿಯಲ್ಲಿ 2,400 ಹೆಕ್ಟೇರ್ ನೀರಾವರಿ ಪ್ರದೇಶ ಇದೆ. ಈ ಬಾರಿ 300ರಿಂದ 400 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಭತ್ತ ಬೆಳೆಯಲಾಗಿದೆ. ಭತ್ತದ ಇಳುವರಿ ಕುಸಿದಿದ್ದರೂ ಬೆಲೆ ಕಡಿಮೆಯಾಗಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ ಎಂದು ತಣಿಗೆರೆಯ ರೈತ ಜಗದೀಶ್ ಬೇಸರಿಸಿದರು.

ಭತ್ತದ ತೆನೆಯ ತುದಿಯಲ್ಲಿ ಕಾಳು ಕಟ್ಟಿಲ್ಲ. ಜೊಳ್ಳಾಗಿವೆ. ಹಾಗಾಗಿ ನಿರೀಕ್ಷಿತ ಇಳುವರಿ ಬರಲಿಲ್ಲ. ಖರ್ಚು ಮತ್ತು ಈಗ ದೊರೆಯುತ್ತಿರುವ ದರದ ತುಲನೆ ಮಾಡಿದರೆ ತೀವ್ರ ನಷ್ಟ ಎದುರಾಗುತ್ತಿದೆ ಎಂಬುದು ರೈತರ ಅಳಲು.

ಉದಯವಾಹಿನಿ ಚಿತ್ರ

ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಲಭ್ಯ: ಜಂಟಿ ಕೃಷಿ ನಿರ್ದೆಶಕ ಕೆ. ಹೆಚ್ ರವಿ

• ಉದಯವಾಹಿನಿ ಯಾದಗಿರಿ

ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳು ಲಭ್ಯವಿದ್ದು ರೈತರು ತಮ್ಮ ಆಧಾರ, ಪಹಣಿ, ಹೋಲ್ಡಿಂಗ್ ನೀಡಿ ಬಿತ್ತನೆ ಬೀಜ ಪಡೆಯಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಕೆ. ಹೆಚ್ ರವಿ ಅವರು ತಿಳಿಸಿದ್ದಾರೆ. ಜಾತಿ ಪ್ರಮಾಣ ಪತ್ರವನ್ನು ಪ.ಜಾ ಮತ್ತು ಪರಿಶಿಷ್ಟ ಪಂಗಡದ ರೈತರು ನೀಡಿದಲ್ಲಿ ಅವರಿಗೆ ರಿಯಾಯಿತಿ ದರದಲ್ಲಿಯೂ ಸಹ ವಿನಾಯಿತಿ ಇರುತ್ತದೆ ಎಂದು ಅವರು ತಿಳಿಸಿದ್ದಾರೆ.

ಶಹಾಪುರ ತಾಲ್ಲೂಕು ವ್ಯಾಪ್ತಿಯ ಶಹಾಪುರ , ದೋರನಹಳ್ಳಿ, ಗೋಗಿ, ವಡಗೇರಾ, ಹೈಯ್ಯಾಳ ಬಿ. ಸುರಪುರ ತಾಲ್ಲೂಕು ವ್ಯಾಪ್ತಿಯ ಸುರಪುರ, ಕಕ್ಕೇರಾ, ಕೊಡೆಕಲ್, ಹುಣಸಗಿ, ಕೆಂಭಾವಿ. ಯಾದಗಿರಿ ತಾಲೂಕು ವ್ಯಾಪ್ತಿಯ ಯಾದಗಿರಿ

ಚೀನಾದಲ್ಲಿ ಉಯ್‌ಘುರ್ ಮುಸ್ಲಿಮರಿಗೆ ನರಕ ದರ್ಶನ

ಇಸ್ಲಾಂ ಸಾಂಪ್ರದಾಯಿಕ ಬಟ್ಟೆ ಧರಿಸುವಂತಿಲ್ಲ, ಗಡ್ಡ ಬಿಡುವಂತಿಲ್ಲ, ಇಸ್ಲಾಮಿಕ್ ಶಿಕ್ಷಣ ಪಡೆಯುವಂತಿಲ್ಲ, ಕುರಾನ್‌ಗೂ ತಿದ್ದುಪಡಿ

ಇಸ್ಲಾಮಿಕ್ ಚಟುವಟಿಕೆಗಳಿಗೆ ಅತ್ಯುಗ್ರ ನಿರ್ಬಂಧ

ಚೀನಾ: ಉಯ್‌ಘುರ್ ಮುಸ್ಲಿಂ.. ಈ ಸಮುದಾಯ ಅನುಭವಿಸುತ್ತಿರುವ ಗೋಳು ಇಂದು, ನಿನ್ನೆಯದಲ್ಲ.. ಚೀನಾದ ಕ್ಸಿನ್‌ಜಿಯಾಂಗ್ ಪ್ರಾಂತ್ಯದಲ್ಲಿ ಸುಮಾರು 1 ಕೋಟಿ 80 ಲಕ್ಷ ಉಯ್‌ಘುರ್ ಮುಸ್ಲಿಮರು ನೆಲೆಸಿದ್ದಾರೆ ಅನ್ನೋ ಮಾಹಿತಿ ಇದೆ. ಚೀನಾದ ಒಟ್ಟು ವಯಸ್ಕ ಜನಸಂಖ್ಯೆಯ ಪೈಕಿ ಶೇ 1.6ರಷ್ಟು ಇರುವ ಉಯ್‌ಘುರ್ ಮುಸ್ಲಿಂ ಸಮುದಾಯ, ಇದೀಗ ಹಿಂದೆಂದಿಗಿಂತಲೂ ಸಂಕಷ್ಟಕರ ಸನ್ನಿವೇಶಕ್ಕೆ ಸಿಲುಕಿದೆ.

ಉಯ್‌ಘುರ್ ಮುಸ್ಲಿಂ ಸಮುದಾಯದ ಸ್ಥಿತಿಗತಿಗಳ ಕುರಿತಾಗಿ ಬ್ರಿಟನ್‌ನ ಸ್ಕೈ ನ್ಯೂಸ್ ಸಮಗ್ರ ವರದಿ ಪ್ರಕಟಿಸಿದೆ. ಅಂತಾರಾಷ್ಟ್ರೀಯ ಒತ್ತಡ, ಮಾನವ ಹಕ್ಕು ಸಂಘಟನೆಗಳ ಹೋರಾಟದ ಮಧ್ಯೆಯೂ ಇಸ್ಲಾಮಿಕ್ ಆಚರಣೆಗಳಿಗೆ ಯಾವೆಲ್ಲಾ ರೀತಿಯ ನಿರ್ಬಂಧವನ್ನು ಚೀನಾ ಸರ್ಕಾರ ವಿಧಿಸಿದೆ ಎಂಬುದನ್ನು ಸ್ಕೈ ನ್ಯೂಸ್ ಇಡೀ ವಿಶ್ವದ ಮುಂದಿಡುವ ಪ್ರಯತ್ನ ಮಾಡಿದೆ.

ಚೀನಾದಲ್ಲಿ ಸಾವಿರಾರು ಮಸೀದಿಗಳನ್ನು ವ್ಯಾಪಕವಾಗಿ ಧ್ವಂಸ ಮಾಡಲಾಗಿದೆ. ಬಹುತೇಕ ಮಸೀದಿಗಳು ಚೀನಾ ಸಂಪ್ರದಾಯಿಕ ವಾಸ್ತು ಶಿಲ್ಪಕ್ಕೆ ಪೂರಕವಾಗಿಲ್ಲ ಅನ್ನೋ ಕಾರಣಕ್ಕೆ ಅನುಮತಿಯೇ ಸಿಕ್ಕಿಲ್ಲ! ವೃದ್ಧ ಮುಸ್ಲಿಂ ವ್ಯಕ್ತಿಯೊಬ್ಬರು ಹಳ್ಳಿಯೊಂದರ ಸಣ್ಣ ಮಸೀದಿಯಲ್ಲಿ ನಿಂತು ನಮ್ಮ ಧರ್ಮ ಸಾಯುತ್ತಿದೆ ಎಂದು ಹೇಳಿರೋದಾಗಿಯೂ ವರದಿಯಲ್ಲಿ ನಮೂದಾಗಿದೆ

ಚೀನಾದಲ್ಲಿ ಉಯ್‌ಘುರ್ ಮುಸ್ಲಿಮರಿಗೆ ಸಂಕಷ್ಟವೇಕೆ?

ಚೀನಾ ಸರ್ಕಾರವು ತಮ್ಮಲ್ಲಿರುವ ಉಯ್‌ಘುರ್ ಮುಸ್ಲಿಂ ಸಮುದಾಯ ಭಯೋತ್ಪಾದಕ ಚಟುವಟಿಕೆ ಸೇರಿದಂತೆ ಸಮಾಜ ಘಾತುಕ ಕೃತ್ಯಗಳಲ್ಲಿ ಭಾಗಿಯಾಗುತ್ತದೆ ಎಂದು ಆರೋಪ ಮಾಡಿದ್ದು, ಅವರ ಮೇಲೆ ನಿಗಾ ಇರಿಸಲು ದೇಶದ ಆಂತರಿಕ ಭದ್ರತೆಯ ಕಾರಣ ನೀಡಿದೆ. ಇದರ ಭಾಗವಾಗಿ ಇಸ್ಲಾಮಿಕ್ ಆಚರಣೆಗಳಿಗೇ ನಿರ್ಬಂಧ ಹೇರಿದೆ. ಮಸೀದಿಗಳ ಧ್ವಂಸ, ಇಸ್ಲಾಮಿಕ್ ಮಾದರಿ ದಿರಿಸುಗಳಿಗೆ ನಿರ್ಬಂಧ, ಗಡ್ಡ ಬಿಡುವಂತಿಲ್ಲ, ಕುರಾನ್ ಸೇರಿದಂತೆ ಇಸ್ಲಾಮಿಕ್ ಗ್ರಂಥಗಳಿಗೆ ನಿರ್ಬಂಧ, ಚೀನಾ ಸಂಪ್ರದಾಯಕ್ಕೆ ತಕ್ಕಂತೆ ಕುರಾನ್ ತಿದ್ದುಪಡಿ.. ಹೀಗೆ ಹಲವು ಮಾರ್ಗಗಳಲ್ಲಿ ಇಸ್ಲಾಂ ಧರ್ಮವನ್ನು ನಿರ್ಬಂಧಿಸುತ್ತಿದೆ. ಈ ಎಲ್ಲಾ ಕಾರಣಗಳಿಂದಾಗಿ ಚೀನಾದಲ್ಲಿ ಇರುವ ಉಯ್‌ಘುರ್ ಮುಸ್ಲಿಂ ಸಮುದಾಯದ ದೈನಂದಿನ ಜೀವನವೇ ಕಷ್ಟ ಕಷ್ಟ ಎಂಬಂತಾಗಿದೆ. ಮುಸ್ಲಿಂ ವಿದ್ಯಾರ್ಥಿಗಳು ಧಾರ್ಮಿಕ ಶಿಕ್ಷಣವನ್ನಂತೂ ಪಡೆಯುವಂತೆಯೇ ಇಲ್ಲ. ಮುಸ್ಲಿಂ ಧರ್ಮ ಗುರುಗಳು ಹಾಗೂ ಇಮಾಮ್‌ಗಳು ಮರು ಶಿಕ್ಷಣ ಪಡೆಯಬೇಕಾದ ಕಡ್ಡಾಯ ಕಾನೂನನ್ನು ಚೀನಾ ಸರ್ಕಾರ ಮಾಡಿದೆ ಎಂದು ಸ್ಕೈ ನ್ಯೂಸ್ ವರದಿ ಹೇಳಿದೆ.

ಅಂತಾರಾಷ್ಟ್ರೀಯ ಸಮುದಾಯ ಚೀನಾದಲ್ಲಿನ ಉಯ್‌ಘುರ್ ಮುಸ್ಲಿಂ ಸಮುದಾಯದ ವಿಚಾರದಲ್ಲಿ ಪದೇ ಪದೇ ತನ್ನ ಕಳವಳ ವ್ಯಕ್ತಪಡಿಸುತ್ತಲೇ ಇದೆ. ಮಾನವ ಹಕ್ಕು ಸಂಘಟನೆಗಳಂತೂ ಭಾರೀ ಹೋರಾಟವನ್ನೇ ನಡೆಸುತ್ತಿವೆ. ಆದರೆ, ರಾಷ್ಟ್ರೀಯ ಭದ್ರತೆಯ ಕಾರಣ ಮುಂದಿಟ್ಟು ನಿರ್ಬಂಧ ಹೇರಿರುವ ಚೀನಾ ದೇಶವನ್ನು ಮಣಿಸಲು ಸಾಧ್ಯವಾಗುತ್ತಲೇ ಇಲ್ಲ. ಹೀಗಾಗಿ, ದಿನೇ ದಿನೇ ಪಾರದರ್ಶಕತೆ ಕಡಿಮೆ ಆಗ್ತಿರುವ ಜೊತೆಯಲ್ಲೇ ಧಾರ್ಮಿಕ ಸ್ವಾತಂತ್ರ್ಯ ಅನ್ನೋದೇ ಇಲ್ಲವಾಗಿದೆ.

ಇಸ್ಲಾಂ ಆಚರಣೆಗಳಿಗೆ ಇನ್ನಿಲ್ಲದ ಕಠಿಣ ನಿರ್ಬಂಧ!

ಕೇಂದ್ರೀಯ ಚೀನಾದ ಕ್ಸಿನ್‌ಜಿಯಾಂಗ್ ಪ್ರಾಂತ್ಯದಲ್ಲಿ ಮುಸ್ಲಿಮರು ನೆಲೆಸಿದ್ದಾರೆ. ಆದರೆ, ನೆಲೆಸಿದ್ದಾರೆ ಅನ್ನೋದಕ್ಕಿಂತಾ ಹೆಚ್ಚಾಗಿ ಬಯಲು ಬಂದೀಖಾನೆಯಲ್ಲಿ ಇರುವಂಥಾ ವಾತಾವರಣ ಇದೆ. ಮುಸ್ಲಿಮರ ಮುಖ ಗುರುತಿಸುವ ಎಐ ತಂತ್ರಜ್ಞಾನ ಆಧರಿತ ಕ್ಯಾಮರಾಗಳನ್ನು ಎಲ್ಲೆಡೆ ಅಳವಡಿಸಲಾಗಿದೆ. ಈ ಮೂಲಕ ದಿನದ 24 ಗಂಟೆಯೂ ಮುಸ್ಲಿಂ ಸಮುದಾಯದ ಚಟುವಟಿಕೆಗಳ ಮೇಲೆ ನಿರಂತರ ನಿಗಾ ಇರಿಸಲಾಗುತ್ತದೆ.

ರಸ್ತೆಯಲ್ಲಿ ನಮಾಜ್ ಮಾಡಬೇಕೇ? ಬೇಡವೇ ಅನ್ನೋದು ಭಾರತ ಸೇರಿದಂತೆ ವಿಶ್ವಾದ್ಯಂತ ಚರ್ಚಾ ವಿಷಯ! ಆದರೆ, ಚೀನಾದಲ್ಲಿ ಮಾತ್ರ ಮುಸ್ಲಿಮರಾಗಿ ಹುಟ್ಟಿದ್ದೇ ತಪ್ಪು ಎಂಬಂಥಾ ಸನ್ನಿವೇಶ ಇದೆ. ಇಲ್ಲಿನ ಉಯ್‌ಘುರ್ ಸಮುದಾಯದ ಮುಸ್ಲಿಮರಿಗೆ ಇನ್ನಿಲ್ಲದ ಕಠಿಣ ನಿರ್ಬಂಧಗಳನ್ನ ಹೇರಲಾಗಿದೆ. ಈ ವಿಚಾರವಾಗಿ ಅಂತಾರಾಷ್ಟ್ರೀಯ ಸಮುದಾಯ ಚೀನಾ ವಿರುದ್ಧ ಹರಿಹಾಯುತ್ತಿದ್ದರೂ ಕೂಡಾ ಚೀನಾದ ಪರಮ ಮಿತ್ರ ನೆರೆಯ ಪಾಕಿಸ್ತಾನ ದೇಶ ಮಾತ್ರ ಮುಸ್ಲಿಮರ ಪರ ಬಾಯಿ ಬಿಡುತ್ತಲೇ ಇಲ್ಲ!

ಭಾರತ ಮೂಲದ ಬ್ರಿಟನ್ ಹಿರಿಯ ಸಂಸದ ರಾಜಕೀಯ ನಿವೃತ್ತಿ

ಲಂಡನ್: ಬ್ರಿಟನ್‌ನ ಭಾರತೀಯ ಮೂಲದ ಹಿರಿಯ ಸಂಸತ್ ಸದಸ್ಯ ಮತ್ತು ಭಾರತ-ಬ್ರಿಟನ್ ನಿಕಟ ಸಂಬಂಧಗಳ ಪ್ರಬಲ ಪ್ರತಿಪಾದಕ ವೀರೇಂದ್ರ ಶರ್ಮಾ ಅವರು ಸಕ್ರಿಯ ರಾಜಕಾರಣದಿಂದ ನಿವೃತ್ತಿ ಘೋಷಿಸಿದ್ದಾರೆ. ಮುಂಬರುವ ಜುಲೈ 4ರಂದು ನಡೆಯಲಿರುವ ಬ್ರಿಟನ್ ಸಾರ್ವತ್ರಿಕ ಚುನಾವಣೆಯಲ್ಲಿ ಮತ್ತೆ ಸ್ಪರ್ಧಿಸದೇ ಇರಲು ನಿರ್ಧರಿಸಿದ್ದಾರೆ.

77 ವರ್ಷದ ಲೇಬರ್ ಪಾರ್ಟಿ ಸಂಸದ ಶರ್ಮಾ ಅವರು ಪಂಜಾಬಿ ಸಮುದಾಯದ ಬಾಹುಳ್ಯವಿರುವ ಈಲಿಂಗ್ ಸೌತ್ ಹಾಲ್ ಕ್ಷೇತ್ರದಿಂದ 2007ರ ಉಪ ಚುನಾವಣೆಯಲ್ಲಿ ಗೆದ್ದ ಬಳಿಕ ದಾಖಲೆಯ ನಾಲ್ಕು ಸಾರ್ವತ್ರಿಕ ಚುನಾವಣೆಗಳಲ್ಲಿ ಜಯಗಳಿಸಿದ್ದಾರೆ. ಇದು ಓರ್ವ ಅಜ್ಜನಾಗಿ ನನ್ನ ಜೀವನದ ಹೊಸ ಅಧ್ಯಾಯದ ಸಮಯ ಎಂದು ಅವರು ಹೇಳಿದ್ದಾರೆ.

ಪಂಜಾಬ್‌ನ ಮಂಧಾಲಿ ಗ್ರಾಮದಲ್ಲಿ ಜನಿಸಿದ ಶರ್ಮಾ 1968ರಲ್ಲಿ ಬ್ರಿಟನ್‌ಗೆ ತೆರಳಿ ಬಸ್ ಕಂಡಕ್ಟರ್ ಆಗಿ ವೃತ್ತಿ ಜೀವನ ಪ್ರಾರಂಭಿಸಿದರು. ಬಳಿಕ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್‌ನಲ್ಲಿ ಟ್ರೇಡ್ ಯೂನಿಯನ್ ವಿದ್ಯಾರ್ಥಿ ವೇತನ ಪಡೆದು ಅಧ್ಯಯನ ಮಾಡಿದರು.

ಬಳಿಕ ಅವರ ಕಾಲದ ಪ್ರಮುಖ ಕಾರ್ಮಿಕ ಮುಖಂಡನಾಗಿ ರೂಪು ಗೊಂಡರು. ಓರ್ವ ಬ್ರಿಟಿಷ್ ಭಾರತೀಯನಾಗಿ ಮತ್ತು ಓರ್ವ ಹಿಂದೂ ಆಗಿ, ಲೇಬರ್ ಸದಸ್ಯನಾಗಿ ಕೌನ್ಸಿಲ್‌ರ್ ಆಗಿ, ಸಂಸದರನಾಗಿ ನಾನು ಎಂದೂ ತತ್ವಸಿದ್ಧಾಂತಗಳಲ್ಲಿ ರಾಜಿ ಮಾಡಿಕೊಂಡಿಲ್ಲ. ಕಳೆದ 50 ವರ್ಷಗಳಲ್ಲಿ ನಾನು ಲೇಬರ್ ಪಕ್ಷಕ್ಕೆ ಒಂದಲ್ಲ ಒಂದು ರೂಪದಲ್ಲಿ ಸೇವೆ ಸಲ್ಲಿಸಿದ್ದೇನೆ. ಇದು ನನ್ನ ಜೀವನದ ಮತ್ತೊಂದು ಹೊಸ ಅಧ್ಯಾಯ ಪ್ರಾರಂಭಿಸಲು ಸುಸಮಯ ಎಂದು ಭಾವಿಸಿದ್ದೇನೆ.

ನಾನು ಮುಂದಿನ ಚುನಾವಣೆಯಲ್ಲಿ ನಿಲ್ಲುವುದಿಲ್ಲ ಎಂಬುದನ್ನು ನಿಮ ಗಮನಕ್ಕೆ ತರಬಯಸುತ್ತೇನೆ. ಆದರೆ ಇದು ಲೇಬರ್ ಪಕ್ಷ ಗೆಲ್ಲಬೇಕೆಂಬ ನನ್ನ ಅಪೇಕ್ಷೆಯನ್ನು ದುರ್ಬಲಗೊಳಿಸುವುದಿಲ್ಲ. ನಾವು ಗೆದ್ದೇಗೆಲ್ಲುವೆನೆಂಬ ಖಾತರಿ ನನಗಿದೆ ಎಂದು ಸೋಮವಾರ ಸಂಜೆ ಲೇಬರ್ ಪಕ್ಷಕ್ಕೆ ಬರೆದಿರುವ ಪತ್ರದಲ್ಲಿ ಶರ್ಮಾ ನಿವೇದಿಸಿಕೊಂಡಿದ್ದಾರೆ. ನಾನು ಲೇಬರ್: ಲೇಬರ್ ಪಕ್ಷಕ್ಕೆ ನನ್ನ ಬೆಂಬಲವನ್ನು ಮುಂದುವರೆಸುತ್ತೇನೆ. ಲೇಬರ್ ಪಕ್ಷದ ಯೋಜನೆಗಳ ಭಾಗವಾಗಿ ನಾನು ಮುಂದುವರೆಯಲಿದ್ದೇನೆ ಎಂಬ ಭರವಸೆ ನನಗಿದೆ. ಆದರೆ ಹೌಸ್ ಆಫ್ ಕಾಮನ್ಸ್‌ನ ಸದಸ್ಯನಾಗಿ ನಾನು ಮುದುವರಿಯುವುದಿಲ್ಲ ಎಂದರು.

ತುರ್ತು ನೆರವು ಘೋಷಿಸಿದ ಭಾರತ

ನವದೆಹಲಿ: ಪಪುವಾ ನ್ಯೂಗಿನಿಯಲ್ಲಿ ಸಂಭವಿಸಿದ್ದ ಭೂಕುಸಿತದಲ್ಲಿ ಭಾರಿ ಹಾನಿ ಉಂಟಾಗಿದೆ. ಸಂತ್ರಸ್ತರಿಗೆ ಪರಿಹಾರವನ್ನು ಒದಗಿಸುವ ನಿಟ್ಟಿನಲ್ಲಿ ಭಾರತವು ಮಂಗಳವಾರ ಒಂದು ಮಿಲಿಯನ್ ಅಮೆರಿಕನ್ ಡಾಲರ್ (ಅಂದಾಜು 8.3 ಕೋಟಿ) ತುರ್ತು ಆರ್ಥಿಕ ನೆರವನ್ನು ಘೋಷಿಸಿದೆ. ಮೇ 24ರಂದು ಪಪುವಾ ನ್ಯೂಗಿನಿಯಲ್ಲಿ ಸಂಭವಿಸಿದ್ದ ಭಾರಿ ಭೂಕುಸಿತದಲ್ಲಿ 2,000ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ.

ಪಪುವಾ ನ್ಯೂಗಿನಿಯಲ್ಲಿ ಉಂಟಾಗಿದ್ದ ದುರಂತಕ್ಕೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅಲ್ಲದೆ ಸಂಕಷ್ಟಕ್ಕೆ ಒಳಗಾಗಿರುವ ಜನರಿಗೆ ನೆರವು ನೀಡಲು ಭಾರತ ಸಿದ್ಧವಿದೆ ಎಂದು ತಿಳಿಸಿದ್ದರು. ಭಾರತ-ಪೆಸಿಫಿಕ್ ದ್ವೀಪ ರಾಷ್ಟ್ರಗಳ ಸಹಕಾರ ವೇದಿಕೆಯ (ಎಫ್‌ಐಪಿಐಸಿ) ಆಪ್ತ ಸ್ನೇಹಿತ ಹಾಗೂ ಪಾಲುದಾರನಾಗಿ ಪಪುವಾ ನ್ಯೂಗಿನಿಯ ಜನರೊಂದಿಗೆ ಒಗ್ಗಟ್ಟಿನ ಸೂಚಕವಾಗಿ ಭಾರತ ಸರ್ಕಾರವು, ಹಾನಿಗೊಳಗಾದ ಜನರ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣದ ಭಾಗವಾಗಿ ಒಂದು ಮಿಲಿಯನ್ ಅಮೆರಿಕನ್ ಡಾಲರ್ ತುರ್ತು ನೆರವನ್ನು ಘೋಷಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯವು (ಎಂಇಎ) ತಿಳಿಸಿದೆ.

ಪಪುವಾ ನ್ಯೂಗಿನಿಯಲ್ಲಿ ಉಂಟಾದ ಹಾನಿಯು ತೀವ್ರ ನೋವನ್ನುಂಟು ಮಾಡಿದೆ. ಪಪುವಾ ನ್ಯೂಗಿನಿ ಜನರೊಂದಿಗೆ ನಾವಿದ್ದೇವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಹೇಳಿದ್ದರು.

2018 ಹಾಗೂ 2019ರಲ್ಲಿ ಪಪುವಾ ನ್ಯೂಗಿನಿಯಲ್ಲಿ ಪ್ರಕೃತಿ ವಿಕೋಪದಿಂದ ಹಾನಿ ಸಂಭವಿಸಿದ್ದಾಗಲೂ ಭಾರತ ನೆರವು ಘೋಷಿಸಿತ್ತು.

ರಾಜಕೀಯ ಆಟಕ್ಕೆ ಐಸಿಸಿ ವೇದಿಕೆಯಲ್ಲ ಅಂತರರಾಷ್ಟ್ರೀಯ ನ್ಯಾಯಾಲಯ

ಸಿಡ್ನಿ: ಹಮಾಸ್ ಮತ್ತು ಇಸ್ರೇಲ್ ಮುಖಂಡರ ವಿರುದ್ಧದ ಬಂಧನ ವಾರಂಟ್ ಕುರಿತು ಅಂತರರಾಷ್ಟ್ರೀಯ ಅಪರಾಧ ನ್ಯಾಯಾಲಯದ (ಐಸಿಸಿ) ಮೇಲಿನ ಆರೋಪಿಗಳ ಬಗ್ಗೆ ಹೆಚ್ಚು ದೃಷ್ಟಿ ನೆಡಲಾಗಿದೆ. ಆದರೆ, ಅವರು ಏಕೆ ಆರೋಪಿಗಳಾಗಿದ್ದಾರೆ ಎಂಬುದರ ಕುರಿತು ಗಮನವೇ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದೆ.

ಅಂತರರಾಷ್ಟ್ರೀಯ ಅಪರಾಧ ನ್ಯಾಯಾಲಯದ ಪ್ರಾಸಿಕ್ಯೂಟರ್ ಕರೀಂ ಖಾನ್ ಸೋಮವಾರ ಮಾತನಾಡಿ, 'ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹಾಗೂ ಹಮಾಸ್ ಮುಖಂಡ ಯಹ್ಯಾ ಸಿನ್ವಾರ್ ಸೇರಿದಂತೆ ಪ್ರಮುಖ ನಾಯಕರ ಬಂಧನಕ್ಕೆ ಮೇ 20ರಂದು ವಾರಂಟ್ ಹೊರಡಿಸಲಾಗಿದೆ' ಎಂದು ಘೋಷಿಸಿದರು.

ಐಸಿಸಿಯ ಈ ತೀರ್ಮಾನಕ್ಕೆ ವಿಶ್ವನಾಯಕರು ಮಿಶ್ರ ಪ್ರತಿಕ್ರಿಯೆ ನೀಡಿದ್ದಾರೆ. ಫ್ರಾನ್ಸ್ ಮತ್ತು ದಕ್ಷಿಣ ಆಫ್ರಿಕಾ, ನ್ಯಾಯಾಲಯದ ಈ ತೀರ್ಮಾನವು ನಿಷ್ಪಕ್ಷಪಾತವಾಗಿದೆ ಎಂದು ಬೆಂಬಲಿಸಿದರೆ, ಆಸ್ಟ್ರೇಲಿಯಾ ಮತ್ತು ಅಮೆರಿಕವು, ಈ ಘೋಷಣೆಯು ನಾಚಿಕೆಗೇಡಿನ ಸಂಗತಿ ಎಂದು ಅಸಮಾಧಾನ ವ್ಯಕ್ತಪಡಿಸಿವೆ.

ಇಸ್ರೇಲ್ ನಾಯಕರನ್ನು ಹಮಾಸ್‌ನೊಂದಿಗೆ ಸಮೀಕರಿಸುವುದು ಅತಿರೇಕದ್ದು ಎಂದು ಅಮೆರಿಕದ ಅಧ್ಯಕ್ಷ ಜೋ ಬೈಡನ್ ಟೀಕಿಸಿದ್ದಾರೆ. ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ ಇಸ್ರೇಲ್ ಸರ್ಕಾರವೇ ಬೇರೆ ಮತ್ತು ಹಮಾಸ್ ಬಂಡುಕೋರರೇ ಬೇರೆ. ಈ ಬಗ್ಗೆ ಐಸಿಸಿ ಪುನರ್ ಪರಿಶೀಲನೆ ಮಾಡಬೇಕೆಂಬ ಒತ್ತಡಕ್ಕೆ ಸಿಲುಕಿಸಿದೆ.

ಭಾರತದ ಮೇಜರ್ ರಾಧಿಕಾ ಸೇನ್‌ಗೆ ಮಿಲಿಟರಿ ಅಡ್ವೊಕೇಟ್ ಆಫ್ ದಿ ಇಯರ್ ಪ್ರಶಸ್ತಿ



ವಿಶ್ವಸಂಸ್ಥೆ: ಕಾಂಗೋದಲ್ಲಿ ವಿಶ್ವಸಂಸ್ಥೆಯ ಮಿಷನ್‌ನಲ್ಲಿ ಸೇವೆ ಸಲ್ಲಿಸಿದ ಭಾರತೀಯ ಮಹಿಳಾ ಶಾಂತಿ ಪಾಲಕ ಮೇಜರ್ ರಾಧಿಕಾ ಸೇನ್ ಅವರಿಗೆ ಪ್ರತಿಷ್ಠಿತ ವರ್ಷದ ಮಿಲಿಟರಿ ಸಾಧಕಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು ಎಂದು ಸೆಕ್ರೆಟರಿ ಜನರಲ್ ಆಂಟೋನಿಯೊ ಗುಟೆರೆಸ್ ಘೋಷಿಸಿದ್ದಾರೆ. ಮೇ 30 ರಂದು ಯುಎನ್ ಶಾಂತಿಪಾಲಕರ ಅಂತರರಾಷ್ಟ್ರೀಯ ದಿನವನ್ನು ಗುರುತಿಸುತ್ತದೆ ಇದೇ ದಿನ ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋದಲ್ಲಿ ಯುನೈಟೆಡ್ ನೇಷನ್ಸ್ ಆರ್ಗನೈಸೇಶನ್ ಸ್ಟೆಬಿಲೈಸೇಶನ್ ಮಿಷನ್‌ನೊಂದಿಗೆ ಸೇವೆ ಸಲ್ಲಿಸಿದ ಮೇಜರ್ ರಾಧಿಕಾ ಸೇನ್ ಅವರಿಗೆ ಇಲ್ಲಿನ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ನಡೆಯುವ ಸಮಾರಂಭದಲ್ಲಿ ಗುಟೆರೆಸ್ ಅವರು ಪ್ರತಿಷ್ಠಿತ 2023 ವಿಶ್ವಸಂಸ್ಥೆಯ ಮಿಲಿಟರಿ ಅಡ್ವೊಕೇಟ್ ಆಫ್ ದಿ ಇಯರ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ರಾಧಿಕಾ ಅವರು ಮಾರ್ಚ್ 2023 ರಿಂದ ಏಪ್ರಿಲ್ 2024 ರವರೆಗೆ ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯದ ಪೂರ್ವದಲ್ಲಿ ವಿಶ್ವಸಂಸ್ಥೆ ಎಂಗೇಜ್‌ಮೆಂಟ್ ಪ್ಲಟೂನ್‌ನ ಕಮಾಂಡರ್ ಆಗಿ ಸೇವೆ ಸಲ್ಲಿಸಿದ್ದಾರೆ. 1993 ರಲ್ಲಿ ಹಿಮಾಚಲ ಪ್ರದೇಶದಲ್ಲಿ ಜನಿಸಿದ ಅವರು ಎಂಟು ವರ್ಷಗಳ ಹಿಂದೆ ಭಾರತೀಯ ಸೇನೆಗೆ ಸೇರಿದ್ದರು. ಬಯೋಟೆಕ್ ಇಂಜಿನಿಯರ್ ಪದವೀಧರೆಯಾದ ಮತ್ತು ಐಐಟಿ ಬಾಂಬೆಯಿಂದ ಸ್ನಾತಕೋತ್ತರ ಪದವಿ ಪಡೆದು ಸಶಸ್ತ್ರ ಪಡೆಗಳಿಗೆ ಸೇರಲು ನಿರ್ಧರಿಸಿದರು.

ಅವರು ಮಾರ್ಚ್ 2023 ರಲ್ಲಿ ಭಾರತೀಯ ಕ್ಷಿಪ್ರ ನಿಯೋಜನೆ ಬೆಟಾಲಿಯನ್‌ನೊಂದಿಗೆ ಎಂಗೇಜ್‌ಮೆಂಟ್ ಪ್ಲಟೂನ್ ಕಮಾಂಡರ್ ಆಗಿ ನಿಯೋಜಿತರಾದರು, ಏಪ್ರಿಲ್ 2024 ರಲ್ಲಿ ಅವರ ಅಧಿಕಾರಾವಧಿಯನ್ನು ಪೂರ್ಣಗೊಳಿಸಿದರು. ದಕ್ಷಿಣ ಸುಡಾನ್‌ನಲ್ಲಿ ಓ ಮಿಷನ್‌ನಲ್ಲಿ ಸೇವೆ ಸಲ್ಲಿಸಿದ ಮತ್ತು 2019 ರ ವಿಶ್ವಸಂಸ್ಥೆಯ ಮಿಲಿಟರಿ ಅಡ್ವೊಕೇಟ್ ಆಫ್ ದಿ ಇಯರ್ ಪ್ರಶಸ್ತಿ ಪಡೆದ ಮೇಜರ್ ಸುಮನ್ ಗವಾನಿ ನಂತರ ಈ ಪ್ರತಿಷ್ಠಿತ ಪ್ರಶಸ್ತಿ ಗಳಿಸಿದ ಎರಡನೇ ಭಾರತೀಯ ಶಾಂತಿಪಾಲಕ ಮೇಜರ್ ಎನಿಸಿದ್ದಾರೆ.

ಮೇಜರ್ ಸೇನ್ ಅವರ ಸೇವೆಯನ್ನು ಅಭಿನಂದಿಸಿದ ಗುಟೆರೆಸ್ ಅವರು ನೈಜ ನಾಯಕಿ ಮತ್ತು ಎಲ್ಲರಿಗೂ ಮಾದರಿಯಾಗಿದ್ದಾರೆ. ಆಕೆಯ ಸೇವೆಯು ಒಟ್ಟಾರೆಯಾಗಿ ವಿಶ್ವಸಂಸ್ಥೆಗೆ ನಿಜವಾದ ಭಾಪುಮೂಡಿಸಿದೆ ಎಂದರು.

ಈ ಪ್ರಶಸ್ತಿಯು ನನಗೆ ವಿಶೇಷವಾಗಿದೆ. ಏಕೆಂದರೆ ಇದು ಡಿಆರ್‌ಸಿಯ ಸವಾಲಿನ ವಾತಾವರಣದಲ್ಲಿ ಕೆಲಸ ಮಾಡುವ ಎಲ್ಲಾ ಶಾಂತಿಪಾಲಕರ ಶ್ರಮಕ್ಕೆ ಮನ್ನಣೆ ನೀಡುತ್ತದೆ ಮತ್ತು ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತರಲು ಅತ್ಯುತ್ತಮ ಪ್ರಯತ್ನ ಮಾಡುತ್ತದೆ

-ಮೇಜರ್ ರಾಧಿಕಾ ಸೇನ್
ಭಾರತೀಯ ಮಹಿಳಾ ಶಾಂತಿ ಪಾಲಕಿ

ಚಂಡಮಾರುತದಿಂದ ಕಲ್ಲು ಕ್ವಾರಿ ಕುಸಿದು 10 ಜನ ಸಾವು

ಐಜ್ವಾಲ್: ರೆಮಾಲ್ ಚಂಡಮಾರುತದ ಪ್ರಭಾವದಿಂದ ಎಡೆಬಿಡದೆ ಸುರಿಯುತ್ತಿರುವ ಮಳೆಯ ನಡುವೆ ಮಂಗಳವಾರ ಬೆಳಿಗ್ಗೆ ಮಿಜೋರಾಂನ ಐಜ್ವಾಲ್ ಜಿಲ್ಲೆಯಲ್ಲಿ ಕಲ್ಲು ಕ್ವಾರಿಯೊಂದು ಕುಸಿದು ಹತ್ತು ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವರು ಕಾಣೆಯಾಗಿದ್ದಾರೆ. ಐಜ್ವಾಲ್ ಪಟ್ಟಣದ ದಕ್ಷಿಣ ಹೊರವಲಯದಲ್ಲಿರುವ ಮೆಲ್ತುಮ್ ಮತ್ತು ಹ್ಲಿಮೆನ್ ನಡುವಿನ ಪ್ರದೇಶದಲ್ಲಿ ಬೆಳಿಗ್ಗೆ 6 ಗಂಟೆಗೆ ಈ ಘಟನೆ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇದುವರೆಗೆ ಹತ್ತು ಮೃತದೇ

ಐಪಿಎಲ್‌ನಲ್ಲಿ ಮಹತ್ವದ ಬದಲಾವಣೆ

ಐಪಿಎಲ್ ಸೀಸನ್ 17 ಮುಕ್ತಾಯದ ಬೆನ್ನಲ್ಲೇ ಬಿಗ್ ಅಪ್ಡೇಟ್‌ವೊಂದು ಹೊರಬಿದ್ದಿದೆ. ಅದು ಕೂಡ ಐಪಿಎಲ್ ಸೀಸನ್ 18 ರಲ್ಲಿ ಮಹತ್ವದ ಬದಲಾವಣೆ ತರುವಂತಹ ಸುದ್ದಿ ಎಂಬುದು ವಿಶೇಷ. ಅಂದರೆ ಮುಂಬರುವ ಐಪಿಎಲ್ ಟೂರ್ನಿಯು 84 ಪಂದ್ಯಗಳನ್ನು ಒಳಗೊಂಡಿರಲಿದೆ. ಈವರೆಗೆ ಐಪಿಎಲ್‌ನಲ್ಲಿ ಪ್ಲೇಆಫ್ ಸೇರಿ ಒಟ್ಟು 74 ಪಂದ್ಯಗಳನ್ನಾಡಲಾಗುತ್ತಿತ್ತು. ಆದರೆ ಮುಂಬರುವ ಸೀಸನ್‌ಗಳಲ್ಲಿ ಹೆಚ್ಚುವರಿ 10 ಪಂದ್ಯಗಳು ನಡೆಯಲಿದೆ. ಈ ಮೂಲಕ ಒಟ್ಟು 84 ಪಂದ್ಯಗಳ ಟೂರ್ನಿಯನ್ನು ಆಯೋಜಿಸಲು ಬಿಸಿಸಿಐ ಪ್ಲ್ಯಾನ್ ರೂಪಿಸುತ್ತಿದೆ. ಅದರಂತೆ ಐಪಿಎಲ್ 2025 ಮತ್ತು 2026 ರಲ್ಲಿ 84 ಪಂದ್ಯಗಳನ್ನು ಆಡಿಸಲಾಗುತ್ತದೆ.

ಹಾಗೆಯೇ ಐಪಿಎಲ್ 2027 ರಲ್ಲಿ ಪಂದ್ಯಗಳ ಸಂಖ್ಯೆಯನ್ನು 94 ಕ್ಕೆ ಏರಿಸಲಿದ್ದಾರೆ. ಇದರಿಂದ 2027 ರಲ್ಲಿ ಮತ್ತೆ ಲೀಗ್ ಮಾದರಿಯಲ್ಲೇ ಟೂರ್ನಿ ನಡೆಯಲಿದೆ. ಪ್ರಸ್ತುತ ಐಪಿಎಲ್ ಅನ್ನು ರೌಂಡ್ ರಾಬಿನ್ ಮಾದರಿಯಲ್ಲಿ ಆಯೋಜಿಸಲಾಗುತ್ತಿದೆ. ಐಪಿಎಲ್ 2021 ರಲ್ಲಿ ಒಟ್ಟು 60 ಪಂದ್ಯಗಳನ್ನು ನಡೆಸಲಾಗಿತ್ತು.

ಕೋಟಿ ಸಂಭಾವನೆ ಪಡೆದವರ ಪ್ರದರ್ಶನ

ರೇಸಿಗೆ ಬಿದ್ದವರಂತೆ ಕೆಲವು ಆಟಗಾರರ ಮೇಲೆ ಕೋಟಿ ಕೋಟಿ ಸುರಿದ ಫ್ರಾಂಚೈಸಿಗಳು



ಕೋಲ್ಕತ್ತಾ ನೈಟ್ ರೈಡರ್ಸ್ ಗೆಲುವಿನೊಂದಿಗೆ ಐಪಿಎಲ್ 17ನೇ ಸೀಸನ್ ಅಂತ್ಯಗೊಂಡಿದೆ. ಆದರೆ ಈ ಸೀಸನ್ ಆರಂಭಕ್ಕೂ ಮುನ್ನ ನಡೆದಿದ್ದ ಮಿನಿ ಹರಾಜಿನಲ್ಲಿ ಎಲ್ಲಾ ಫ್ರಾಂಚೈಸಿಗಳು ರೇಸಿಗೆ ಬಿದ್ದವರಂತೆ ಕೆಲವು ಆಟಗಾರರ ಮೇಲೆ ಕೋಟಿ ಕೋಟಿ ಸುರಿದ ತಂಡಕ್ಕೆ ಸೇರಿಸಿಕೊಂಡಿದ್ದರು. ಅದರಲ್ಲಿ ಪ್ರಮುಖವಾಗಿ 10 ದುಬಾರಿ ಆಟಗಾರರ ಪ್ರದರ್ಶನ ಹೇಗಿತ್ತು ಎಂಬುದರ ವಿವರ ಇಲ್ಲಿದೆ.

ಕೋಲ್ಕತ್ತಾ ನೈಟ್ ರೈಡರ್ಸ್ ಐಪಿಎಲ್ 2024 ಹರಾಜಿನಲ್ಲಿ ಆಸ್ಟ್ರೇಲಿಯಾದ ಮಾರಕ ಬೌಲರ್ ಮಿಚೆಲ್ ಸ್ಟಾರ್ಕ್ ಅವರನ್ನು 24.75 ಕೋಟಿ ರೂ.ಗೆ ಖರೀದಿಸಿತ್ತು. ಈ ಸೀಸನ್ ಆರಂಭದಲ್ಲಿ ಸ್ಟಾರ್ಕ್ ತುಂಬಾ ದುಬಾರಿಯಾಗಿದ್ದರು. ಆದಾಗ್ಯೂ ನಿರ್ಣಾಯಕ ಪಂದ್ಯಗಳಲ್ಲಿ ತಮ್ಮ ಅನುಭವವನ್ನು ಧಾರೆ ಎರೆದ ಸ್ಟಾರ್ಕ್ ಕೆಕೆಆರ್ ಪರ 14 ಪಂದ್ಯಗಳಲ್ಲಿ ಸ್ಟಾರ್ಕ್ 17 ವಿಕೆಟ್ ಕಬಳಿಸಿ ತಾವು ಪಡೆದ ಹಣಕ್ಕೆ ನ್ಯಾಯ ಒದಗಿಸುವ ಕೆಲಸ ಮಾಡಿದರು. ಸನ್‌ರೈಸರ್ಸ್ ಹೈದರಾಬಾದ್ ತಂಡದ ಪ್ಯಾಟ್ ಕಮಿನ್ಸ್ ಅವರನ್ನು 20.75 ಕೋಟಿ ರೂ.ಗೆ ಖರೀದಿಸಿ ನಾಯಕತ್ವದ ಜವಾಬ್ದಾರಿ ನೀಡಿತ್ತು. ತಾವು ಪಡೆದ ಬೆಲೆಗೆ ನ್ಯಾಯ ಒದಗಿಸುವ ಕೆಲಸ ಮಾಡಿದ ಕಮ್ಮಿನ್ಸ್ ತಂಡವನ್ನು ಫೈನಲ್‌ಗೆ ಕರೆದೊಯ್ದರು. ಅಲ್ಲದೆ ಬೌಲಿಂಗ್‌ನಲ್ಲಿ 18 ವಿಕೆಟ್ಗಳನ್ನು ಪಡೆದರು. ಚೆನ್ನೈ ಸೂಪರ್ ಕಿಂಗ್ಸ್ 14 ಕೋಟಿ ರೂಪಾಯಿಗಳ ಬೃಹತ್ ಮೊತ್ತವನ್ನು ವ್ಯಯಿಸಿ ಡೇರಿಲ್ ಮಿಚೆಲ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿತ್ತು. ಈ ಸೀಸನ್‌ನಲ್ಲಿ ಆಡಿದ 13 ಪಂದ್ಯಗಳಲ್ಲಿ 142.60 ಸ್ಟ್ರೈಕ್ ರೇಟ್‌ನಲ್ಲಿ 318 ರನ್ ಬಾರಿಸಿದರು. ಇದರಲ್ಲಿ 2 ಅರ್ಧಶತಕಗಳು ಸೇರಿದ್ದವು.

ಪಂಜಾಬ್ ಕಿಂಗ್ಸ್, ಹರ್ಷಲ್ ಪಟೇಲ್‌ರನ್ನು 11.75 ಕೋಟಿ ರೂ.ಗೆ ಖರೀದಿಸಿತ್ತು. ಹರ್ಷಲ್ ಕೂಡ ತಮ್ಮ ಬೆಲೆಗೆ ನ್ಯಾಯ ಸಲ್ಲಿಸಿದ್ದು, 24 ವಿಕೆಟ್ ಕಬಳಿಸುವ ಮೂಲಕ ಪರ್ಪಲ್ ಕ್ಯಾಪ್ ಕೂಡ ಗೆದ್ದರು. ಕೆರಿಬಿಯನ್ ಆಟಗಾರ ಅಲ್ಜಾರಿ ಜೋಸೆಫ್ ಅವರನ್ನು ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ 11.5 ಕೋಟಿ ರೂ.ಗಳ ಬೃಹತ್ ಮೊತ್ತವನ್ನು ವ್ಯಯಿಸಿ ಖರೀದಿಸಿತ್ತು. ಆದರೆ, ಜೋಸೆಫ್ ತಾವು ಪಡೆದ ಬೆಲೆಗೆ ನ್ಯಾಯ ಒದಗಿಸಲು ಸಾಧ್ಯವಾಗಲಿಲ್ಲ. ಈ ಸೀಸನ್‌ನಲ್ಲಿ ಕೇವಲ ಮೂರು ಪಂದ್ಯಗಳಲ್ಲಿ ಆಡುವ ಅವಕಾಶವನ್ನು ಪಡೆದ ಅವರು ಕೇವಲ ಒಂದು ವಿಕೆಟ್ ಮಾತ್ರ ಪಡೆದರು.

ಐಪಿಎಲ್ 2024 ರ ಹರಾಜಿನಲ್ಲಿ, ಗುಜರಾತ್ ಟೈಟಾನ್ಸ್ ಈ ಆಸ್ಟ್ರೇಲಿಯಾದ ಬೌಲರ್‌ಗಾಗಿ 10 ಕೋಟಿ ರೂ. ವ್ಯಯಿಸಿತ್ತು. ಆದರೆ ನಿರಸ ಪ್ರದರ್ಶನ ನೀಡಿದ ಸ್ಪೆನ್ಸರ್ ಜಾನ್ಸನ್ ಕೇವಲ ನಾಲ್ಕು ವಿಕೆಟ್ ಪಡೆಯಲ್ಲಷ್ಟೇ ಶಕ್ತರಾದರು. ಚೆನ್ನೈ ಸೂಪರ್ ಕಿಂಗ್ಸ್ 8.4 ಕೋಟಿ ರೂ.ಗೆ ಅನ್ ಕ್ಯಾಪ್ಡ್ ಸಮೀರ್ ರಿಜ್ವಿಯನ್ನು ಖರೀದಿಸುವ ಮೂಲಕ ಎಲ್ಲಾರನ್ನು ಅಚ್ಚರಿಗೊಳಿಸಿತು. ಆದರೆ, ತಂಡದ ಮ್ಯಾನೇಜ್‌ಮೆಂಟ್‌ನ ಈ ವಿಶ್ವಾಸವನ್ನು ಉಳಿಸಿಕೊಳ್ಳುವಲ್ಲಿ ಯುವ ಬ್ಯಾಟ್ಸ್‌ಮನ್ ಯಶಸ್ವಿಯಾಗಲಿಲ್ಲ. ಆಡಿದ ಎಂಟು ಪಂದ್ಯಗಳಲ್ಲಿ ಅವರು ಕೇವಲ 51 ರನ್ ಮಾತ್ರ ಕಲೆಹಾಕಿದರು.

8 ಕೋಟಿ ರೂಗಳಿಗೆ ಪಂಜಾಬ್ ಕಿಂಗ್ಸ್ ತಂಡ ಸೇರಿಕೊಂಡಿದ್ದ ರಿಲೆ ರೂಸೋ, ತಮ್ಮ ಬೆಲೆಗೆ ನ್ಯಾಯ ಒದಗಿಸಿದರು. ಎಂಟು ಪಂದ್ಯಗಳಲ್ಲಿ ಆಡುವ ಅವಕಾಶ ಪಡೆದ ಅವರು 181.90 ಸ್ಟ್ರೈಕ್ ರೇಟ್‌ನಲ್ಲಿ 211 ರನ್ ಗಳಿಸಿದರು. ಶಾರುಖ್ ಖಾನ್ ಅವರನ್ನು ಐಪಿಎಲ್ 2024 ರ ಹರಾಜಿನಲ್ಲಿ ಗುಜರಾತ್ ಟೈಟಾನ್ಸ್ ತಂಡವು 7.4 ಕೋಟಿ ರೂ. ನೀಡಿ ಖರೀದಿಸಿತ್ತು. ಆದಾಗ್ಯೂ, ಈ ಸೀಸನ್‌ನಲ್ಲಿ ಏಳು ಪಂದ್ಯಗಳಲ್ಲಿ ಆಡುವ ಅವಕಾಶ ಪಡೆದ ಅವರು ಕೇವಲ 127 ರನ್ ಬಾರಿಸಲಷ್ಟೇ ಶಕ್ತರಾದರು. ರಾಜಸ್ಥಾನ್ ರಾಯಲ್ಸ್ ಕೆರಿಬಿಯನ್ ಬ್ಯಾಟ್ಸ್‌ಮನ್ ರೋವ್‌ಮನ್ ಪೊವೆಲ್ ಅವರನ್ನು 7.4 ಕೋಟಿ ರೂ.ಗೆ ತಂಡಕ್ಕೆ ಸೇರಿಸಿಕೊಂಡಿತ್ತು. ಆದರೆ, ತಂಡದ ಮ್ಯಾನೇಜ್‌ಮೆಂಟ್‌ನ ಲೆಕ್ಕಾಚಾರಕ್ಕೆ ತಕ್ಕಂತೆ ಆಡುವಲ್ಲಿ ಪೊವೆಲ್ ವಿಫಲರಾದರು. ಆಡಿದ ಒಂಬತ್ತು ಪಂದ್ಯಗಳಲ್ಲಿ ಪೊವೆಲ್ ಕೇವಲ 103 ರನ್

ಟಿ20 ವಿಶ್ವಕಪ್‌ನಿಂದ ಸ್ಟಾರ್ ಆಟಗಾರ ಔಟ್

ಟಿ20 ವಿಶ್ವಕಪ್‌ಗಾಗಿ ವೆಸ್ಟ್ ಇಂಡೀಸ್ ಬಲಿಷ್ಠ ಬಳಗವನ್ನು ಘೋಷಿಸಿದೆ. ಈ ಹಿಂದೆ ಪ್ರಕಟಿಸಲಾದ 15 ಸದಸ್ಯರ ತಂಡದಿಂದ ಓರ್ವ ಆಟಗಾರನನ್ನು ಕೈಬಿಡಲಾಗಿದ್ದು, ಅವರ ಬದಲಿಗೆ ವೇಗಿ ಒಬೆಡ್ ಮೆಕಾಯ್‌ಗೆ ತಂಡದಲ್ಲಿ ಸ್ಥಾನ ಕಲ್ಪಿಸಲಾಗಿದೆ. ಇದಕ್ಕೂ ಮುನ್ನ ವೆಸ್ಟ್ ಇಂಡೀಸ್ ಟಿ20 ವಿಶ್ವಕಪ್ ತಂಡದಲ್ಲಿ ಜೇಸನ್ ಹೋಲ್ಡರ್ ಸ್ಥಾನ ಪಡೆದಿದ್ದರು. ಇದರ ನಡುವೆ ಇಂಗ್ಲೆಂಡ್‌ನಲ್ಲಿ ನಡೆದ ಕೌಂಟಿ ಚಾಂಪಿಯನ್‌ಶಿಪ್ ಪಂದ್ಯದ ವೇಳೆ ಹೋಲ್ಡರ್ ಗಾಯಗೊಂಡಿದ್ದರು. ಇದೀಗ ಸಂಪೂರ್ಣ ಫಿಟ್‌ನೆಸ್ ಸಾಧಿಸಲು ವಿಫಲರಾಗಿರುವ ಹೋಲ್ಡರ್ ಟಿ20 ವಿಶ್ವಕಪ್ ಟೂರ್ನಿಯಿಂದ ಹೊರಗುಳಿದಿದ್ದಾರೆ.

ಇದರ ಬೆನ್ನಲ್ಲೇ 27 ವರ್ಷದ ಒಬೆಡ್ ಮೆಕಾಯ್ ಅವರನ್ನು ತಂಡಕ್ಕೆ ಕರೆಸಿಕೊಳ್ಳಲಾಗಿದೆ. ವೆಸ್ಟ್ ಇಂಡೀಸ್ ಪರ 34 ಟಿ20 ಪಂದ್ಯಗಳನ್ನಾಡಿರುವ ಮೆಕಾಯ್ ಈವರೆಗೆ 46 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಹಾಗೆಯೇ ಐಪಿಎಲ್‌ನಲ್ಲಿ 8 ಪಂದ್ಯಗಳನ್ನಾಡಿದ್ದು, ಈ ವೇಳೆ 11 ವಿಕೆಟ್ ಕಬಳಿಸುವಲ್ಲಿ ಯಶಸ್ವಿಯಾಗಿದ್ದರು. ಹೀಗಾಗಿಯೇ ಮೆಕಾಯ್ ಅವರಿಗೆ ವೆಸ್ಟ್ ಇಂಡೀಸ್ ಬಳಗದಲ್ಲಿ ಅವಕಾಶ ನೀಡಲಾಗಿದೆ.

ಐಪಿಎಲ್ ಹರಾಜಿಗೂ ಮುನ್ನ 8 ಆಟಗಾರರು ರಿಟೈನ್



ಈ ಬಾರಿ 8 ಆಟಗಾರರನ್ನು ಉಳಿಸಿಕೊಳ್ಳಲು ಅವಕಾಶ ನೀಡಬೇಕೆಂದು ಕೆಲ ಫ್ರಾಂಚೈಸಿಗಳು ಬಿಸಿಸಿಐಗೆ ಮನವಿ ಮಾಡಿದ್ದಾರೆ. ಅಂದರೆ 2022 ರಲ್ಲಿ ನಡೆದ ಮೆಗಾ ಹರಾಜಿನ ವೇಳೆ ಕೇವಲ 4 ಆಟಗಾರರನ್ನು ಮಾತ್ರ ರಿಟೈನ್ ಮಾಡಿಕೊಳ್ಳಲು ಅವಕಾಶ ನೀಡಲಾಗಿತ್ತು. ಅಲ್ಲದೆ ಈ ರಿಟೈನ್‌ಗಾಗಿ ಒಂದಷ್ಟು ಷರತ್ತುಗಳನ್ನು ವಿಧಿಸಿದ್ದರು. ಆದರೆ ಇದೀಗ ಕೆಲ ಐಪಿಎಲ್ ಫ್ರಾಂಚೈಸಿಗಳು 8 ಆಟಗಾರರ ರಿಟೈನ್‌ಗೆ ಬೇಡಿಕೆ ಇಟ್ಟಿದೆ. ಇದರಿಂದ ಒಂದು ತಂಡದ ಬ್ರ್ಯಾಂಡ್ ವ್ಯಾಲ್ಯೂ ಕಡಿಮೆಯಾಗುವುದಿಲ್ಲ ಎಂಬ ವಾದವನ್ನು ಫ್ರಾಂಚೈಸಿಗಳು ಮುಂದಿಟ್ಟಿದ್ದಾರೆ. ಆದರೆ ಮತ್ತೊಂಡೆದೆ ಕೆಲ ಫ್ರಾಂಚೈಸಿಗಳು ಈ ಬೇಡಿಕೆಗೆ ವಿರೋಧವನ್ನೂ ಸಹ ವ್ಯಕ್ತಪಡಿಸಿದ್ದಾರೆ. ಇದಕ್ಕೆ ಮುಖ್ಯ ಕಾರಣ, ಬಲಿಷ್ಠ ಎನಿಸಿಕೊಂಡಿರುವ ಕೆಲ ತಂಡಗಳು 8 ಆಟಗಾರರನ್ನು ಉಳಿಸಿಕೊಂಡರೆ, ಇತರೆ ತಂಡಗಳಿಗೆ ಅತ್ಯುತ್ತಮ ಆಟಗಾರರ ಆಯ್ಕೆ ಇರುವುದಿಲ್ಲ. ಉದಾಹರಣೆಗೆ ಹಾಲಿ ಚಾಂಪಿಯನ್ ಕೆಕೆಆರ್ ತಂಡ 8 ಆಟಗಾರರನ್ನು ಉಳಿಸಿಕೊಂಡರೆ, ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಂಡ ಬಹುತೇಕ ಆಟಗಾರರು ರಿಟೈನ್ ಆಗಲಿದ್ದಾರೆ. ಇನ್ನೊಂದೆಡೆ ಈ ಬಾರಿ ಕಳಪೆ ಪ್ರದರ್ಶನ ನೀಡಿದ ಪಂಜಾಬ್ ಕಿಂಗ್ಸ್, ಗುಜರಾತ್ ಟೈಟಾನ್ಸ್, ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿಗಳು ಮೆಗಾ ಹರಾಜಿನ ಮೂಲಕ ಹೊಸ ತಂಡಗಳನ್ನು ಕಟ್ಟುವ ಇರಾದೆಯಲ್ಲಿದೆ. ಆದರೆ ಇತ್ತ ಕೆಕೆಆರ್, ಎಸ್‌ಆರ್‌ಹೆಚ್, ಮುಂಬೈ ಇಂಡಿಯನ್ಸ್‌ನಂತಹ ಫ್ರಾಂಚೈಸಿಗಳು 8 ಪ್ರಮುಖ ಆಟಗಾರರನ್ನು ಉಳಿಸಿಕೊಂಡರೆ, ಮೆಗಾ ಹರಾಜಿನಲ್ಲಿ ಸ್ಟಾರ್ ಎನಿಸಿಕೊಳ್ಳುವ ಆಟಗಾರರು ಕಾಣಿಸಿಕೊಳ್ಳುವ ಸಾಧ್ಯತೆಯಿಲ್ಲ. ಹೀಗಾಗಿ 8 ಆಟಗಾರರ ರಿಟೈನ್‌ಗೆ ಕೆಲ ಫ್ರಾಂಚೈಸಿಗಳು ಆರಂಭದಲ್ಲೇ ವಿರೋಧ ವ್ಯಕ್ತಪಡಿಸಿವೆ.

ರಿಯಾನ್ ಪರಾಗ್ ಯೂಟ್ಯೂಬ್ ಸರ್ಚ್ ಲೀಕ್!



ರಾಜಸ್ಥಾನ್ ರಾಯಲ್ಸ್ ತಂಡದ ಯುವ ಸ್ಫೋಟಕ ದಾಂಡಿಗ ರಿಯಾನ್ ಪರಾಗ್ ಸಖತ್ ಸುದ್ದಿಯಲ್ಲಿದ್ದಾರೆ. ಆದರೆ ಅದು ಈ ಬಾರಿಯ ಐಪಿಎಲ್‌ನಲ್ಲಿನ ಪ್ರದರ್ಶನದಿಂದಾಗಿ ಅಲ್ಲ. ಬದಲಾಗಿ ಹಾಟ್ ಹುಡುಕಾಟದಿಂದ ಎಂಬುದು ವಿಶೇಷ.

ರಿಯಾನ್ ಪರಾಗ್ ತನ್ನ ಯೂಟ್ಯೂಬ್ ಖಾತೆಯಲ್ಲಿ ಬಾಲಿವುಡ್ ನಟಿಯರ ಹಾಟ್ ವಿಡಿಯೋಗಳನ್ನು ಹುಡುಕಾಡಿರುವುದು ಬಹಿರಂಗವಾಗಿದೆ. ನಟಿಯರಾದ ಅನನ್ಯಾ ಪಾಂಡೆ ಹಾಗೂ ಸಾರಾ ಅಲಿ ಖಾನ್ ಅವರ ಹಾಟ್ ವಿಡಿಯೋಗಳನ್ನು ಪರಾಗ್ ಸರ್ಚ್ ಮಾಡಿದ್ದಾರೆ. ರಿಯಾನ್ ಪರಾಗ್ ಯೂಟ್ಯೂಬ್ ಲೈವ್ ಸ್ಟ್ರೀಮಿಂಗ್ ಮಾಡಿದ್ದರು. ಇದಕ್ಕೂ ಮೊದಲು ಅವರು ನಟಿ ಅನನ್ಯಾ ಪಾಂಡೆ ಹಾಗೂ ಸಾರಾ ಅಲಿ ಖಾನ್ ಅವರ ಹಾಟ್ ವಿಡಿಯೋಗಳನ್ನು ಹುಡುಕಾಡಿದ್ದರು. ಆದರೆ ಈ ಸರ್ಚ್ ಹಿಸ್ಟರಿಯನ್ನು ಡಿಲೀಟ್ ಮಾಡದೇ ಪರಾಗ್ ಲೈವ್ ಸ್ಟ್ರೀಮಿಂಗ್‌ನಲ್ಲಿ ಕಾಣಿಸಿಕೊಂಡಿದ್ದರು. ಈ ವೇಳೆ ಅವರ ಸರ್ಚ್ ಹಿಸ್ಟರಿಯಲ್ಲಿ ನಟಿಮಣಿಯರ ಹೆಸರುಗಳೊಂದಿಗೆ ಹಾಟ್ ವಿಡಿಯೋಗಳನ್ನು ಹುಡುಕಾಡಿರುವುದು ಕಂಡು ಬಂದಿದೆ. ಇದೀಗ ರಿಯಾನ್ ಪರಾಗ್ ಅವರ ಸರ್ಚ್ ಹಿಸ್ಟರಿ ಸ್ಕ್ರೀನ್ ಶಾಟ್‌ಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು, ನಾನಾ ಪ್ರತಿಕ್ರಿಯೆಗಳ ಮೂಲಕ ಯುವ ಆಟಗಾರನನ್ನು ಟ್ರೋಲ್ ಮಾಡಲಾಗುತ್ತಿದೆ. ಈ ಬಾರಿಯ ಐಪಿಎಲ್‌ನಲ್ಲಿ ರಾಜಸ್ಥಾನ್ ರಾಯಲ್ಸ್ ಪರ ಮಧ್ಯಮ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ್ದ ರಿಯಾನ್ ಪರಾಗ್ ಅದ್ಭುತ ಪ್ರದರ್ಶನ ನೀಡಿದ್ದರು. 15 ಇನಿಂಗ್ಸ್‌ಗಳಲ್ಲಿ ಬ್ಯಾಟಿಂಗ್ ಮಾಡಿದ್ದ ಪರಾಗ್ 4 ಅರ್ಧಶತಕಗಳೊಂದಿಗೆ ಒಟ್ಟು 573 ರನ್ ಕಲೆಹಾಕಿದ್ದರು. ಈ ಅದ್ಭುತ ಪ್ರದರ್ಶನದಿಂದಾಗಿ ಈ ಬಾರಿ ರಾಜಸ್ಥಾನ್ ರಾಯಲ್ಸ್ ತಂಡ ಪ್ಲೇಆಫ್ ಪ್ರವೇಶಿಸಲು ಸಾಧ್ಯವಾಗಿತ್ತು. ಅಲ್ಲದೆ ಪರಾಗ್ ಅವರ ಪ್ರದರ್ಶನಕ್ಕೆ ಭಾರೀ ಮೆಚ್ಚುಗೆಗಳು ಕೂಡ ವ್ಯಕ್ತವಾಗಿದ್ದವು. ಆದರೀಗ ಯುವ ದಾಂಡಿಗ ಹಾಟ್ ಟಾಪಿಕ್‌ನಿಂದ ಸುದ್ದಿಯಾಗಿದ್ದು ಮಾತ್ರ ವಿಪರ್ಯಾಸ.

ಸಖತ್ ಹಾಟ್ ಮಗ

ಲವ್ ಲಿ ಸಿನಿಮಾದಲ್ಲಿ ಸೊಂಟ ಬಳುಕಿಸಿದ ಕಾವ್ಯ ಶೆಟ್ಟಿ

ಯೂಟ್ಯೂಬ್ ಭರ್ಜರಿ ವಿವ್ಸ್

ಸ್ಯಾಂಡಲ್‌ವುಡ್ ನಟ ವಸಿಷ್ಠ ಸಿಂಹ ನಟನೆಯ 'ಲವ್ ಲಿ' ಸಿನಿಮಾದಿಂದ ಸ್ಪೆಷಲ್ ಸಾಂಗ್‌ವೊಂದು ಇದೀಗ ರಿಲೀಸ್ ಆಗಿದೆ. 'ಚಿಕ್ಕಿಮಿಕ್ಕಾ' ಎಂಬ ಕಲರ್‌ಫುಲ್ ಸಾಂಗ್‌ಗೆ ಕಾವ್ಯಾ ಶೆಟ್ಟಿ ಮತ್ತು 'ಬಿಗ್ ಬಾಸ್' ಖ್ಯಾತಿಯ ನಂದು ಸೊಂಟ ಬಳುಕಿಸಿದ್ದಾರೆ.

'ಚಿಕ್ಕಿಮಿಕ್ಕಾ' ಎಂಬ ಹಾಡಿಗೆ ಮಸ್ತ್ ಆಗಿ ಕಾವ್ಯ ಶೆಟ್ಟಿ ಮತ್ತು ನಂದು ಹೆಜ್ಜೆ ಹಾಕಿದ್ದಾರೆ. ಸಾಂಗ್ ಕೂಡ ಕಲರ್‌ಫುಲ್ ಆಗಿ ಮೂಡಿ ಬಂದಿದ್ದು, ಇಬ್ಬರೂ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿದ್ದಾರೆ. ಈ ಸಾಂಗ್ ರಿಲೀಸ್ ಆಗುತ್ತಿದ್ದಂತೆ ಯೂಟ್ಯೂಬ್‌ನಲ್ಲಿ ಭರ್ಜರಿ ವಿವ್ಸ್ ಪಡೆಯುತ್ತಿದೆ. ಕೆಲದಿನಗಳ ಹಿಂದೆ ವಸಿಷ್ಠ ಸಿಂಹ ಹಾಡಿರುವ ಲವ್..ಲಿ ಸಿನಿಮಾದ ಹಾಡೊಂದನ್ನು ಚಿತ್ರತಂಡ ರಿಲೀಸ್ ಮಾಡಿತ್ತು. ಸಮುದ್ರ ತೀರದಲ್ಲಿ ಕುಳಿತು ನಾಯಕಿಯನ್ನು ಹಾಡಿನ ಮೂಲಕ ವಸಿಷ್ಠ ಬಣ್ಣಿಸಿದ್ದರು. ಚೇತನ್ ಕೇಶವ್ ಮತ್ತು ಪ್ರಜ್ವಲ್ ಕೆ.ಪಿ ಸಾಹಿತ್ಯ ಬರೆದಿದ್ದು, ಅನೂಪ್ ಸೀಳಿನ್ ಸಂಗೀತ ಸಂಯೋಜನೆ ಮಾಡಿರುವ ಹಾಡಿಗೆ ವಸಿಷ್ಠ ಸೊಗಸಾಗಿ ಹಾಡಿದ್ದರು. ರಿಲೀಸ್ ಆದ ಚಿತ್ರದ ಮೊದಲ ಹಾಡು ಇದಾಗಿದ್ದು, ಭರ್ಜರಿ ವಿವ್ಸ್ ಪಡೆದುಕೊಂಡಿತ್ತು.

ಅಂದಹಾಗೆ, ಈ ಚಿತ್ರದಲ್ಲಿ ವಸಿಷ್ಠ ಸಿಂಹಗೆ ನಾಯಕಿಯಾಗಿ ಸ್ಟೆಫಿ ಪಟೇಲ್ ನಟಿಸಿದ್ದಾರೆ. 'ಲವ್ ಲಿ' ಒಂದು ದಶಕದ ಹಿಂದೆ ನಡೆದ ನೈಜ ಘಟನೆಗಳನ್ನು ಆಧರಿಸಿದ ಕಮರ್ಷಿಯಲ್ ರೊಮ್ಯಾಂಟಿಕ್ ಪ್ರೇಮಕಥೆಯಾಗಿದೆ. ಇದು ಯುವಕನ ಜೀವನದ ಬಗ್ಗೆ ಮತ್ತು ಪ್ರೀತಿಯಲ್ಲಿ ಬಿದ್ದ ನಂತರ ಅದು ಹೇಗೆ ಬದಲಾಗುತ್ತದೆ ಎಂಬುದೇ ಈ ಸಿನಿಮಾ. ಅಂದಹಾಗೆ, ಈ ಚಿತ್ರವನ್ನು ರವೀಂದ್ರ ಕುಮಾರ್ ನಿರ್ಮಾಣ ಮಾಡಿದ್ದಾರೆ. ಸದ್ಯದಲ್ಲೇ ಸಿನಿಮಾ ರಿಲೀಸ್ ಆಗಲಿದೆ.

ಕರಾವಳಿಯವರು ಯಾರನ್ನೂ ಅಷ್ಟು ಬೇಗ ಇಷ್ಟಪಡಲ್ಲ



ಕರಾವಳಿ ಜನ ತುಂಬಾ ಸ್ವಾಭಿಮಾನಿಗಳು. ಇಲ್ಲಿಯ ಜನ ಅಷ್ಟು ಬೇಗ ಯಾರನ್ನೂ ಇಷ್ಟಪಡಲ್ಲ. ಆದರೂ ನಿಮ್ಮ ಮನಸಿನಲ್ಲಿ ನನಗೆ ಜಾಗ ಕೊಟ್ಟಿದ್ದೀರಿ ಎಂದು ನಟ ಕಿಚ್ಚ ಸುದೀಪ್ ಹೇಳಿದ್ದಾರೆ. ಯಕ್ಷಧ್ರುವ ಪಟ್ಲ ಫೌಂಡೇಶನ್ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ನಿರೂಪಕರು ಆಗಿನಿಂದ ನಮ್ಮ ತುಳುನಾಡಿಗೆ, ನಮ್ಮ ತುಳುನಾಡಿಗೆ ಸ್ವಾಗತ ಅಂತ ನಮ್ಮನ್ನು ಹೊರಗಿನವರು ಅಂತ ಮಾಡ್ತಿದ್ದಾರೆ. ತುಳುನಾಡು ನಮ್ಮ ಕರ್ನಾಟಕದಲ್ಲಿದೆ, ಕರ್ನಾಟಕ ನಮ್ಮ ಹೃದಯದಲ್ಲಿದೆ ತಾನೇ. ಮತ್ತೆ ಮಾತ್ ಮಧ್ಯೆ ಹೆಳ್ತಾರೆ ನಾವು ಅರ್ಧ ಈ ಕಡೆಯವರು ಅಂತ ಎಂದು ಕಿಚಾಯಿಸಿದರು. ನನ್ನ ಅಪ್ಪಂಗೆ ಕರ್ನಾಟಕದ ಕರಾವಳಿ ಹುಡುಗಿನೇ ಇಷ್ಟ ಆಗಿದ್ದು. ಕರಾವಳಿ ಜನ ತುಂಬ ಸ್ವಾಭಿಮಾನಿಗಳು. ಇಲ್ಲಿಯ ಜನ ಅಷ್ಟು ಬೇಗ ಯಾರನ್ನು ಇಷ್ಟಪಡಲ್ಲ, ಅದ್ರು ನಿಮ್ಮ ಮನಸ್ಸಿನಲ್ಲಿ ನಂಗೆ ಜಾಗ ಕೊಟ್ಟಿದ್ದೀರಿ. ನಾನು ಗೌರವ ಪಡೆಯಲು ಬಂದಿಲ್ಲ. ನಿಮ್ಮ ಪ್ರೀತಿಗೆ ಬಂದಿದ್ದೇನೆ. ನನ್ನ ತಾಯಿ ಕರಾವಳಿಯವರು. ಅವರು ಚೆನ್ನಾಗಿ ತುಳು ಮಾತಾಡ್ತಾರೆ. ನನಗೆ ತುಳು ಅಷ್ಟೊಂದು ಬರಲ್ಲ ಎಂದರು. ಕನ್ನಡ ಚಿತ್ರರಂ